ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 228

5–3–2025 ಬುಧವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 228

## ಇಂದು ದಾವಿವಿಯಲ್ಲಿ ಮಹಿಳಾ ದಿನಾಚರಣೆ

**ದಾವಣಗೆರೆ:** ದಾವಣಗೆರೆ ವಿಶ್ವವಿದ್ಯಾನಿಲಯದಿಂದ ಮಾರ್ಚ್ 5ರಂದು ಬೆಳಿಗ್ಗೆ 10.30 ಕ್ಕೆ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ವಿಶ್ವವಿದ್ಯಾನಿಲಯದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ನಟಿ ಅದಿತಿ ಪ್ರಭುದೇವ, ಮಹಿಳಾ ಉದ್ಯಮಿ ಸರೋಜಾ ಎನ್ ಪಾಟೀಲ್, ಡಿಜಿಟಲ್ ಕಂಟೆಂಟ್ ಕ್ರಿಯೇಟರ್ ಗಾಯತ್ರಿ ಪಾಲ್ಗೊಳ್ಳಲಿದ್ದಾರೆ. ವಿಶ್ವವಿದ್ಯಾನಿಲಯದ ಉಪಕುಲಪತಿ ಪ್ರೊ.ಬಿ.ಡಿ ಕುಂಬಾರ್, ಕುಲಸಚಿವ ಪ್ರೊ. ಆರ್. ಶಶಿಧರ್, ಹಿರಿಯ ಪ್ರಾಧ್ಯಾಪಕ ಜೆ.ಕೆ ರಾಜು, ಇವೆಂಟ್ ಕೋ ಆರ್ಡಿನೇಟರ್ ಮತ್ತು ಸಹ ಪ್ರಾಧ್ಯಾಪಕಿ ಡಾ. ಆರ್ ಸುನೀತ ಉಪಸ್ಥಿತರಿರುವರು.

## ಜಪಾನ್‌ನ ಕಾಗೋಶಿಮಾ ವಿವಿಯ ವಿಚಾರ ಸಂಕಿರಣಕ್ಕೆ ಕನ್ನಡಿಗನಿಗೆ ಆಹ್ವಾನ

**ದಾವಣಗೆರೆ:** ಡಾ. ಸಿ.ಎಂ. ರವಿಕುಮಾರ್ ಅವರ 'ಪ್ಯಾಟಿಕ್ ಬಿಹೇವಿಯರ್ ಆಫ್ ರೀನ್ ಪೋರ್ಸ್ ಅಂಡ್ ಅನ್–ರಿಇನ್‌ಪೋರ್ಸ್ ಜಿಜಿಬಿಎಸ್ ಬೇಸ್ಡ್ ಕಾಂಕ್ರೀಟ್ ಬೀಮ್ಸ್' ಸಂಶೋಧನಾ ಪ್ರಬಂಧದ ಮೌಖಿಕ ಮುಖಾಮುಖಿ ಪ್ರಸ್ತುತಿಗಾಗಿ ಜಪಾನ್ ದೇಶದ ಕಾಗೋಶಿಮಾ ವಿಶ್ವವಿದ್ಯಾನಿಲಯವು ಅಂತರಾಷ್ಟ್ರೀಯ ಸಹಕಾರಿ ಮಾಹಿತಿಯ ವಿಚಾರ ಸಂಕಿರಣದಲ್ಲಿ ಭಾಗವಹಿಸಲು ರವಿಕುಮಾರ್ ಅವರನ್ನು ಆಹ್ವಾನಿಸಿದೆ.

ಡಾಸಿ.ಎಂ ರವಿಕುಮಾರ್ ಅವರೊಂದಿಗೆ ಇಬ್ರಾಹಿಂ ಕಲಿಲ್ ಹಾಗೂ ಡಾ.ಹೆಚ್. ಈರಮ್ಮ ಕೂಡ ಸಹ ಲೇಖಕರಾಗಿದ್ದಾರೆ. ಈ ಅಂತರಾಷ್ಟ್ರೀಯ ಸಂಶೋಧನಾ ಪರಿಷತ್‌ನಲ್ಲಿ ಭಾಗವಹಿಸಲು ಎಲ್ಲಾ ಪ್ರತಿನಿಧಿಗಳಿಗೆ ಕಾಗೋಶಿಮಾ ವಿಶ್ವವಿದ್ಯಾಲಯ ವಸತಿ ವ್ಯವಸ್ಥೆ ಒದಗಿಸಲಿದ್ದು, ವಿದೇಶಿ ಪ್ರತಿನಿಧಿಗಳಿಗೆ ಅಗತ್ಯವಿರುವ ವೀಸಾ ಪ್ರಕ್ರಿಯೆಗೂ ಸಹಾಯ ಮಾಡಿದೆ.

## ಕೋಡಿಹಳ್ಳಿಯಲ್ಲಿ ಪ್ರತಿಭಟನೆ

**ದಾವಣಗೆರೆ:** ತಾಲ್ಲೂಕಿನ ಕೋಡಿಹಳ್ಳಿ ಗ್ರಾಮ ಹಾಗೂ ಸುತ್ತುಮುತ್ತಲಿನ ಗ್ರಾಮಗಳಿಗೆ ಚಾನಲ್ ನೀರು ಹರಿಸಲಾಗಿದ್ದರೂ ಕೂಡ ಇದುವರೆಗೂ ಕೊನೇ ಭಾಗದ ಗ್ರಾಮಗಳಿಗೆ ನೀರು ತಲುಪದೇ ಇದುರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕು ಘಟಕದಿಂದ ಮಾ.6ರಂದು ಬೆಳಿಗ್ಗೆ 10:30ಕ್ಕೆ ಕೋಡಿಹಳ್ಳಿಯಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

## ನಗದು ಬದಲು ಮಾರ್ಚ್ ಮಾಹೆಯಿಂದ ಅಕ್ಕಿ ವಿತರಣೆ

**ಚಿಕ್ಕಮಗಳೂರು: ಮಾ. 04:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ಎಎವೈ ಮತ್ತು ಪಿಹೆಚ್‌ಹೆಚ್ ಫಲಾನುಭವಿಗಳಿಗೆ ಪ್ರಸ್ತುತ ನೇರ ನಗದು ವರ್ಗಾವಣೆ (ಡಿ.ಬಿ.ಟಿ) ಮುಖಾಂತರ ಹಣವನ್ನು ವರ್ಗಾಯಿಸುವ ಪ್ರಕ್ರಿಯೆಯ ಬದಲಾಗಿ ಫೆಬ್ರವರಿ 2025ರ ಮಾಹೆಯಿಂದ ಜಾರಿಗೆ ಬರುವಂತೆ 5 ಕೆ.ಜಿ. ಅಕ್ಕಿಯನ್ನು ಸಾರ್ವಜನಿಕ ವಿತರಣಾ ಪದ್ಧತಿಯಡಿ ಮಾರ್ಚ್ 2025ರ ಮಾಹೆಯ ಪಡಿತರ ವಿತರಣೆಯೊಂದಿಗೆ ಸೇರಿಸಿ ವಿತರಿಸಲು ಸರ್ಕಾರದಿಂದ ಆದೇಶಿಸಲಾಗಿದೆ.

ಅಂತ್ಯೋದಯ (ಎಎವೈ) ಕಾರ್ಡಿಗೆ ಕೇಂದ್ರದಿಂದ 3 ಸದಸ್ಯರ ವರೆಗಿನ ಪಡಿತರ ಚೀಟಿಗೆ 35 ಕೆ.ಜಿ ಅಕ್ಕಿ, ರಾಜ್ಯದಿಂದ 4 ಸದಸ್ಯರ ಮೇಲ್ಪಟ್ಟ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 10 ಕೆ.ಜಿ. ಅಕ್ಕಿ, ಆದ್ಯತಾ (ಪಿಹೆಚ್‌ಹೆಚ್) ಕಾರ್ಡಿಗೆ ಕೇಂದ್ರದಿಂದ ಪ್ರತಿ ಸದಸ್ಯರಿಗೆ 5 ಕೆ.ಜಿ ಅಕ್ಕಿ, ರಾಜ್ಯದಿಂದ ಪ್ರತಿ ಸದಸ್ಯರಿಗೆ 10 ಕೆ.ಜಿ. ಅಕ್ಕಿ ವಿತರಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಐಸಿಎಂಆರ್ ಪ್ರಾಜೆಕ್ಟ್ ಕುರಿತು ಕಾರ್ಯಾಗಾರ

**ಚಿತ್ರದುರ್ಗ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಇದೇ ಮಾರ್ಚ್ 05ರಂದು ಬೆಳಿಗ್ಗೆ 10ಕ್ಕೆ ನಗರದ ಹೋಟೆಲ್ ಐಶ್ವರ್ಯ ಪೋರ್ಟ್‌ನಲ್ಲಿ ಐಸಿಎಂಆರ್ ಕಾರ್ ಪ್ರಾಜೆಕ್ಟ್ ಕುರಿತು ಕಾರ್ಯಾಗಾರ ಆಯೋಜಿಸಲಾಗಿದೆ.

ಕಾರ್ಯಾಗಾರದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ತಿಳಿಸಿದ್ದಾರೆ.

## ಬಳ್ಳಾರಿಯಲ್ಲಿ ಹೆಚ್ಚಿದ ಹಕ್ಕಿ ಜ್ವರ ಭೀತಿ: ಒಂದೇ ಫಾರಂನಲ್ಲಿ 10,000 ಕೋಳಿಗಳ ಸಾವು



**ಬಳ್ಳಾರಿ:** H5N1 ವೈರಸ್ ಪರಿಣಾಮ ಬಳ್ಳಾರಿ ಜಿಲ್ಲೆಯ ಕೋಳಿ ಸಾಕಣೆ ಕೇಂದ್ರಗಳಲ್ಲಿ ಸುಮಾರು 10,000 ಕೋಳಿಗಳು ಸಾವನ್ನಪ್ಪಿದ್ದು, ಈ ಬೆಳವಣಿಗೆ ಜಿಲ್ಲೆಯಲ್ಲಿ ಹಕ್ಕಿ ಜ್ವರ ಕುರಿತ ಆತಂಕ ಹೆಚ್ಚಾಗುವಂತೆ ಮಾಡಿದೆ.

ಕುರೇಕೊಪ್ಪ ಗ್ರಾಮದ ಸರ್ಕಾರಿ ಕೋಳಿ ಸಾಕಣೆ ಕೇಂದ್ರದಲ್ಲಿ 2,400 ಕೋಳಿಗಳು ಸಾವನ್ನಪ್ಪಿವೆ. ಇದರ ಮಾದರಿಗಳನ್ನು ಮಧ್ಯಪ್ರದೇಶ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು. ವರದಿಯಲ್ಲಿ ಊ5ಓ1 ಇರುವಿಕೆ ದೃಢಪಟ್ಟಿತ್ತು.

ಬಳಿಕ ಫೆಬ್ರವರಿ 26 ರಂದು, ಕಪ್ಪಗಲ್ಲು ಕೋಳಿ ಸಾಕಣೆ ಕೇಂದ್ರದಲ್ಲಿ 8,000 ಕೋಳಿಗಳು ಒಮ್ಮೆಲೆ ಸಾವನ್ನಪ್ಪಿವೆ, ಕೋಳಿಗಳು ಹಕ್ಕಿ ಜ್ವರದಿಂದಲೇ ಮೃತಪಟ್ಟಿರುವುದು ದೃಢಪಟ್ಟಿದೆ ಎಂದು ಬಳ್ಳಾರಿ ಉಪ ಆಯುಕ್ತ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದ್ದಾರೆ.

ಪ್ರಸ್ತುತದ ಪರಿಸ್ಥಿತಿಯಲ್ಲಿ ಕೋಳಿಗಳನ್ನು ನಿರ್ವಹಿಸುವ ಕುರಿತು ಕೋಳಿ ಸಾಕಾಣೆಗಾರರಿಗೆ ತರಬೇತಿ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ, ಆಂಧ್ರಪ್ರದೇಶ ಗಡಿಯಲ್ಲಿ ಕಟ್ಟೆಚ್ಚರ ವಹಿಸಲಾಗಿದೆ ಎಂದು ತಿಳಿಸಿದ್ದಾರೆ.

### ವಿಧಾನಸಭೆಯಲ್ಲಿ ನಟ್ಟು ಬೋಲ್ಟ್ ಸದ್ದು

# ನಮ್ಮನ್ನು ಟಿವಿಯಲ್ಲಿ ತೋರಿಸುತ್ತಿಲ್ಲ ಎಂದು ಬಿಜೆಪಿ ಗಲಾಟೆ



**ಬೆಂಗಳೂರು:** ವಿಧಾನಸಭೆ ಕಲಾಪದಲ್ಲೂ ನಟ್ಟು ಬೋಲ್ಟ್ ಸದ್ದು ಮಾಡಿದ್ದು, ಪ್ರತಿಪಕ್ಷಗಳ ಸದಸ್ಯರು ಮಾತನಾಡುವಾಗ ನಮ್ಮನ್ನು ಟಿವಿಯಲ್ಲಿ ತೋರಿಸುತ್ತಿಲ್ಲ ಎಂದು ಆರೋಪಿಸಿ ಮಂಗಳವಾರ ಬಿಜೆಪಿ ಕೋಲಾಹಲ ಸೃಷ್ಟಿಸಿತು.

ಕಲಾಪ ವರದಿಯ ಸಮಯದಲ್ಲಿ, ವಿರೋಧ ಪಕ್ಷದ ಶಾಸಕರು ಮಾತನಾಡುವಾಗಲೆಲ್ಲಾ ಕ್ಯಾಮೆರಾಗಳು ಸ್ಪೀಕರ್ ಮೇಲೆ ಕೇಂದ್ರೀಕರಿಸುತ್ತಿವೆ. ಆದರೆ ಆಡಳಿತ ಪಕ್ಷದ ಶಾಸಕರು ಅಥವಾ ಸಚಿವರು ಮಾತನಾಡುವಾಗ ಹೀಗೆ ಆಗುವುದಿಲ್ಲ ಎಂದು ವಿಪಕ್ಷ ಉಪ ನಾಯಕ ಅರವಿಂದ ಬೆಲ್ಲದ ಆಕ್ಷೇಪ ವ್ಯಕ್ತಪಡಿಸಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಕರ್ನಾಟಕ ಲೋಕಸೇವಾ ಆಯೋಗದಲ್ಲಿ (ಕೆಪಿಎಸ್‌ಸಿ) ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ಚರ್ಚೆಗೆ ಒತ್ತಾಯಿಸಿದಾಗ, ಅರವಿಂದ್ ಬೆಲ್ಲದ್ ಅವರು, ಅಶೋಕ್ ಅವರನ್ನು ಟಿವಿಯಲ್ಲಿ ತೋರಿಸುತ್ತಿಲ್ಲ ಎಂದು ಸ್ಪೀಕರ್‌ಗೆ ತಿಳಿಸಿದರು. ವಿರೋಧ ಪಕ್ಷದ ಸದಸ್ಯರನ್ನು ತೋರಿಸದಂತೆ ಸೂಚನೆ ನೀಡಲಾಗಿದೆಯೇ? ಎಂದು ಪ್ರಶ್ನಿಸಿದ ಬೆಲ್ಲದ್, "ಇಡೀ ಸದನವನ್ನು ತೋರಿಸಲಾಗಿದೆ, ಆಡಳಿತ ಪಕ್ಷ ಮತ್ತು ಮಂತ್ರಿಗಳನ್ನು ತೋರಿಸಲಾಗಿದೆ, ಅಧ್ಯಕ್ಷರು ಮತ್ತು ಸ್ಪೀಕರ್ ಅವರನ್ನು ಸಹ ತೋರಿಸಲಾಗಿದೆ. ಆದರೆ ವಿರೋಧ ಪಕ್ಷದ ನಾಯಕ ಮಾತನಾಡುವಾಗ ಅವರನ್ನು ತೋರಿಸುತ್ತಿಲ್ಲ ಎಂದರು.

ಈ ವೇಳೆ ಬೆಲ್ಲದ್ ಅವರಿಗೆ ಸಾಥ್ ನೀಡಿದ ಆರ್ ಅಶೋಕ್, ನಾವು ಮಾತನಾಡುವಾಗ ಟಿವಿಯಲ್ಲಿ ನಮ್ಮನ್ನು ತೋರಿಸೋದೆ ಇಲ್ಲ. ಪ್ರತಿಭಟನೆ ಮಾಡುವಾಗಲೂ ನಮ್ಮನ್ನು ತೋರಿಸಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇದಕ್ಕೆ ಪ್ರತಿಕ್ರಿಯೆ ನೀಡಿದ ಸ್ಪೀಕರ್ ಯು.ಟಿ ಖಾದರ್ ಅವರು, ಯಾರೂ ನಿಮ್ಮನ್ನು ತೋರಿಸಬಾರದು ಎಂದು ಸೂಚಿಸಿಲ್ಲ. ತಾಂತ್ರಿಕ ಸಮಸ್ಯೆ ಇರಬಹುದು. ಅದನ್ನು ಸರಿಪಡಿಸಲಾಗುವುದು ಎಂದರು. ಅಲ್ಲದೆ, ಕಾರ್ಯದರ್ಶಿಯನ್ನು ಕರೆದು ಪರಿಶೀಲನೆ ನಡೆಸಲು ಸೂಚನೆ ನೀಡಿ–ದರು. ಎಚ್.ಕೆ. ಪಾಟೀಲ್ ಮಾತನಾಡುವಾಗ ಟಿವಿಯಲ್ಲಿ ತೋರಿಸಲಾಗ್ತಿದೆ. ಆದರೆ ವಿರೋಧ ಪಕ್ಷದ ಸದಸ್ಯರು ಮಾತನಾಡುವ ತೋರಿಸುತ್ತಿಲ್ಲ ಎಂದು ಬಿಜೆಪಿ ಸದಸ್ಯರು ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ, ಮೊದಲು ಬೋಲ್ಟ್ ನೆಟ್ಟು ಸರಿ ಮಾಡಿ ಎಂದು ಬಿಜೆಪಿ ಸದಸ್ಯ ಸುನೀಲ್ ಕುಮಾರ್ ಟಾಂಗ್ ಕೊಟ್ಟರು.

ಕೆಲವು ಸದಸ್ಯರು ಘೋಷಣೆ ಕೂಗಿ ಆಕ್ಷೇಪ ವ್ಯಕ್ತಪಡಿಸಿದರು. ಬಿಜೆಪಿ ಸದಸ್ಯರ ಆರೋಪವನ್ನು ನಿರಾಕರಿಸಿದ ಕಾನೂನು ಸಚಿವ ಎಚ್ ಕೆ ಪಾಟೀಲ್ "ನಮ್ಮ ಅಧ್ಯಕ್ಷರು ಇಂತಹ ಸೂಚನೆ ಕೊಡಲು ಸಾಧ್ಯವಿಲ್ಲ. ಅದನ್ನು ಸರಿ ಮಾಡಿ ಎಂದು ಸೂಚನೆ ಕೊಡುತ್ತೇವೆ" ಎಂದರು.

ಇದು ತಾಂತ್ರಿಕ ಸಮಸ್ಯೆ ಅಲ್ಲ, ಬದಲಾಗಿ ಸೂಚನೆ ಕೊಟ್ಟ ಕಾರಣದಿಂದ ಹೀಗಾಗಿದೆ ಎಂದು ಆರ್ ಅಶೋಕ್ ಕಿಡಿಕಾರಿದರು.

ವಿಪಕ್ಷ ಸದಸ್ಯರನ್ನು ತೋರಿಸುವುದರ ಮೇಲೆ ಉದ್ದೇಶಪೂರ್ವಕವಾಗಿ ನಿಷೇಧವಿದೆಯೇ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪ್ರಶ್ನಿಸಿದರು. ಈ ಹಂತದಲ್ಲಿ, ಸಚಿವ ಪ್ರಿಯಾಂಕ್ ಖರ್ಗೆ ಮಧ್ಯಪ್ರವೇಶಿಸಿ, ವಿರೋಧ ಪಕ್ಷದ ಭಾಷಣಕಾರರನ್ನು ತೋರಿಸದಿರುವ ಅಭ್ಯಾಸವನ್ನು ಮೊದಲು ಬಿಜೆಪಿ ಆಳ್ವಿಕೆಯಲ್ಲಿ ಸಂಸತ್ತಿನಲ್ಲಿ ಪರಿಚಯಿಸಲಾಯಿತು ಮತ್ತು ನಂತರ ಮಾಜಿ ಸ್ಪೀಕರ್ ಕಾಗೇರಿ ಅವರು ಬಿಜೆಪಿ ಅಧಿಕಾರಾವಧಿಯಲ್ಲಿ ವಿಧಾನಸಭೆಯಲ್ಲಿ ಅದನ್ನು ಜಾರಿಗೆ ತಂದರು ಎಂದು ಆರೋಪಿಸಿದರು.

ಇದು ಆಡಳಿತ ಮತ್ತು ವಿರೋಧ ಪಕ್ಷದ ಸದಸ್ಯರ ನಡುವೆ ತೀವ್ರ ವಾಗ್ವಾದಕ್ಕೆ ಕಾರಣವಾಯಿತು. ಅಂತಿಮವಾಗಿ ಸ್ಪೀಕರ್ ಸದನವನ್ನು ಹತ್ತು ನಿಮಿಷಗಳ ಕಾಲ ಮುಂದೂಡಿದರು.

ಕಲಾಪ ಪುನರಾರಂಭವಾದಾಗ, ಸ್ಪೀಕರ್ ಖಾದರ್ ಅವರು, ಈ ಸಮಸ್ಯೆಗೆ ತಾಂತ್ರಿಕ ಕಾರಣ ಎಂದು ಹೇಳಿದರು ಮತ್ತು ಸಾಧ್ಯವಾದಷ್ಟು ಬೇಗ ಅದನ್ನು ಸರಿಪಡಿಸಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ಸದಸ್ಯರಿಗೆ ಭರವಸೆ ನೀಡಿದರು.

### ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಜಿ.ಎಂ. ಸ್ಪಷ್ಟನೆ

# ಕೋಳಿ ಶೀತ ಜ್ವರಕ್ಕೆ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ, ಮುನೆಚ್ಚರಿಕೆ ಕ್ರಮವಾಗಿ ಎಸ್‌ಓಪಿ ಅಳವಡಿಕೆ



**ದಾವಣಗೆರೆ :** ಕೋಳಿಶೀತ ಜ್ವರ(ಹಕ್ಕಿ ಜ್ವರ) ವು ಹೆಚ್5ಎನ್1 ವೈರಸ್ ನಿಂದ ಪಕ್ಷಿಗಳಿಗೆ ಹರಡುವ ಖಾಯಿಲೆಯಾಗಿದ್ದು, ಮನುಷ್ಯರಿಂದ ಮನುಷ್ಯರಿಗೆ ಸಾಂಕ್ರಮಿಕವಾಗಿ ಹರಡುವುದಿಲ್ಲ. ಹಾಗಾಗಿ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ, ಆದರೆ ಮುನ್ನೆಚ್ಚರಿಕೆ ಕ್ರಮವಾಗಿ ಎಸ್‌ಓಪಿ ಅಳವಡಿಸಲು ಕ್ರಮವಹಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಜಿ.ಎಂ ಅವರು ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕೋಳಿಶೀತ ಜ್ವರಕ್ಕೆ ಸಂಬಂಧಿಸಿದಂತೆ ಏರ್ಪಡಿಸಿದ್ದ ಅಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಾಮಾನ್ಯವಾಗಿ ಶೀಥಲ ಪ್ರದೇಶದ ವಲಸೆ ಹಕ್ಕಿಗಳು ವಂಶಾಭಿವೃದ್ಧಿಗಾಗಿ ಬಂದಾಗ ಹಿಕ್ಕೆ, ಪುಕ್ಕ ಹಾಗೂ ಬಾಯಿ ಮತ್ತು ಕಣ್ಣಿನಿಂದ ಹೊರ ಬರುವ ಸ್ರವಿಕೆಯಿಂದ ಕಾಯಿಲೆ ಹರಡು ಸಂಭವವಿದ್ದು, ಪಕ್ಷಿಗಳಿಗೆ ರೋಗವು ಹರಡುತ್ತದೆ ಎಂದು ತಿಳಿಸಿದರು.


ಇದು ಬಳ್ಳಾರಿ ಜಿಲ್ಲೆಯಯಲ್ಲಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿನ ಕುಕ್ಕುಟ ಸಂವರ್ಧನಾ ಕೇಂದ್ರದಲ್ಲಿ ಸಾಕಾಣಿಕೆ ಮಾಡಿದ ಅಸಿಲ್ ಮತ್ತು ಕಾವೇರಿ ತಳಿಯ ಕೋಳಿಗಳಿಗೆ ಫೆಬ್ರವರಿ 23 ರಂದು ಕೋಳಿ ಶೀತ ಜ್ವರ ರೋಗದ ಲಕ್ಷಣ ಕಂಡುಬಂದು ಕೆಲವು ಕೋಳಿಗಳು ಮರಣ ಹೊಂದಿದ್ದವು. ಪರೀಕ್ಷೆಗಾಗಿ ಭೋಪಾಲ್‌ನ ರಾಷ್ಟ್ರೀಯ ಹೈ ಸೆಕ್ಯುರಿಟಿ ಪ್ರಾಣಿ ರೋಗಗಳ ಪ್ರಯೋಗಾಲಯಕ್ಕೆ ಕಳುಹಿಸಿದ್ದು ಸಂಸ್ಥೆಯು ಕೋಳಿಶೀತ ಜ್ವರವೆಂದು ದೃಢೀಕರಿಸಿರುತ್ತದೆ. ಇದಕ್ಕಾಗಿ ಬಳ್ಳಾರಿಯಿಂದ ಹಾಗೂ ಚಿಕ್ಕಬಳ್ಳಾಪುರದಿಂದ ದಾವಣಗೆರೆಗೆ ಸಾಗಾಣಿಕೆಯಾಗುವ ಕೋಳಿಗಳನ್ನು ನಿರ್ಬಂಧಿಸಲು ಚೆಕ್‌ಪೋಸ್ಟ್ ಗಳನ್ನು ಸ್ಥಾಪನೆ ಮಾಡಿ ಸಂಪೂರ್ಣ ನಿಗಾವಹಿಸಲು ಮತ್ತು ಎಲ್ಲಿಯಾದರೂ ಹಕ್ಕಿಗಳು ಮರಣ ಹೊಂದಿದಲ್ಲಿ, ತಕ್ಷಣ ಮಾಹಿತಿ ನೀಡಲು ಸಹಾಯವಾಣಿ ಸ್ಥಾಪಿಸಲಾಗುತ್ತಿದೆ ಎಂದರು.

**ಬೇಯಿಸಿ ನಂತರ ಸೇವಿಸಿ:** ಸಾರ್ವಜನಿಕರು ಮಾಂಸ ಮತ್ತು ಮೊಟ್ಟೆಗಳನ್ನು 70 ಡಿಗ್ರಿ ಅಧಿಕ ಉಷ್ಣಾಂಶದಲ್ಲಿ ಕನಿಷ್ಠ 30 ನಿಮಿಷ ಬೇಯಿಸಿದಾಗ ವೈರಾಣು ನಾಶಗೊಳ್ಳುತ್ತದೆ. ಹಾಗಾಗಿ ಸಾರ್ವಜನಿಕರು ಮಾಂಸ ಮತ್ತು ಮೊಟ್ಟೆಗಳನ್ನು ಚೆನ್ನಾಗಿ ಬೇಯಿಸಿದ ನಂತರ ಸೇವನೆ ಮಾಡಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಒಟ್ಟು 172 ಮಾಂಸದ ಕೋಳಿ ಫಾರಂಗಳಲ್ಲಿ 97 ಕಾರ್ಯನಿರ್ವಹಿಸುತ್ತಿದ್ದು ಇವುಗಳಲ್ಲಿ 498825 ಅಂದಾಜು ಬ್ರಾಯ್ಲರ್ ಕೋಳಿಗಳಿವೆ. ಹಾಗೂ 31 ಮೊಟ್ಟೆ ಕೋಳಿ ಸಾಕಾಣಿಕೆ ಕೇಂದ್ರಗಳಲ್ಲಿ 2473435 ಕೋಳಿಗಳಿವೆ. ಈ ಕೇಂದ್ರಗಳಲ್ಲಿ ಕೋಳಿಗಳು ಮರಣಹೊಂದಿದಲ್ಲಿ ವೈಜ್ಞಾನಿಕವಾಗಿ ನಿರ್ವಹಣೆ ಮಾಡಲು ಎಲ್ಲಾ ಫಾರಂಗಳ ಮಾಲಿಕರಿಗೆ ಸೂಚನೆ ನೀಡಲಾಗಿದೆ. ಯಾವುದೇ ಫಾರಂಗಳಲ್ಲಿ ಕೋಳಿಗಳ ಮರಣ ಹೊಂದಿದಲ್ಲಿ ತಕ್ಷಣ ಪಶುಸಂಗೋಪನಾ ಇಲಾಖೆ ಗಮನಕ್ಕೆ ತಂದು, ಈ ಹಕ್ಕಿಜ್ವರ ಹರಡದಂತೆ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ತರಬೇತಿ:** ಹಕ್ಕಿ ಜ್ವರದ ನಿಯಂತ್ರಣ ಮಾರ್ಗಸೂಚಿಯಂತೆ ಕಟ್ಟೆಚ್ಚರ ವಹಿಸಲು ಜಿಲ್ಲೆಯ ವಿವಿಧ ತಾಲ್ಲೂಕುಗಳ ಪಶುಪಾಲನಾ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯವರಿಗೆ ತರಬೇತಿ ನೀಡಿ ಸೂಕ್ತ ಮಾರ್ಗದರ್ಶನ ನೀಡಲು ತುರ್ತು ಸಂದರ್ಭದಲ್ಲಿ ತ್ವರಿತವಾಗಿ ಕ್ರಮ ಜರುಗಿಸಲು ಪಶುವೈದ್ಯಾಧಿಕಾರಿಗಳ ನೇತೃತ್ವದಲ್ಲಿ 38 ಕ್ಷಿಪ್ರ ಪ್ರತಿಕ್ರಿಯೆ ತಂಡ (ರಾಪಿಡ್ ರೆಸ್ಪಾನ್ಸ್ ಟೀಮ್) ತಂಡಗಳನ್ನು ರಚನೆ ಮಾಡಲಾಗಿದೆ ಎಂದರು.

## ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ವಿದ್ಯಾರ್ಥಿಗಳೊಂದಿಗೆ ಸಂಸದರ ಸಂವಾದ



**ದಾವಣಗೆರೆ. ಮಾ.4;** ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಕಟ್ಟಡ ನಿರ್ಮಾಣ ಹಾಗೂ ಮೂಲಸೌಕರ್ಯ ನವೀಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದಿಂದ ಸಾಮಾನ್ಯ ಯೋಜನೆ ಅಡಿಯಲ್ಲಿ ಬಿಡುಗಡೆಯಾದ ಒಟ್ಟು 1.5 ಕೋಟಿ ರೂ ಮೊತ್ತದ ಕಾಮಗಾರಿಗೆ ದಾವಣಗೆರೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಭೂಮಿಪೂಜೆ ನೆರವೇರಿಸಿದರು. ಕಾರ್ಯಕ್ರಮಕ್ಕೂ ಮುನ್ನ ವಿದ್ಯಾರ್ಥಿನಿಯರೊಂದಿಗೆ ಸಂವಾದ ನಡೆಸಿದ ಸಂಸದರು ವಿದ್ಯಾರ್ಥಿನಿಯರ ಪರೀಕ್ಷಾ ತಯಾರಿ ಹಾಗೂ ಅವರ ಅಭಿರುಚಿಗಳು ಹಾಗೂ ಕಾರ್ಯಕ್ರಮದ ಮಾಹಿತಿ ಹೀಗೆ ವಿವಿಧ ಪ್ರಶ್ನೆಗಳನ್ನು ಹಾಕಿದಾಗ ವಿದ್ಯಾರ್ಥಿಗಳು ಸಮರ್ಪಕ ಉತ್ತರ ನೀಡಿದರು ಹಾಗೂ ತಮ್ಮ ಆಸಕ್ತಿ,ಅಭಿರುಚಿಯ ಬಗ್ಗೆ ಅನಿಸಿಕೆ ಹಂಚಿಕೊಂಡರು. ನಂತರ ಮಾತನಾಡಿದ ಸಂಸದರು ಎಲ್ಲರೂ ಸರ್ಕಾರಿ ಕಾಲೇಜಿಗೆ ಉತ್ತಮ ಫಲಿತಾಂಶ ತರಬೇಕೆಂದು ಸಲಹೆ ನೀಡಿದರು.ಜೊತೆಗೆ ಐಎಎಸ್ ಹಾಗೂ ಕೆಎಎಸ್ ಪರೀಕ್ಷೆ ತೆಗೆದುಕೊಳ್ಳಲು ಇಚ್ಚಿಸುವ ವಿದ್ಯಾರ್ಥಿಗಳಿಗೆ ಎಸ್ ಎಸ್ ಕೇರ್ ಟ್ರಸ್ಟ್ ಹಾಗೂ ಜಿಲ್ಲಾಡಳಿತ ಸಹಯೋಗದೊಂದಿಗೆ ಮುಂದಿನ ದಿನಗಳಲ್ಲಿ ತರಬೇತಿ ನೀಡುವ ಅವಕಾಶ ಕಲ್ಪಿಸಲಾಗಿದೆ. ಅತ್ಯುತ್ತಮ ಅಂಕ ಪಡೆದ ವಿದ್ಯಾರ್ಥಿಗಳು ಹಾಗೂ ಅಸಕ್ತರು ಇಂತಹ ಅವಕಾಶ ಪಡೆದು–ಕೊಂಡು ದಾವಣಗೆರೆ ಜಿಲ್ಲೆಗೆ ಕೀರ್ತಿ ತರಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಮಂಜುನಾಥ್, ಕಾವ್ಯಶ್ರೀ,ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯರಾದ ರಂಗನಾಥ್ ಸ್ವಾಮಿ,ಕೆ.ಎಸ್ ಈಶ್ವರಪ್ಪ,ಕೆ.ಶಿವಪ್ಪ,ಲೋಹಿತ್,ಎಂ.ಎಸ್ ಮಲ್ಲಿಕಾರ್ಜುನ್,ಆರ್.ಜಿ ರುದ್ರೇಶ್,ಪ್ರಭುದೇವ್ ,ಅನಿಲ್ ಗೌಡ ಮತ್ತಿತರರಿದ್ದರು.

### ಮಾರ್ಚ್ 15 ರಂದು ಹದಡಿ ರಸ್ತೆಯಲ್ಲಿನ ಸರ್ಕಾಟಿ ಐಟಿಐ ಕಾಲೇಜಿನಲ್ಲಿ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ

# 3 ಸಾವಿರ ಉದ್ಯೋಗಗಳ ಭರ್ತಿಗೆ ಕ್ರಮ, ಜಿಲ್ಲೆಯ ನಿರುದ್ಯೋಗಿ ಯುವಕ, ಯುವತಿಯರು ಭಾಗಿಯಾಗಲು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಕರೆ



**ದಾವಣಗೆರೆ :** ಎಸ್.ಎಸ್.ಎಲ್.ಸಿ.ಯಿಂದ ಪದವಿ, ಸ್ನಾತಕೋತ್ತರ ಪದವಿ ಸೇರಿದಂತೆ ಐಟಿಐ, ಡಿಪ್ಲೊಮಾ, ಇಂಜಿನಿಯರಿಂಗ್ ವೃತ್ತಿಪರ ಕೋರ್ಸ್‌ಗಳನ್ನು ಪಡೆದವರಿಗೆ ವಿವಿಧ ಕಂಪನಿಗಳಿಗೆ ಅವಶ್ಯವಿರುವ 3 ಸಾವಿರ ಹುದ್ದೆಗಳ ಭರ್ತಿಗೆ ಮಾರ್ಚ್ 15 ರಂದು ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ ಏರ್ಪಡಿಸಿದ್ದು ಜಿಲ್ಲೆಯ ಯುವಕ, ಯುವತಿಯರು ಇದರ ಲಾಭ ಪಡೆಯಬೇಕೆಂದು ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಉದ್ಯೋಗ ಮೇಳದ ಪೋಸ್ಟರ್‌ನ್ನು ಮಂಗಳವಾರ ಗೃಹ ಕಚೇರಿಯಲ್ಲಿ ಬಿಡುಗಡೆ ಮಾಡಿ ಮಾತನಾಡಿದರು. ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಹದಡಿ ರಸ್ತೆಯಲ್ಲಿನ ಸರ್ಕಾರಿ ಐಟಿಐ ಕಾಲೇಜು ಆವರಣದಲ್ಲಿ ಏರ್ಪಡಿಸಲಾಗಿದೆ. ದಾವಣಗೆರೆ ನಗರ ಜವಳಿ ಕ್ಷೇತ್ರದಲ್ಲಿ ಪ್ರಸಿದ್ಧಿಯನ್ನು ಪಡೆಯುವ ಮೂಲಕ ಮ್ಯಾಚೆಸ್ಟರ್ ಎಂದೇ ಹೆಸರು ಗಳಿಸಿತ್ತು, ಈಗ ಶಿಕ್ಷಣ ಕ್ಷೇತ್ರದಲ್ಲಿ ಹೆಸರು ಪಡೆದಿದೆ. ದಾವಣಗೆರೆ ಐಟಿಐನಿಂದ ಡಿಪ್ಲೊಮಾ, ಇಂಜಿನಿಯರಿಂಗ್, ಮೆಡಿಕಲ್ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಹೊಂದಿದೆ. ಜೊತೆಗೆ ಕೃಷಿಯಲ್ಲಿಯು ಜಿಲ್ಲೆ ಸಾಕಷ್ಟು ಅಭಿವೃದ್ಧಿ ಹೊಂದಿದೆ.

ಉನ್ನತ ಶಿಕ್ಷಣ ಪಡೆದವರು ಉದ್ಯೋಗಕ್ಕಾಗಿ ಹೊರ ದೇಶಗಳಿಗೆ ಹೋಗಲಿದ್ದು ಇಲ್ಲಿನ ಮಾನವ ಸಂಪನ್ಮೂಲ ಬೇರೆ ಕಡೆ ಬಳಕೆಯಾಗುವ ಬದಲು ಇಲ್ಲಿಯೇ ಬಳಕೆಯಾಗುವುದರಿಂದ ಇನ್ನಷ್ಟು ಅಭಿವೃದ್ಧಿ ಹೊಂದಲು ಸಾಧ್ಯವಾಗಲಿದೆ. ಇಂತಹ ಬೃಹತ್ ಉದ್ಯೋಗ ಮೇಳಗಳ ಮೂಲಕ ಜಿಲ್ಲೆಯ ಯುವಕ, ಯುವತಿಯರಿಗೆ ಅನುಕೂಲವಾಗಲಿದೆ ಎಂದರು.

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ರೇಷ್ಮ ಕೌಸರ್, ಕೌಶಲ್ಯಾಭಿವೃದ್ಧಿ ಅಧಿಕಾರಿ ಶಿವಕುಮಾರ್, ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ ಹಾಗೂ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು

# ಎಸ್ಸಿಎಸ್ಟಿ ಮೀಸಲು ಹಣ ಗ್ಯಾರಂಟಿಗೆ: ಜಿಲ್ಲಾ ಬಿಜೆಪಿ ಪ್ರತಿಭಟನೆ




**ದಾವಣಗೆರೆ:** ಕಾಂಗ್ರೆಸ್ ರಾಜ್ಯದಲ್ಲಿ ಅಧಿಕಾರ ದಕ್ಕಿಸಿಕೊಳ್ಳಲು ಐದು ಗ್ಯಾರಂಟಿಗಳನ್ನು ಘೋಷಿಸಿ, ಎಸ್ಸಿಎಸ್ಪಿ ಮತ್ತು ಟಿಎಸ್ಪಿಗೆ ಮೀಸಲಿಟ್ಟ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡು ಎಸ್ಸಿ ಎಸ್ಟಿ ಸಮುದಾಯಕ್ಕೆ ಅನ್ಯಾಯ ಮಾಡಿದೆ ಎಂದು ಖಂಡಿಸಿ ಮಂಗಳವಾರ ಜಿಲ್ಲಾ ಬಿಜೆಪಿ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಕೆ.ಬಿ.ಬಡಾವಣೆಯಲ್ಲಿರುವ ಪಕ್ಷದ ಕಚೇರಿಯಿಂದ ಉಪ ವಿಭಾಗಾಧಿಕಾರಿಗಳ ಕಚೇರಿವರೆಗೆ ಪ್ರತಿಭಟನೆ ನಡೆಸಿ, ಉಪವಿಭಾಗಾಧಿಕಾರಿಗಳ ಮೂಲಕ ರಾಜ್ಯಪಾಲರು ಮತ್ತು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್ ಮಾತನಾಡಿ, 2023 ಮತ್ತು 2024ನೇ ಸಾಲಿನಲ್ಲಿ ಒಟ್ಟು ಸುಮಾರು 25 ಸಾವಿರ ಕೋಟಿಯಷ್ಟು ಹಣವನ್ನು ಕಾಂಗ್ರೆಸ್ ಸರ್ಕಾರ ಬೇರೆ ಯೋಜನೆಗಳಿಗೆ ಬಳಸಿಕೊಂಡಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಸಬಲೀಕರಣ, ಶಿಕ್ಷಣ, ಉದ್ಯೋಗ ಸ್ವಾವಲಂಬನೆ ಮೂಲಕ ಪ್ರತಿ ವ್ಯಕ್ತಿ ಮತ್ತು ಕುಟುಂಬವನ್ನು ಸಶಕ್ತಗೊಳಿಸಬೇಕು.

ದಲಿತಕೇರಿ ಕಾಲೋನಿಗಳಿಗೆ ಆದಿವಾಸಿ ಹಾಡಿಗಳಿಗೆ ಮೂಲ ಸೌಕರ್ಯ ಒದಗಿಸಬೇಕು ಎಂದು ಆಗ್ರಹಿಸಿದರು. ಭೂ ಒಡೆತನ, ಭೂಮಿಗೆ ನೀರು ಸ್ವ ಉದ್ಯೋಗ, ಸ್ವಂತ ವಾಹನ, ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ವಸತಿ ಶಾಲೆ, ಹಾಸ್ಟೆಲ್ ನಿರ್ಮಾಣ ಇದಕ್ಕಾಗಿ ಬಳಸಬೇಕಾದ ಹಣ ದುರುಪಯೋಗ ಮಾಡಿಕೊಂಡಿದ್ದು, ಬೇರೆ ಉದ್ದೇಶಕ್ಕೆ ಬಳಸಿ ಚುನಾವಣೆ ಸಂದರ್ಭದಲ್ಲಿ ನೀಡಿದ ಭರವಸೆಯನ್ನು ಈ ಸರ್ಕಾರ ಮರೆತಿದೆ ಎಂದು ದೂರಿದರು.

ಅಹಿಂದ ಚಾಂಪಿಯನ್ ಎಂದು ಹೇಳಿಕೊಳ್ಳುವ ಮುಖ್ಯಮಂತ್ರಿಗಳು ದಲಿತರಿಗಾಗಿ ಮೀಸಲಿಟ್ಟ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಡೈವರ್ಟ್ ಮಾಡಿದೆ. ಇದರಿಂದ ಕಳೆದ ಎರಡು ವರ್ಷಗಳ ಅವಧಿಯಲ್ಲಿ ಒಂದೇ ಒಂದು ಎಸ್.ಸಿ., ಎಸ್.ಟಿ. ಸಮುದಾಯದ ವಿವಿಧ ಯೋಜನೆಗಳ ಅಭಿವೃದ್ಧಿ ಆಗಿಲ್ಲ.ಹಣ ವರ್ಗಾವಣೆಗೆ ಅವಕಾಶ ಇಲ್ಲದಂತೆ 7ಡಿ ರದ್ದು ಮಾಡಿದ್ದು ತಾನೇ ಎಂದು ಬೆನ್ನು ತಟ್ಟಿಕೊಳ್ಳುವ ಸರ್ಕಾರ 7ಸಿ ಕಾಯ್ದೆ ರದ್ದು ಮಾಡದೇ ಅನುದಾನವನ್ನು ಡೈವರ್ಟ್ ಮಾಡಿದೆ. ಬರಲಿರುವ ಬಜೆಟ್‌ನಲ್ಲಿ ಮತ್ತೆ 14,488 ಕೋಟಿ ರೂ. ಹಣ ದುರ್ಬಳಕೆ ಮಾಡಲು ಹೊಂಚು ಹಾಕಿ ಕುಳಿತಿದ್ದು, ದಲಿತರ ಮೀಸಲು ನಿಧಿಗೆ ಕನ್ನ ಹಾಕಲು ಪ್ರಸ್ತಾವನೆ ಸಿದ್ಧಪಡಿಸಿದೆ ಎಂದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ತಮ್ಮ ಆಪ್ತರು ಅಥವಾ ಸಂಬಂಧಿಕರೊಂದಿಗೆ ಸೇರಿ ವ್ಯಾಪಾರವನ್ನು ಮಾಡುತ್ತಿರುವ ಜನರು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹೆಜ್ಜೆಯನ್ನು ಹಾಕುವ ಅಗತ್ಯವಿದೆ , ಇಲ್ಲದಿದ್ದರೆ ಆರ್ಥಿಕ ನಷ್ಟವಾಗಬಹುದು ಸ್ನೇಹಿತರು ಮತ್ತು ಅಪರಿಚಿತರಿಬ್ಬರ ಬಗೆಗೂ ಎಚ್ಚರದಿಂದಿರಿ.

### ವೃಷಭ ರಾಶಿ

ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಜೀವನ ಸಂಗಾತಿಯೊಂದಿಗೆ ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯದ ಬಗ್ಗೆ ಜಗಳವಾಗುವ ಸಾಧ್ಯತೆ ಇದೆ. ಇಂದು ನಿಮ್ಮ ದುಂದುಗಾರಿಕೆಯ ಮೇಲೆ ನಿಮ್ಮ ಸಂಗಾತಿ ನಿಮಗೆ ಮಾತುಗಳು ಹೇಳಬಹುದು. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

### ಮಿಥುನ ರಾಶಿ

ಸಂತೋಷದ ಸುದ್ದಿ ಪಡೆಯುವ ಸಾಧ್ಯತೆಯಿದೆ. ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ. ನಿಮ್ಮ ದಿನವನ್ನು ಎಚ್ಚರಿಕೆಯಿಂದ ಆಯೋಜಿಸಿ – ನೀವು ನಂಬಿಕೆಯಿಡಬಹುದಾದ ಜನರ ಸಹಾಯ ಪಡೆಯಲು ಅವರ ಜೊತೆ ಚರ್ಚಿಸಿ. ಪ್ರೀತಿ ದೇವರ ಪೂಜೆಗೆ ಪರ್ಯಾಯವಾಗಿದೆ; ಇದು ಅತ್ಯಂತ ಆಧ್ಯಾತ್ಮಿಕವೂ ಹಾಗೂ ಧಾರ್ಮಿಕವೂ ಆಗಿದೆ. ಇಂದು ನೀವು ಇದನ್ನು ತಿಳಿಯುತ್ತೀರಿ.

### ಕರ್ಕ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ.

### ಸಿಂಹ ರಾಶಿ

ನಿಮ್ಮ ಮೇಲೆ ಬಹಳಷ್ಟು ಅವಲಂಬಿಸಿರುತ್ತದೆ ಮತ್ತು ನಿರ್ಣಯಗಳನ್ನು ತೆಗೆದುಕೊಳ್ಳಲು ಮಾನಸಿಕ ಸ್ಪಷ್ಟತೆ ಅಗತ್ಯವಾಗಿರುತ್ತದೆ. ಇಂದು ಹಣದ ಪ್ರಯೋಜನವನ್ನು ಪಡೆಯುವ ಸಾಧ್ಯತೆ ಇದೆ ಆದರೆ ನಿಮ್ಮ ಕೋಪದ ಸ್ವಭಾವದಿಂದ ಇಂದು ಹಣವನ್ನು ಗಳಿಸುವಲ್ಲಿ ಸಾಧ್ಯವಾಗದಿರಬಹುದು. ಎಲ್ಲರನ್ನೂ ನಿಮ್ಮ ದೊಡ್ಡ ಪಾರ್ಟಿಗೆ ಕರೆಯಿರಿ ನೀವು ಇಂದು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ. ಪ್ರಣಯ ಸಂತೋಷಕರವೂ ಮತ್ತು ಅದ್ಭುತವೂ ಆಗಬಹುದು.

### ಕನ್ಯಾ ರಾಶಿ

ಜನರಲ್ಲಿ ಬೆರೆಯುವ ಭಯ ನಿಮ್ಮನ್ನು ಧೈರ್ಯಗೆಡಿಸಬಹುದು. ಇದನ್ನು ತೆಗೆದುಹಾಕಲು ನಿಮ್ಮ ಸ್ವಾಭಿಮಾನವನ್ನು ಪ್ರೋತ್ಸಾಹಿಸಿ. ಆಶೀರ್ವಾದ ಹಾಗೂ ಅದೃಷ್ಟ ನಿಮ್ಮ ಬಳಿ ಬರುತ್ತಿದ್ದ ಹಾಗೆ ನಿಮ್ಮ ಬಯಕೆಗಳು ಪೂರೈಸಲ್ಪಡುತ್ತವೆ – ಮತ್ತು ಹಿಂದಿನ ದಿನಗಳ ಶ್ರಮ ಈಗ ಫಲ ನೀಡುತ್ತದೆ. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ. ದೀರ್ಘಕಾಲದ ನಂತರ ನಿಮ್ಮ ಸ್ನೇಹಿತರಿಗೆ ಸಂಧಿಸುವ ವಿಚಾರ ನಿಮ್ಮ ಮನಸ್ಸಿನೆಲ್ಲೆಡೆ ತುಂಬಿರುತ್ತದೆ. ಕೆಲಸದ ಪ್ರದೇಶದಲ್ಲಿ ನಿಮ್ಮ ಯಾವುದೇ ಸ್ಪರ್ಧಿಗಳು ಇಂದು ನಿಮ್ಮ ವಿರುದ್ಧ ಸಂಚು ರೂಪಿಸಬಹುದು,

### ತುಲಾ ರಾಶಿ

ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಒತ್ತಡದ ಅವಧಿಯಿದ್ದರೂ ಕುಟುಂಬದ ಬೆಂಬಲ ನಿಮಗೆ ಸಹಾಯ ಮಾಡುತ್ತದೆ. ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ. ಇಂದು ನಿಮ್ಮ ಕೆಲಸದಲ್ಲಿ ನಿಮ್ಮ ಉತ್ತಮ ಕಾರ್ಯಗಳಿಗಾಗಿ ನಿಮ್ಮನ್ನು ಸನ್ಮಾನಿಸಲಾಗುವುದು

### ವೃಶ್ಚಿಕ ರಾಶಿ

ನಿಯಮಿತ ತೊಂದರೆ ನಿಮಗೆ ಕೆಲವು ಸಮಸ್ಯೆಗಳನ್ನು ಉಂಟುಮಾಡಬಹುದು. ನಿಮ್ಮ ನರಮಂಡಲದ ಕಾರ್ಯವೆಸಗುತ್ತಿರಲು ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳಿ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಒಂದು ವೈವಾಹಿಕ ಸಂಬಂಧವನ್ನು ಹೊಂದಲು ಒಳ್ಳೆಯ ಸಮಯ. ಸ್ಪಷ್ಟವಾಗಿ ಅರ್ಥಮಾಡಿಕೊಳ್ಳುವ ಮೂಲಕ ಮಾತ್ರ ನೀವು ನಿಮ್ಮ ಪತ್ನಿಗೆ ಭಾವನಾತ್ಮಕ ಬೆಂಬಲ ನೀಡಬಹುದು. ಪ್ರೀತಿ ಯಾವಾಗಲೂ ಭಾವಪೂರ್ಣವಾಗಿದೆ, ಮತ್ತು ನೀವು ಇಂದು ಇದನ್ನು ಅನುಭವಿಸುತ್ತೀರಿ.

### ಧನು ರಾಶಿ

ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ಯಶಸ್ಸಿಗೆ ಇಂದಿನ ಸೂತ್ರವೆಂದರೆ ನಾವೀನ್ಯತೆಯಿರುವ ಮತ್ತು ಉತ್ತಮ ಅನುಭವ ಹೊಂದಿರುವ ಜನರ ಸಲಹೆಯಂತೆ ನಿಮ್ಮ ಹಣವನ್ನು ಹೂಡುವುದಾಗಿದೆ. ಹೊಸ ಕುಟುಂಬದ ಸದಸ್ಯರ ಆಗಮನದ ಸುದ್ದಿ ನಮ್ಮನ್ನು ರೋಮಾಂಚನಗೊಳಿಸಬಹುದು. ನಿರೀಕ್ಷೆಯಲ್ಲಿ ಒಂದು ಪಾರ್ಟಿ ನೀಡುವ ಮೂಲಕ ನಿಮ್ಮ ಸಂತೋಷವನ್ನು ಆಚರಿಸಿ.

### ಮಕರ ರಾಶಿ

ಅತಿಯಾಗಿ ತಿನ್ನುವುದು ಮತ್ತು ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಬೇಕು. ಹಣವನ್ನು ಯೋಚಿಸದೆ ಮತ್ತು ಪರಿಗಣಿಸದೆ ಖರ್ಚುಮಾಡುವುದು, ನಿಮಗೆ ಎಷ್ಟು ನಷ್ಟ ಮಾಡಬಹುದು ಎಂಬುದು ಇಂದು ನಿಮಗೆ ಅರ್ಥವಾಗಬಹುದು. ಶಿಶುವಿನ ಆರೋಗ್ಯ ಸ್ವಲ್ಪ ಚಿಂತೆಗೆ ಕಾರಣವಾಗಬಹುದು. ನಿಮ್ಮ ಪ್ರೇಮಿಯಿಂದ ದೂರವುಳಿಯಲು ತುಂಬಾ ಕಷ್ಟವಾಗುತ್ತದೆ.

### ಕುಂಭ ರಾಶಿ

ಅಶಕ್ತ ದೇಹ ಮನಸ್ಸನ್ನು ದುರ್ಬಲಗೊಳಿಸುವುದರಿಂದ ನಿಮ್ಮ ಶಕ್ತಿಯನ್ನು ಮರಳಿ ಪಡೆಯಲು ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳಿ. ನಿಮ್ಮಲ್ಲಿ ಸಾಮರ್ಥ್ಯದ ಕೊರತೆಯಿರದೇ ಇಚ್ಛಾಶಕ್ತಿಯ ಕೊರತೆಯಿದೆಯೆಂದು ನೀವು ಅರ್ಥಮಾಡಿಕೊಳ್ಳಬೇಕು. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು

### ಮೀನ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು. ಮನೆಯ ವಿಷಯಗಳು ಮತ್ತು ಬಾಕಿಯಿರುವ ಗೃಹಕೃತ್ಯಗಳನ್ನು ಪೂರೈಸಲು ಒಂದು ಅನುಕೂಲಕರ ದಿನ.

# ಎಸ್ ಎಸ್ ಕೇರ್ ಟ್ರಸ್ಟ್ ನಿಂದ ಅಂಧಮಕ್ಕಳ ಅರೋಗ್ಯ ತಪಾಸಣೆ



**ದಾವಣಗೆರೆ:** ನಗರದ ಎಸ್.ಎಸ್. ಕೇರ್ ಟ್ರಸ್ಟ್ ನ ವಿದ್ಯಾರ್ಥಿ ವಿಭಾಗದಿಂದ ಸರ್ಕಾರಿ ಅಂಗವಿಕಲರ ಶಾಲೆಯಲ್ಲಿ ಉಚಿತ ಆರೋಗ್ಯ ಶಿಬಿರ ಆಯೋಜಿಸಲಾಗಿತ್ತು. ಕೇರ್ ಟ್ರಸ್ಟ್ ನ ವಿದ್ಯಾರ್ಥಿ ವಿಭಾಗದವರು ಅಂಧ ಮಕ್ಕಳ ಆರೋಗ್ಯ ತಪಾಸಣೆ ಹಾಗೂ ದಂತ ತಪಾಸಣೆ ನಡೆಸಿದರು ಜೊತೆಗೆ ಆರೋಗ್ಯದ ಸಲಹೆಗಳನ್ನು ನೀಡಿ ಆರೋಗ್ಯದ ಬಗ್ಗೆ ಜಾಗೃತಿಯನ್ನು ಮೂಡಿಸಿದರು.ವಿದ್ಯಾರ್ಥಿಗಳಿಗೆ ನೈರ್ಮಲ್ಯದ ಕುರಿತು ತಿಳಿಸಿಕೊಟ್ಟರು .ನಂತರ 1,800 ಬ್ರೈಲ್ ಕಾಗದಗಳನ್ನು ವಿದ್ಯಾರ್ಥಿಗಳ ಅಧ್ಯಯನವನ್ನು ಬೆಂಬಲಿಸುವ ಸಲುವಾಗಿ ಎಸ್ ಎಸ್ ಕೇರ್ ಟ್ರಸ್ಟ್ ನ ವಿದ್ಯಾರ್ಥಿ ವಿಭಾಗದಿಂದ ಕೊಡುಗೆಯಾಗಿ ನೀಡಲಾಯಿತು.ಈ ವೇಳೆ ಮಾತನಾಡಿದ ಜಿಲ್ಲಾ ಅಭಿವೃದ್ಧಿ ಮತ್ತು ಕಲ್ಯಾಣಾಧಿಕಾರಿ ಡಾ. ಪ್ರಕಾಶ್ ಅವರುಅಂಧ ಮಕ್ಕಳು ಹೇಗೆ ತಮ್ಮ ದಿನಿತ್ಯದ ಕಾರ್ಯ ಚಟುವಟಿಕೆಗಳನ್ನು ನಡೆಸುತ್ತಾರೆ ಹಾಗೂ ಅವರ ಸಹಾಯ ಸಾಧನಗಳೊಂದಿಗೆ ಅವರ ದಿನಚರಿ ಹೇಗಿರುತ್ತದೆ ಎಂದು ತಿಳಿಸಿಕೊಟ್ಟರು. ಹಾಗೂ

ಮಕ್ಕಳ ಬ್ರೈಲ್ ಓದು ಮತ್ತು ಬರೆಯುವಿಕೆ ಬಗ್ಗೆ ಮಾಹಿತಿ ನೀಡಿದರು.

# ಕಾರ್ಡಿಯೋಕೇರ್ ಹಾರ್ಟ್ ಪ್ಲಸ್ ಪ್ರಾಜೆಕ್ಟ್ ಗೆ ಪ್ರಥಮ ಸ್ಥಾನ

**ದಾವಣಗೆರೆ:** ಪ್ರತಿಷ್ಠಿತ ಜಿ.ಎಂ. ತಾಂತ್ರಿಕ ಮಹಾವಿದ್ಯಾಲಯದ ರೋಬೋಟಿಕ್ಸ್ ಮತ್ತು ಆಟೋಮೇಷನ್ ವಿಭಾಗದ ವಿದ್ಯಾರ್ಥಿಗಳು ರಾಷ್ಟ್ರೀಯ ಮಟ್ಟದ ತಾಂತ್ರಿಕ ಯೋಜನಾ ಸ್ಪರ್ಧೆಯಲ್ಲಿ ಪ್ರದರ್ಶಿಸಿದ ·ಕಾರ್ಡಿಯೋಕೇರ್ ಹಾರ್ಟ್ ಪ್ಲಸ್ · ವಿಷಯದ ಪ್ರಾಜೆಕ್ಟ್ ಗೆ ಪ್ರಥಮ ಸ್ಥಾನ ಲಭಿಸಿದೆ. ಕಳೆದ ಫೆಬ್ರವರಿ 28ರಂದು ಬೆಳಗಾವಿಯಲ್ಲಿ ಅಂಗಡಿ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಮ್ಯಾನೇಜ್ಮೆಂಟ್ ವತಿಯಿಂದ ರಾಷ್ಟ್ರೀಯ ವಿಜ್ಞಾನ ದಿನದ ಪ್ರಯುಕ್ತ ಹಮ್ಮಿಕೊಂಡಿದ್ದ ರಾಷ್ಟ್ರೀಯ ತಂಡಗಳು ಭಾಗವಹಿಸಿದ್ದವು. ಅವುಗಳಲ್ಲಿ ಜಿಎಂಐಟಿ ಕಾಲೇಜಿನ ಈ ವಿದ್ಯಾರ್ಥಿಗಳು ಪ್ರದರ್ಶಿಸಿದ ಈ ಪ್ರಾಜೆಕ್ಟ್ ಗೆ ಕರ್ನಾಟಕದಿಂದ ಮೊದಲ ಸ್ಥಾನ ಪಡೆದ ಹೆಮ್ಮೆ ತಂದಿದೆ.

ಜಿಎಂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಜಿ.ಎಂ. ಲಿಂಗರಾಜು, ಜಿಎಂಐಟಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಂ.ಬಿ. ಸಂಜಯ್ ಪಾಂಡೆ, ಆಡಳಿತ ಅಧಿಕಾರಿಗಳಾದ ಡಾ. ವೈ. ಯು. ಸುಭಾಷ್, ರೋಬೋಟಿಕ್ಸ್ ಮತ್ತು ಆಟೋಮೇಷನ್ ವಿಭಾಗದ ಮುಖ್ಯಸ್ಥರಾದ ಡಾ.




ಮಟ್ಟದ ತಾಂತ್ರಿಕ ಯೋಜನಾ ಸ್ಪರ್ಧೆಯಲ್ಲಿ ದಾವಣಗೆರೆಯ ಜಿಎಂಐಟಿ ರೋಬೋಟಿಕ್ಸ್ ಮತ್ತು ಆಟೋಮೇಷನ್ ವಿಭಾಗದ 6ನೇ ಸೆಮಿಸ್ಟರ್ ವಿದ್ಯಾರ್ಥಿಗಳಾದ ಹೆಚ್.ವಿ. ಶ್ರೇಯಸ್, ಎನ್. ಜಯರಾಮ್ ಪ್ರದರ್ಶಿಸಿದ ಈ ಪ್ರಾಜೆಕ್ಟ್ ಗಮನ ಸೆಳೆದಿದೆ. ಅಲ್ಲದೇ ಈ ಪ್ರಾಜೆಕ್ಟ್ ಗೆ ಪ್ರಥಮ ಸ್ಥಾನದ ಜೊತೆಗೆ ನಗದು ಬಹುಮಾನ ಲಭಿಸಿದೆ.

ಈ ಸ್ಪರ್ಧೆಯಲ್ಲಿ ರೋಬೋಟಿಕ್ಸ್ ಮತ್ತು ಆಟೋಮೇಷನ್ ವಿಷಯಕ್ಕೆ ಸಂಬಂಧಿಸಿದಂತೆ ಮುಂಬೈ, ಮಧ್ಯಪ್ರದೇಶ, ಗೋವಾ ಸೇರಿದಂತೆ ವಿವಿಧ ರಾಜ್ಯಗಳಿಂದ ಒಟ್ಟು 15 ವಿದ್ಯಾರ್ಥಿಗಳ ಡಿ.ಜಿ. ರಾಜಕುಮಾರ್ ವಿದ್ಯಾರ್ಥಿಗಳ ಪ್ರಾಜೆಕ್ಟ್ ಗೆ ಮೆಚ್ಚುಗೆ ವ್ಯಕ್ತಪಡಿಸಿ, ಮೊದಲ ಸ್ಥಾನ ಪಡೆದಿದ್ದಕ್ಕೆ ಅಭಿನಂದನೆ ಸಲ್ಲಿಸಿದ್ದಾರೆ.

ಹೃದಯ ಮೇಲ್ವಿಚಾರಣಾ ಯೋಜನೆಯ ವಿಶೇಷವೆಂದರೆ, ಹೃದಯದ ಸಮಸ್ಯೆಯುಳ್ಳವರು ಈ ಯಂತ್ರೋಪಕರಣವನ್ನು ಅಳವಡಿಸಿಕೊಂಡರೆ ತುರ್ತು ಸಮಯದಲ್ಲಿ ಅವರಿರುವ ಸ್ಥಳ, ಗುರುತಿಸುವಿಕೆ, ಮೇಲ್ವಿಚಾರಣೆಗೆ ಪ್ರತಿಕ್ರಿಯಿಸುವ ವ್ಯವಸ್ಥೆಯನ್ನು ಒಳಗೊಂಡಿದೆ. ಜಿಪಿಎಸ್ ಮತ್ತು ಜಿಎಸ್ಎಂ ಮಾಡ್ಯೂಲ್ ಮತ್ತು ರೋಬೋಟಿಕ್ ನಿಯಂತ್ರಣ ವ್ಯವಸ್ಥೆ ಸೇರಿವೆ.

# ಶಿರಾಳಕೊಪ್ಪ ಬಯಲುಶೌಚ ಮುಕ್ತ ಪಟ್ಟಣ

**ಶಿವಮೊಗ್ಗ;** ಶಿರಾಳಕೊಪ್ಪ ಪಟ್ಟಣವನ್ನು ಬಯಲು ಶೌಚಮುಕ್ತ ಪ್ಲಸ್ ಮರುಪ್ರಮಾಣೀಕರಣ ಮತ್ತು ಗಾರ್ಬೇಜ್ಫ್ರೀ ಸಿಟಿ ರೇಟಿಂಗ್ನಲ್ಲಿ ಜಿಎಫ್ಸಿ 3 ಸ್ಟಾರ್ ಪಟ್ಟಣವೆಂದು ಘೋಷಿಸಲಾಗಿದೆ.

ಸ್ವಚ್ಛ ಭಾರತ್ ಮಿಷನ್(ನಗರ) ಮಾರ್ಗಚೂಚಿಯಂತೆ ಶಿರಾಳಕೊಪ್ಪ ಪುರಸಭೆ ವ್ಯಾಪ್ತಿಯಲ್ಲಿ ಬಯಲು ಶೌಚ ಮುಕ್ತ ಮತ್ತು ಕಸ ಮುಕ್ತ ನಗರ ರೇಟಿಂಗ್ ಮಾರ್ಗಸೂಚಿಗಳನ್ನು ಕ್ರಮಬದ್ಧವಾಗಿ ಅನುಷ್ಠಾನಗೊಳಿಸಲಾಗಿದ್ದು, ಶಿರಾಳಕೊಪ್ಪ ಪಟ್ಟಣವನ್ನು ಬಯಲುಶೌಚ ಮುಕ್ತ ಪ್ಲಸ್ ಮರುಪ್ರಮಾಣೀಕರಣ ಮತ್ತು ಗಾರ್ಬೇಜ್ಫ್ರೀ ಸಿಟಿ ರೇಟಿಂಗ್ನಲ್ಲಿ ಜಿಎಫ್ಸಿ 3 ಸ್ಟಾರ್ ಪಟ್ಟಣವೆಂದು ಈ ಮೂಲಕ ಘೋಷಿಸಿದೆ ಎಂದು ಶಿರಾಳಕೊಪ್ಪ ಪುರಸಭೆ ಪ್ರಕಟಣೆ ತಿಳಿಸಿದೆ.

# ತತ್ವಪದಕಾರ ಮಾರ್ತಾಂಡಪ್ಪಗೆ ಜಾನಪದ ಅಕಾಡೆಮಿ ಪ್ರಶಸ್ತಿ

**ಚಿಕ್ಕಮಗಳೂರು** : ಜಾನಪದ ಜನರ ಪದವಾಗಿ ಗ್ರಾಮೀಣ ಜನರ ಬದುಕಿನಲ್ಲಿ ಹಾಸು ಹೊಕ್ಕಾಗಿದೆ, ದುಡಿದು ದಣಿದ ಮನಕೆ ಒಂದಿ?ಷ್ಟು ಮುದ ನೀಡುವುದು ಜಾನಪದ ಕಲೆಗಳು, ಆಯಾಸ–ಆತಂಕ ಕಳೆದು, ಆನಂದ–ಆದರ್ಶ ತೋರುವ, ಶಾಂತಿ–ನೆಮ್ಮದಿ ಕಲ್ಪಿಸುವ, ಜಾನಪದ ಕಲೆಯನ್ನು ಬೆಳೆಯುತ್ತಲೇ ಮೈಗೂಡಿಸಿಕೊಂಡ ದಾವಣಗೆರೆಯ ಮಾರ್ತಾಂಡಪ್ಪನವರು, ಸಂಗೀತ, ಹಾಡುಗಾರಿಕೆ, ನಾಟಕ, ಭಜನೆ, ಕಲೆಗಳಲ್ಲಿ ಉಜ್ವಲ ಪ್ರತಿಭೆ ತೋರುತ್ತ ಜನಮನ ಸೆಳೆದು ಪ್ರತಿಭಾವಂತರೆನಿಸಿದರು, ಅವರ ಕಲಾ ಸೇವೆಯನ್ನು ಗುರುತಿಸಿದ ಕರ್ನಾಟಕ ಜಾನಪದ ಅಕಾಡೆಮಿಯು, 2024ನೇ ಸಾಲಿನ ವಾರ್ಷಿಕ ಪ್ರಶಸ್ತಿಗೆ ಮಾರ್ತಾಂಡಪ್ಪನವರನ್ನು ಆಯ್ಕೆ ಮಾಡಿರುವುದು ಸಂತಸದ ಸಂಗತಿ.

ದಾವಣಗೆರೆ ಜಿಲ್ಲೆ ಮಾಯ ಕೊಂಡದ, ಕೃಷಿ ಉಪಕರಣಗಳನ್ನು ತಯಾರಿಸುತ್ತಿದ್ದ ಬಡಿಗೇರ ವೃತ್ತಿಯ, ನೀಲಪ್ಪ ಹಾಗೂ ಶ್ರೀಮತಿ ತಿಪ್ಪಮ್ಮ ದಂಪತಿಗಳ ಪುತ್ರರಾಗಿ 1952 ರಲ್ಲಿ ಜನಿಸಿದ ಮಾರ್ತಾಂಡಪ್ಪ, ಬಡತನದ ಬವಣೆಯಿಂದ ಶಾಲಾ ಶಿಕ್ಷಣ ಪಡೆಯಲಾಗಲಿಲ್ಲ, ಹಾಗಾಗಿ ತಂದೆಯವರ ಕೆಲಸದಲ್ಲಿ ಸಾಧ್ಯವಾದ?ಷ್ಟು ಕೈಗೂಡಿಸುತ್ತ ಸಹಾಯಕರಾಗಿ ನಿಂತರು. 1957ರಲ್ಲಿ ಇವರು ಕುಟುಂಬ ಸಮೇತರಾಗಿ ದಾವಣಗೆರೆಯ ನಿಟ್ಟುವಳ್ಳಿಯಲ್ಲಿ ಬಂದು ನೆಲೆಸಿದರು, ತಮ್ಮ ಒಂಬತ್ತನೇ ವಯಸ್ಸಿನಲ್ಲಿಯೇ ಜೀವನ ನಿರ್ವಹಣೆಗಾಗಿ ಕೆಲಕಾಲ ಹೋಟೆಲ್ ನಲ್ಲಿ ಕೆಲಸಮಾಡಿ, ನಂತರ ಕಟ್ಟಡ ಕೆಲಸ, ಕೂಲಿ ಕಾರ್ಮಿಕರಾಗಿಯೂ ಶ್ರಮದ ದುಡಿಮೆಯಿಂದ ಕುಟುಂಬಕ್ಕೆ ಸಹಾಯಕರಾದರು. 1967 ರಲ್ಲಿ ದಾವಣಗೆರೆ ಕಾಟನ್ ಮಿಲ್ ಕಾರ್ಮಿಕರಾಗಿ ಕೆಲಸ ಮಾಡುತ್ತ ಬದುಕು ಕಟ್ಟಿಕೊಂಡರು. ಬಿಡುವಿನ ವೇಳೆಯಲ್ಲಿ ಜಾನಪದ ಕಲೆಗಳತ್ತ ಒಲವು ಮೂಡಿಸಿಕೊಂಡರು,

ವೃತ್ತಿಯಲ್ಲಿ ಕಾರ್ಮಿಕರಾದರೂ ಪ್ರವೃತ್ತಿಯಲ್ಲಿ ಬಾಲ್ಯದಿಂದಲೂ ಕಲಾಸಕ್ತಿಯನ್ನು ಬೆಳೆಸಿಕೊಂಡು ಬಂದಿದ್ದರು. ಅಂತೆಯೇ ಅಲ್ಲಲ್ಲಿ ನಾಟಕ ಪ್ರದರ್ಶನಗಳನ್ನು ನೋಡುತ್ತ ರಂಗಕಲೆಯ ಗೀಳನ್ನು ಅಂಟಿಸಿಕೊಂಡಿದ್ದರು, ನಂತರ ನಿಟ್ಟುವಳ್ಳಿಯ ಶ್ರೀ ದುರ್ಗಾಂಬಿಕಾ ನಾಟ್ಯ ಸಂಘದವರು ಪ್ರದರ್ಶಿಸಿದ "ಗಂಡನ ಮಾನ" ನಾಟಕದಲ್ಲಿ ಪ್ರಥಮ ಬಾರಿಗೆ "ಸುಬ್ಬಿ" ಹಾಸ್ಯ ಪಾತ್ರಕ್ಕೆ ಬಣ್ಣಹಚ್ಚಿ, ಅಚ್ಚುಕಟ್ಟಾಗಿ ಅಭಿನಯಿಸಿ ಎಲ್ಲರಿಂದಲೂ "ಭೇ?" ಎನಿಸಿಕೊಂಡರು, ಇದರಿಂದ ಉತ್ತೇಜನಗೊಂಡ ಮಾರ್ತಾಂಡಪ್ಪ ಅವರು "ಬಾಣಸಿಗ ಭೀಮ"ದಲ್ಲಿ ಹಾಸ್ಯ ಪಾತ್ರ, "ಕಾರಸ್ಥಾನ"ದಲ್ಲಿ "ಸ್ತ್ರೀ" ಪಾತ್ರ, ಹೀಗೆ ಅನೇಕ ನಾಟಕಗಳಲ್ಲಿ ವಿಭಿನ್ನ ಪಾತ್ರ ಗಳಿಂದ ಅವಕಾಶ ಪಡೆದು ಜನಮನ ಸೆಳೆದು ಉತ್ತಮ



ನಟರೆನಿಸಿಕೊಂಡರು, ಇವರ ಅಣ್ಣ ಗಂಗಾಧರ ಸಂಗೀತ ಮಾಸ್ಟರ್ ಆಗಿ ಹಾರ್ಮೋನಿಯಂ ನುಡಿಸುತ್ತಿದ್ದುದನ್ನು ಆಸಕ್ತಿಯಿಂದ ನೋಡುತ್ತಿದ್ದ ಅವರ ಚಿತ್ತ ಹಾರ್ಮೋನಿಯಂ ನುಡಿಸುವಿಕೆಯ ಕಲಿಕೆಯತ್ತ ಹರಿಯಿತು.

ಅಂತೆಯೇ ಸಂಗೀತ ಗುರುಗಳಾದ ನಾರಾಯಣ ಮೂರ್ತಿ ಅವರಿಂದ ಸಂಗೀತ ಕಲಿತು, ಶ್ರೀ ದುರ್ಗಾಂಬಿಕಾ ಬಜನಾ ಸಂಘದಲ್ಲಿ ನರಸಿಂಹ ಮೂರ್ತಿಯವರ ಹಾಡಿಗೆ, ಆತ್ಮಸ್ಥೈರ್ಯದಿಂದ ಹಾರ್ಮೋನಿಯಂ ಮೇಲೆ ಬೆರಳಾಡಿಸುತ್ತಲೇ ಕೆಲವೇ ದಿನಗಳಲ್ಲಿ ಹಾರ್ಮೋನಿಯಂ ನುಡಿಸುವುದನ್ನು ಕಲಿತ ಚತುರರು, ಹೀಗಾಗಿ 1976 ರಿಂದ ಹಾರ್ಮೋನಿಯಂ ನುಡಿಸುವುದರೊಂದಿಗೆ ಸ್ವತಹ ತಾವೇ ಭಕ್ತಿಗೀತೆ, ತತ್ವಪದಗಳು, ಜಾನಪದ ಹಾಡುಗಳನ್ನು ಹಾಡುತ್ತ, ಸಂಗೀತ ಹಾಗೂ ಹಾಡುಗಾರಿಕೆಯಲ್ಲಿ ನೈಪುಣ್ಯತೆ ಪಡೆದು ಜಾನಪದ ಕಲಾ ರಂಗದಲ್ಲಿ ಹೆಸರಾದರು. ಆರಂಭದಲ್ಲಿ ದಾವಣಗೆರೆಯ ಶ್ರೀ ದುರ್ಗಾಂಬಿಕಾ ಭಜನಾ ಸಂಘದೊಂದಿಗೆ ಕಾರ್ಯಕ್ರಮಗಳನ್ನು ನೀಡುತ್ತ, ನಂತರ ಶ್ರೀ ಬನ್ನಿ ಮಹಾಂಕಾಳಿ ಭಜನಾ ಸಂಘದಲ್ಲೂ ಕೆಲಕಾಲ ಭಜನೆ ಸೇವೆ ಸಲ್ಲಿಸಿದರು. ದಾವಣಗೆರೆಯ ವಿದ್ಯಾನಗರದ ಶ್ರೀಮಟ್ಟಿ ಆಂಜನೇಯ ಭಜನಾ ಸಂಘದ ಮುಖ್ಯಸ್ಥರಾಗಿಯೂ ಕಾರ್ಯ ನಿರ್ವಹಿಸುತ್ತ, ಅನೇಕ ಭಾಗಗಳಲ್ಲಿ ಭಜನಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿದ್ದಾರೆ. ವಿಮುದುಕನ ಮದುವೆಹಿ, ವಿಬದುಕು ಬಂಗಾರವಾಯಿತುಹಿ, ವಿಪ್ರೇಮಪಂಜರಹಿ, ವಿಕಲಿತಕಳ್ಳಹಿ, ವಿಕಳ್ಳ ಕಟ್ಟಿದ ತಾಳಿಹಿ,ಹಿ ಚಿನ್ನದ ಗೊಂಬೆಹಿ,ಹಿ ಹಳ್ಳಿ ಸುಟ್ಟಕೊಳ್ಳಿಹಿ, ವಿಶಿವಭಕ್ತ ಹರಳಯ್ಯಹಿ ಸೇರಿದಂತೆ ಅನೇಕ ನಾಟಕಗಳಿಗೆ ಹಾರ್ಮೋನಿಯಂ ಮಾಸ್ಟರ್ ಆಗಿಯೂ ಸಂಗೀತ ನಿರ್ದೇಶನ ಮಾಡಿದ್ದಾರೆ.

ಭಜನಾ ತಂಡಗಳೊಂದಿಗೆ ಮೈಸೂರು ದಸರಾ, ಖಾದಿ ಉತ್ಸವ, ಶಿರಡಿ, ಪಂಡರಾಪುರ, ಕೂಡಲಸಂಗಮ, ಮೂಡಬಿದರೆ, ಸೊಲ್ಲಾಪುರ, ಯಡೆಯೂರು, ಧರ್ಮಸ್ಥಳ, ಶೃಂಗೇರಿ, ಇನ್ನೂ ಅನೇಕ ಕಡೆಗಳಲ್ಲಿ ಸಂಚರಿಸಿ, ಜಾನಪದ, ಭಕ್ತಿಗೀತೆ, ತತ್ವಪದಗಳ ಭಜನಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿ, ಜನರ ಮನ ಸೆಳೆದದ್ದು ಅಲ್ಲದೇ ಸಮಿತಿಯವರ ಮೆಚ್ಚುಗೆಗೂ ಪಾತ್ರರಾಗಿದ್ದಾರೆ. ಸುತ್ತೂರು, ಹುಬ್ಬಳ್ಳಿ, ಸಿದ್ಧಾರೂಡ ಮಠ, ಸಿರಿಗೆರೆ, ಉಕ್ಕಡಗಾತ್ರಿ, ಲಿಂಗದಹಳ್ಳಿ ,ತುಮಕೂರು, ದೇವರಗುಡ್ಡ, ದಾವಣಗೆರೆ ನಗರಗಳಲ್ಲಿ ಏರ್ಪಡಿಸಿದ್ದ ಭಜನಾ ಸ್ಪರ್ಧೆಗಳಲ್ಲೂ, ತಮ್ಮ ತಂಡದೊಂದಿಗೆ ಭಾಗವಹಿಸಿ ವಿಶೇ? ಬಹುಮಾನ ಗಳಿಸಿರುವರಲ್ಲದೇ ಪ್ರಶಸ್ತಿ ಪತ್ರಗಳನ್ನು ಪಡೆದಿದ್ದಾರೆ. ಮಾರ್ತಾಂಡಪ್ಪನವರು ಶರೀಫರ ತತ್ವಪದಗಳು, ಜಾನಪದ ಹಾಗೂ ಭಕ್ತಿ ಗೀತೆಗಳು, ಕನಕದಾಸರು, ಪುರಂದರದಾಸರ ಹಾಡುಗಳು, ಶರಣರ ವಚನಗಳನ್ನು ಭಾವ ಪರವಶರಾಗಿ ಹಾಡುತ್ತಿದ್ದರೆ ಕೇಳುಗರು ತನ್ಮಯರಾಗಿ ತಲೆ ದೂಗುತ್ತ ಸಮಯ ಸರಿದಿದ್ದೇ ಗೊತ್ತಾಗುತ್ತಿರಲಿಲ್ಲವಂತೆ.

ಬರಗಾಲ ಸಂದರ್ಭದಲ್ಲಿ ದಾವಣಗೆರೆಯ ಡಾಂಗೆ ಉದ್ಯಾನ ವನದಲ್ಲಿ ನಡೆದ ಭಜನಾ ಕಾರ್ಯಕ್ರಮದಲ್ಲಿ, ಭಕ್ತಿಯಿಂದ 24 ತಾಸುಗಳು ಕಾರ್ಯಕ್ರಮ ನೀಡಿದ್ದನ್ನು ಇಂದಿಗೂ ಸ್ಮರಿಸಿಕೊಳ್ಳುವ ಮಾರ್ತಾಂಡಪ್ಪ, ತಮ್ಮ ಕಲಾ ಸೇವೆ ದುಡಿಮೆಗಾಗಿ ಅಲ್ಲ, ಆತ್ಮ ಸಂತೋ? ಹಾಗೂ ಭಕ್ತಿಗಾಗಿ ಎನ್ನುತ್ತಾರೆ, ಯಾರೇ ಭಜನೆಗೆ ಕರೆದರೂ ಅವರು ಕೊಟ್ಟ?ರಲ್ಲಿಯೇ ತೃಪ್ತಿ ಪಡುವ ಸರಳ ಜೀವಿಯಾಗಿದ್ದಾರೆ, ತಮ್ಮ ಕಲಾ ಜೀವನದ ಯಶಸ್ಸಿನಲ್ಲಿ ಸ್ಫೂರ್ತಿ ಸಾಂಸ್ಕೃತಿಕ ಸೇವಾ ಸಂಘದ ಅಧ್ಯಕ್ಷರಾದ ಎನ್. ಎಸ್. ರಾಜುರವರ ಸಹಕಾರ, ಬೆಂಬಲ ಸಾಕಷ್ಟಿದೆ, ಅಲ್ಲದೇ ಜಾನಪದ ಅಕಾಡೆಮಿ ಪ್ರಶಸ್ತಿ ಲಭಿಸಲು ಅವರ ಪ್ರಯತ್ನವೂ ಇದೆ ಎಂದು ಧನ್ಯತಾಭಾವ ವ್ಯಕ್ತಪಡಿಸುವ ಮಾರ್ತಾಂಡಪ್ಪನವರು, ಪತ್ನಿ ಗೌರಮ್ಮ , ಪುತ್ರರಾದ ಚಿದಾನಂದ, ಗಣೇಶ, ಪುತ್ರಿ ಮಧು ಇವರೊಂದಿಗೆ, ದಾವಣಗೆರೆಯ ನಿಟ್ಟುವಳ್ಳಿ ಹೊಸ ಚಿಕ್ಕನಹಳ್ಳಿ ಬಡಾವಣೆಯಲ್ಲಿ ನೆಲೆಸಿದ್ದು, ತಮ್ಮ 73 ನೇ ಇಳಿ ವಯಸ್ಸಿನಲ್ಲಿಯೂ ಇಂದಿಗೂ ಜಾನಪದ ಕಲಾವಿದ, ತತ್ವಪದಕಾರ, ಸಂಗೀತಗಾರರಾಗಿ ಕಲಾ ಸೇವೆಯಲ್ಲಿ ನಿರತರಾಗಿದ್ದಾರೆ.

## ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಕಡೂರು ಪುರಸಭೆಯಿಂದ 2025–26ನೇ ಸಾಲಿನಿಂದ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕವನ್ನು ಸಮರ್ಪಕವಾಗಿ ವಸೂಲಿ ಮಾಡಲು ಕಡೂರು ಪುರಸಭೆಯ ಡೇ–ನಲ್ಮ್ ಯೋಜನೆಯಡಿ ರಚಿಸಲಾದ ಮಹಿಳಾ ಸ್ವ ಸಹಾಯ ಸಂಘಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸಲು ಮಾರ್ಚ್ 25 ಕೊನೆಯ ದಿನವಾಗಿರುತ್ತದೆ.ಹೆಚ್ಚಿನ ಮಾಹಿತಿಗಾಗಿ ಪುರಸಭೆಯ ಕಂದಾಯ ಶಾಖೆ/ಡೇ–ನಲ್ಮ್ ಶಾಖೆ ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಕಡೂರು ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮೀಣ ಪತ್ರಕರ್ತರಿಗೆ ಜಿಲ್ಲಾ ಬಸ್ ಪಾಸ್: ಆನ್ಲೈನ್ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣ ಪತ್ರಕರ್ತರಿಗೆ ವೃತ್ತಿ ಸಂಬಂಧಿತ ಚಟುವಟಿಕೆಗಳಿಗೆ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಯಾಣಿಸಲು ಉಚಿತ ಬಸ್ ಪಾಸ್ ಯೋಜನೆಗೆ ಅರ್ಹ ಪತ್ರಕರ್ತರಿಂದ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಮುಖ್ಯಮಂತ್ರಿಗಳು 2024–25 ನೇ ಸಾಲಿನ ಆಯವ್ಯಯದಲ್ಲಿ ಈ ಯೋಜನೆ ಘೋಷಿಸಿದ್ದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ವಿದ್ಯುನ್ಮಾನ ಅಥವಾ ಮುದ್ರಣ ಮಾಧ್ಯಮಗಳಲ್ಲಿ ಪೂರ್ಣಾವಧಿಗೆ ನೇಮಕಗೊಂಡು 4 ವರ್ಷಗಳ ಸೇವಾನುಭವ ಹೊಂದಿರುವ ಪತ್ರಕರ್ತರು ಅರ್ಜಿ ಸಲ್ಲಿಸಬಹುದು. ನೇಮಕಾತಿ ಆದೇಶ/ವೇತನ ಪತ್ರ/ಬ್ಯಾಂಕ್ ಸ್ಟೇಟ್ಮೆಂಟ್ ಗಳಲ್ಲಿ ಯಾವುದಾದರೂ ದಾಖಲೆಗಳನ್ನು ಸೇವಾನುಭವಕ್ಕಾಗಿ ಒದಗಿಸಬೇಕು.ಜಿಲ್ಲಾ ವ್ಯಾಪ್ತಿಯಲ್ಲಿ ಸಂಚರಿಸುವ ಕರ್ನಾಟಕ ಸಾರಿಗೆ ಸಂಸ್ಥೆ ಬಸ್ಸುಗಳಲ್ಲಿ ಜಿಲ್ಲಾ ವ್ಯಾಪ್ತಿಗೆ ಉಚಿತವಾಗಿ ಸಂಚರಿಸಬಹುದು.ತಹಸೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ ಒದಗಿಸಬೇಕು.ರಾಜ್ಯ ಮಟ್ಟದ ಪತ್ರಿಕೆಗಳಲ್ಲಿ ಕಾರ್ಯನಿರ್ವಹಿಸುವ ವರದಿಗಾರರಿಗೆ ಪ್ರತಿ ತಾಲ್ಲೂಕಿಗೆ ಸಂಪಾದಕರು ಸೂಚಿಸುವ ಒಬ್ಬರಿಗೆ, ಜಿಲ್ಲಾ ಮಟ್ಟದ ಪತ್ರಿಕೆಗಳು ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಒಬ್ಬರಿಗೆ, ಆರು ಪುಟಗಳಲ್ಲಿ ಪ್ರಕಟವಾಗುವ ಪ್ರಾದೇಶಿಕ ಪತ್ರಿಕೆಗಳು ಓರ್ವ ವರದಿಗಾರರು ಹಾಗೂ ಓರ್ವ ಫೋಟೋಗ್ರಾಫರ್ ಎಂಟು ಅಥವಾ ಹೆಚ್ಚು ಪುಟಗಳಲ್ಲಿ ಪ್ರಕಟವಾಗುವ ಪ್ರಾದೇಶಿಕ ಪತ್ರಿಕೆಗಳು ಇಬ್ಬರು ವರದಿಗಾರರು ಹಾಗೂ ಓರ್ವ ಫೋಟೋಗ್ರಾಫರ್ಗೆ ಬಸ್ ಪಾಸ್ ಪಡೆಯಲು ಅವಕಾಶವಿದೆ.ಉಪಗ್ರಹ ಆಧಾರಿತ ವಿದ್ಯುನ್ಮಾನ ವಾಹಿನಿಗಳ ವರದಿಗಾರರು ತಾಲೂಕು ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದರೆ ಪ್ರತಿ ತಾಲ್ಲೂಕಿಗೆ ಓರ್ವ ಕ್ಯಾಮರಾಮ್ಯಾನ್ ಹಾಗೂ ಓರ್ವ ವರದಿಗಾರರು ಬಸ್ ಪಾಸ್ ಪಡೆಯಬಹುದಾಗಿದೆ.ದಿನಪತ್ರಿಕೆಗಳು ಹಾಗೂ ಉಪಗ್ರಹ ಸುದ್ದಿ ವಾಹಿನಿಗಳ ಸಂಪಾದಕರು ನೀಡುವ ನೇಮಕಾತಿ ಪತ್ರ ಹಾಗೂ ಶಿಫಾರಸ್ಸು ಆಧರಿಸಿ ಅರ್ಹ ಪತ್ರಕರಿಗೆ ಬಸ್ ಪಾಸ್ಗಳನ್ನು ನೀಡಲಾಗುವುದು.ಆಸಕ್ತ ಹಾಗೂ ಅರ್ಹ ಪತ್ರಕರ್ತರು ತಮ್ಮ ಸಮೀಪದ ಗ್ರಾಮ ಒನ್,ಕರ್ನಾಟಕ ಒನ್ಅಥವಾ ಬೆಂಗಳೂರು ಒನ್ ಕೇಂದ್ರಗಳಿಗೆ ತೆರಳಿ ಸೇವಾಸಿಂಧು ಪೋರ್ಟಲ್ ನಲ್ಲಿ ಆನ್ಲೈನ್ ಮೂಲಕ ಅಗತ್ಯ ದಾಖಲೆಗಳನ್ನು ಅಪ್ಲೋಡ್ ಮಾಡಿ ಅರ್ಜಿ ಸಲ್ಲಿಸಬಹುದು.ಅಪ್ಲೋಡ್ ಮಾಡಿದ ದಾಖಲೆಗಳು ಹಾಗೂ ಆನ್ಲೈನ್ ಅರ್ಜಿಯ ಮುದ್ರಿತ ಪ್ರತಿಯನ್ನು ತಮ್ಮ ಜಿಲ್ಲೆಯ ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿಗೆ ಸ್ವಯಂ ದೃಢೀಕರಿಸಿ ಸಲ್ಲಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ನವದೆಹಲಿಯಲ್ಲಿ ಮೊಳಗಿದ ಬ್ಯಾಂಕ್ ನೌಕರರ ಆಕ್ರೋಶದ ಕಹಳೆ

**ದಾವಣಗೆರೆ:** ಬ್ಯಾಂಕುಗಳಲ್ಲಿ ಅಗತ್ಯ ನೇಮಕಾತಿ, ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿ, ಬ್ಯಾಂಕಿಂಗ್ ಕೆಲಸವನ್ನು ಹೊರಗುತ್ತಿಗೆ ನೀಡಬಾರದು ಇತ್ಯಾದಿ ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಬ್ಯಾಂಕ್ ಕಾರ್ಮಿಕ ಸಂಘಟನೆಗಳ ಸಂಯುಕ್ತ ವೇದಿಕೆಯ ನೇತೃತ್ವದಲ್ಲಿ ಸಾವಿರಾರು ಬ್ಯಾಂಕ್ ನೌಕರರು ಹಾಗೂ ಅಧಿಕಾರಿಗಳು ನವದೆಹಲಿಯ ಸಂಸತ್ ರಸ್ತೆಯಲ್ಲಿ ಧರಣಿಯನ್ನು ಮಾಡಿ ಸರಕಾರದ ಬ್ಯಾಂಕ್ ನೌಕರರ ವಿರೋಧಿ ಧೋರಣೆಯ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶವನ್ನು ವ್ಯಕ್ತಪಡಿಸಿದರು.

ಯುಎಫ್ಬಿಯು ದಾವಣಗೆರೆ ಜಿಲ್ಲಾ ಸಮಿತಿಯ ಸಂಚಾಲಕ ಕೆ. ರಾಘವೇಂದ್ರ ನಾಯರಿ ಪಾಲ್ಗೊಂಡಿದ್ದು,

ಮಾರ್ಚ್ 24 ಮತ್ತು 25 ರಂದು ಎರಡು ದಿನಗಳ ಅಖಿಲ ಭಾರತ ಬ್ಯಾಂಕ್ ಮುಷ್ಕರಕ್ಕೆ ಬ್ಯಾಂಕ್ ಕಾರ್ಮಿಕ ಸಂಘಟನೆಗಳ ಸಂಯುಕ್ತ ವೇದಿಕೆಯು ಕರೆ ನೀಡಿರುವ ಹಿನ್ನಲೆಯಲ್ಲಿ ಮುಷ್ಕರಕ್ಕೆ ಪೂರ್ವಭಾವಿಯಾಗಿ ಹಮ್ಮಿಕೊಳ್ಳಲಾದ ಅನೇಕ ಪ್ರತಿಭಟನಾ ಕಾರ್ಯಕ್ರಮಗಳಲ್ಲಿ ಪಾರ್ಲಿಮೆಂಟ್ ಧರಣಿಯೂ ಒಂದಾಗಿದೆ ಎಂದಿದ್ದಾರೆ.

ಬ್ಯಾಂಕುಗಳಲ್ಲಿ ಕೆಲಸ ಮಾಡುವ ತಾತ್ಕಾಲಿಕ ನೌಕರರನ್ನು ಖಾಯಂಗೊಳಿಸಬೇಕು, ನೌಕರರ ಉದ್ಯೋಗ ಭದ್ರತೆಯನ್ನು ರಕ್ಷಿಸಬೇಕು, ಬ್ಯಾಂಕ್ ಉದ್ಯೋಗಿಗಳ ಮೇಲಾಗುತ್ತಿರುವ




ದಾಳಿಯಿಂದ ರಕ್ಷಿಸಬೇಕು, ಐಡಿಬಿಐ ಬ್ಯಾಂಕಿನಲ್ಲಿ ಸರಕಾರಿ ಬಂಡವಾಳವು ಶೇಕಡಾ 51 ಕ್ಕಿಂತ ಹೆಚ್ಚಿರುವಂತೆ ನೋಡಿಕೊಳ್ಳಬೇಕು ಹಾಗೂ ಇನ್ನಿತರ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಸರಕಾರವನ್ನು ಆಗ್ರಹಿಸಿ ಬ್ಯಾಂಕ್ ಕಾರ್ಮಿಕ ಸಂಘಟನೆಗಳ ಸಂಯುಕ್ತ ವೇದಿಕೆಯ ರಾಷ್ಟ್ರೀಯ ಸಮಿತಿಯು ಈ ಧರಣಿಗೆ ಕರೆ ನೀಡಿತ್ತು.

ಸಂಯುಕ್ತ ವೇದಿಕೆಯ ಎಲ್ಲ 9 ಸಂಘಟನೆಗಳು ಧರಣಿಯಲ್ಲಿ ಪಾಲ್ಗೊಂಡು ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದವು.

ಧರಣಿಯಲ್ಲಿ ಸಂಯುಕ್ತ ವೇದಿಕೆಯ ಸುಮಾರು ಎರಡು ಸಾವಿರಕ್ಕೂ ಹೆಚ್ಚಿನ ಸಂಖ್ಯೆಯ ಬ್ಯಾಂಕ್ ನೌಕರರು ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು. ಕರ್ನಾಟಕ ರಾಜ್ಯದಿಂದಲೂ ನೂರಾರು ನಾಯಕರು ಭಾಗವಹಿಸಿದರು. ಕರ್ನಾಟಕ ಪ್ರದೇಶ ಬ್ಯಾಂಕ್ ಎಂಪ್ಲಾಯೀಸ್ ಫೆಡರೇಷನ್ನ ಅಧ್ಯಕ್ಷ ಎಂ.ಎಸ್.ಶ್ರೀನಿವಾಸನ್, ಪ್ರಧಾನ ಕಾರ್ಯದರ್ಶಿ

ಎಂ.ಜಯನಾಥ್, ಉಪ ಪ್ರಧಾನ ಕಾರ್ಯದರ್ಶಿ ಕೆ.ಜಿ.ಪಣೀಂದ್ರ ಹಾಗೂ ಇತರ ಪದಾಧಿಕಾರಿಗಳಾದ ವಿನ್ಸೆಂಟ್ ಡಿಸೋಜ, ಕೆ. ರಾಘವೇಂದ್ರ ನಾಯರಿ, ಶ್ರೀಲತಾ ಕುಲಕರ್ಣಿ, ಶಿವಕುಮಾರ್, ಎಂ.ಪದ್ಮನಾಭನ್, ಸ್ಟೀಫನ್ ಜಯಚಂದ್ರ, ಕೆ.ನಾಗರಾಜ್, ಎಂ.ಸಿ.ಮಲ್ಲೇಶ್, ಆರ್.ಕೆ.ಬಲ್ಲಾಳ್, ವಿಕ್ಟರ್ ಮೆನೆಂಜಿಸ್, ದಯಾನಂದ ಅಂಬರಕರ್, ಬಸವನಗೌಡ ಪಾಟೀಲ, ಶ್ರೀನಾಥ್, ರಾಜಣ್ಣ, ಅರುಣ್ ಕುಮಾರ್ ಹಾಗೂ ಯುಎಫ್ಬಿಯು ರಾಜ್ಯ ಸಂಚಾಲಕ ಕೆ.ಎನ್.ಗಿರಿರಾಜ್, ಶಂಕರಪ್ಪ ಇನ್ನಿತರರು ಭಾಗವಹಿಸಿದ್ದರು.

**ಕಾರ್ಯಪಾಲಕ ಇಂಜಿನಿಯರ್ ರವರ ಕಛೇರಿ, ಲೋಕೋಪಯೋಗಿ ಇಲಾಖೆ, ಚಿಕ್ಕಮಗಳೂರು ವಿಭಾಗ, ಚಿಕ್ಕಮಗಳೂರು**

ಸಂಖ್ಯೆ: 31/2024–25 ದಿನಾಂಕ: 28.02.2025

## ಅಲ್ಪಾವಧಿ ಟೆಂಡರ್ ಪ್ರಕಟಣೆ

ಮೇಲ್ಕಂಡ ಟೆಂಡರ್ ಪ್ರಕಟಣೆಯಲ್ಲಿ ಚಿಕ್ಕಮಗಳೂರು ಜಿಲ್ಲೆ, ಲೋಕೋಪಯೋಗಿ ಇಲಾಖೆ ಉಪವಿಭಾಗಗಳಿಗೆ ಒಳಪಡುವ ಲೆಕ್ಕ. ಶೀರ್ಷಿಕೆ: 8443 ಠೇವಣಿ ವಂತಿಕೆ ಅಡಿಯಲ್ಲಿನ ಒಟ್ಟು 19 ಕಾಮಗಾರಿಗಳಿಗೆ ಕೆಪಿಪಿ ಪೋರ್ಟಲ್ ಮೂಲಕ ಅರ್ಹ ಗುತ್ತಿಗೆದಾರ–ರಿಂದ ಟೆಂಡರ್ ಆಹ್ವಾನಿಸಲಾಗಿದೆ. ಕಾಮಗಾರಿಗಳನ್ನು ವಹಿಸಿಕೊಳ್ಳುವ ಅಥವಾ ನಿರ್ವಹಿಸಿರುವ ಸಾಮರ್ಥ್ಯದ ಬಗ್ಗೆ, (Standard Tender Document KW– 1 & 2 ರಂತೆ) ವಿವರಗಳನ್ನು ಲಗತ್ತಿಸತಕ್ಕದ್ದು ಗುತ್ತಿಗೆದಾರರಿಗೆ ಅಧಿನಿಯಮ 3ರಲ್ಲಿ ನಮೂದಿಸಿರುವ ಕನಿಷ್ಠ ಅರ್ಹತೆಗಳಿದ್ದರೆ ಮಾತ್ರ ಗುತ್ತಿಗೆಯನ್ನು ವಹಿಸಬಹುದಾಗಿರುತ್ತದೆ, ಕನಿಷ್ಠ ಅಂದಾಜು ಮೊತ್ತ ರೂ.15.00 ಲಕ್ಷಗಳು ಹಾಗೂ ಗರಿಷ್ಠ ಅಂದಾಜು ಮೊತ್ತ ರೂ.50.00 ಲಕ್ಷಗಳು ಆಗಿರುತ್ತವೆ, ಕೆಪಿಪಿ ಪೋರ್ಟಲ್ ಟೆಂಡರ್ ಸಲ್ಲಿಸಬೇಕಾಗಿರುವ 19 ಕಾಮಗಾರಿಗಳಿಗೆ (ಇಂ.ಸಂಖ್ಯೆ 19066, 19067, 19070, 19557, 19074, 19076, 19078, 19079, 19080, 19081, 19107, 19083, 19098, 19099, 19100, 19101, 19102 19103, 19104 ದಿನಾಂಕ:10.03.2025 ರಂದು) ಸಂಜೆ 4.30 ಗಂಟೆಯೊಳಗೆ ಟೆಂಡರ್ ಸಲ್ಲಿಸಬೇಕು, ಹೆಚ್ಚಿನ ವಿವರಗಳಿಗೆ ಕಛೇರಿ ವೇಳೆಯಲ್ಲಿ ವಿಷಯ ನಿವಾಹಕರನ್ನು ಸಂಪರ್ಕಿಸಿ ತಿಳಿಯಬಹುದಾಗಿದೆ.

ಸಹಿ/–
ಕಾರ್ಯಪಾಲಕ ಇಂಜಿನಿಯರ್,
ಲೋಕೋಪಯೋಗಿ ಇಲಾಖೆ,
ಚಿಕ್ಕಮಗಳೂರು ವಿಭಾಗ, ಚಿಕ್ಕಮಗಳೂರು

# ಬೆಂಕಿ ತಗುಲಿ 15 ಎಕರೆ ಕಾಫಿತೋಟಕ್ಕೆ ನಷ್ಟ



**ಚಿಕ್ಕಮಗಳೂರು:** ಮೂಡಿಗೆರೆ ತಾಲೂಕು ಕಣಗದ್ದೆ ಗ್ರಾಮದ ಇಳೇಖಾನ್ ಚಂದ್ರು ಎಂಬುವರ ಕಾಫಿತೋಟಕ್ಕೆ ಬೆಂಕಿ ತಗುಲಿ 15 ಎಕರೆಯಷ್ಟು ಕಾಫಿತೋಟ ಬೆಂಕಿಯಿಂದ ಸುಟ್ಟು ಹೋಗಿ ಅಪಾರ ಪ್ರಮಾಣದ ನಷ್ಟ ಸಂಭವಿಸಿದೆ.
ಕಾಫಿತೋಟಕ್ಕೆ ಬೆಂಕಿ ಹತ್ತಿಕೊಂಡಿರುವ ವಿಷಯ ತಿಳಿಯುತ್ತಿದ್ದ ಸ್ಥಳೀಯರು ಅಕ್ಕಪಕ್ಕದ ಕಾಫಿತೋಟಗಳಲ್ಲಿ ಕೆಲಸ ಮಾಡುತ್ತಿದ್ದ ವರು ಧಾವಿಸಿ ಬೆಂಕಿ ನಂದಿಸಲು ಯತ್ನಿಸಿದರು. ಅಷ್ಟರಲ್ಲಿ ಸಮೀಪದ ತೋಟಗಳಿಗೂ ಬೆಂಕಿ ವ್ಯಾಪಿಸಿತ್ತು. ಘಟನೆಯಿಂದ ಅಕ್ಕಪಕ್ಕದ ನಾಲ್ಕೈದು ಮಂದಿಯ ಕಾಫಿತೋಟಗಳು ಬೆಂಕಿಗೆ ಆಹುತಿಯಾಗಿದೆ.
ತೋಟಗಳಿಗೆ ಹೊಂದಿಕೊಂಡಂತೆ ಸಾರಗೋಡು ಮೀಸಲು ಅರಣ್ಯವಿದ್ದು, ಅರಣ್ಯಕ್ಕೆ ಬೆಂಕಿ ತಗುಲದಂತೆ ತಡೆಯಲು ಸಿಬ್ಬಂದಿ ಹಾಗೂ ಸಾರ್ವಜನಿಕರು ಹರಸಾಹಸಪಟ್ಟರು. ಚಿಕ್ಕಮಗಳೂರು ಅಗ್ನಿಶಾಮಕ ದಳದ ಸಿಬ್ಬಂದಿಗಳು ಒಂದು ಗಂಟೆಗೂ ಹೆಚ್ಚುಕಾಲ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದರು. ಇನ್ನೂ ಕಾಫಿತೋಟಕ್ಕೆ ಬೆಂಕಿ ಹತ್ತಿಕೊಳ್ಳಲು ಕಾರಣವೇನೆಂದು ತಿಳಿದು ಬಂದಿಲ್ಲ. ಬೆಂಕಿಯಿಂದ ಕೋಟ್ಯಾಂತರ ರೂ. ನಷ್ಟ ಸಂಭವಿಸಿದೆ.

## ಬೆಂಕಿಕೆರೆ ಕಣಿವೆಗೆ ಬೆಂಕಿ: ಬೆಂಕಿ ನಂದಿಸಲು ಹರಸಾಹಸ

**ಚನ್ನಗಿರಿ:** ತಾಲೂಕಿನ ರಾಷ್ಟ್ರೀಯ ಹೆದ್ದಾರಿ 13ರಲ್ಲಿ ಬರುವ ಬೆಂಕಿಕೆರೆಕಣಿವೆಯ ನೀಲಗಿರಿ ಪ್ಲಾಂಟೇಷನ್ ಗೆ ಮಂಗಳವಾರ ರಾತ್ರಿಯಿಂದ ಬೆಂಕಿ ಬಿದ್ದಿದ್ದು ಬಾರೀ ಪ್ರಮಾಣದ ನೀಲಗಿರಿಯ ಮರಗಳು ಸೇರಿದಂತೆತ್ಯಾಗ, ಅಕೇಷಿಯ ಗಿಡಗಳು ಬೆಂಕಿಯಕೆನ್ನಾಲಿಗೆಗೆ ಸಿಕ್ಕು ನಲುಗುತ್ತಿವೆ.
ಈ ಅರಣ್ಯ ಪ್ರದೇಶವುಚನ್ನಗಿರಿ ವಲಯಅರಣ್ಯ ಪ್ರದೇಶಕ್ಕೆ ಸೇರಿದ್ದುಚನ್ನಗಿರಿ ಪಟ್ಟಣದಿಂದ ಸುಮಾರು 6 ಕಿ.ಮೀ ದೂರದಲ್ಲಿದ್ದುರಾಷ್ಟ್ರೀಯ ಹೆದ್ದಾರಿ 13ರಲ್ಲಿನ ಹೊಳಲ್ಕೆರೆ-ಚನ್ನಗಿರಿ ಗೆ ಹೋಗುವ ರಸ್ತೆಯ ಪಕ್ಕ ದಲ್ಲಿಯೇ ಈ ಅರಣ್ಯ ಪ್ರದೇಶವಿದೆ.ಈ ರಸ್ತೆಯಲ್ಲಿ ದ್ವಿಚಕ್ರವಾಹನಗಳಿಂದ ಹಿಡಿದುದೊಡ್ಡಗಾತ್ರದ ವಾಹನಗಳು ಸಂಚರಿಸುವ ಸದಾ ವಾಹನಗಳ ದಟ್ಟಣೆಯಿಂದಕೂಡಿದರಸ್ತೆಇದಾಗಿದ್ದು ಈ ಅರಣ್ಯ ಪ್ರದೇಶಕ್ಕೆ ಬಿದ್ದಿರುವ ಬಾರೀ ಬೆಂಕಿಯಿಂದ ಹೊರ ಬರುತ್ತಿರುವ ಹೊಗೆ ಯಿಂದರಸ್ತೆಯಲ್ಲಿ ಸಂಚರಿಸುವ ವಾನಹ ಸವಾರರುಜೀವವನ್ನು ಹಿಡಿದುಕೊಂಡು ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.
ಈ ಪ್ಲಾಂಟೇಷನ್ ನ ಅಕ್ಕ-ಪಕ್ಕದಗ್ರಾಮವಾದ ಹೊನ್ನನಾಯ್ಕನಹಳ್ಳಿ, ನಾರಶೆಟ್ಟಿಹಳ್ಳಿ ಈ ಗ್ರಾಮದಜನರು ಬೀಸುತ್ತಿರುವ ಮೂಡಣ ಗಾಳಿಗೆ ಗ್ರಾಮಕ್ಕೆಎಲ್ಲಿ ಬೆಂಕಿ ತಗುಲುವುದೋ ಎಂಬ ಅತಂಕದಲ್ಲಿದ್ದಾರೆ.
ಈ ಬಗ್ಗೆ ನಾರಶೆಟ್ಟಿಹಳ್ಳಿ ಗ್ರಾಮದ ಶಂಕರಪ್ಪ, ರುದ್ರಪ್ಪಎಂಬುವರುಅರಣ್ಯ ಪ್ರದೇಶಕ್ಕೆ ಬೆಂಕಿ ಬಿದ್ದಿರುವ ಮಾಹಿತಿಯನ್ನುಅರಣ್ಯ ಇಲಾಖೆಗೆ ತಿಳಿಸಿದ್ದರೂ ಸಹಾ ಬೆಂಕಿಯನ್ನು ನಂದಿಸುವಲ್ಲಿಯಾವುದ 'ಕ್ರಮಕೈಗೊಂಡಿಲ್ಲಎಂದು ಹೇಳಿದ್ದಾರೆ.



## ಗೋ ಶಾಲೆಯಲ್ಲಿ ಬಣವೆಗೆ ಬೆಂಕಿ ತಗುಲಿ ನಷ್ಟ

**ಕೊಪ್ಪ:** ತಾಲ್ಲೂಕಿನ ಗೌರಿಗದ್ದೆ ಸಮೀಪದ ಮೇಲುಬಿಳ್ರೆಯಲ್ಲಿ ಗೋಲೋಕ ಗೋ ಶಾಲೆಯಲ್ಲಿ ಹುಲ್ಲಿನ ಬಣವೆಗೆ ಬೆಂಕಿ ತಗುಲಿ ಅಪಾರ ನಷ್ಟ ಸಂಭವಿಸಿದೆ. ಗೋವುಗಳಿಗೆ ಮೇವಿನ ಕೊರತೆ-ಯಾಗಿದ್ದು, ಮೇವಿನ ನೆರವು ನೀಡುವಂತೆ ಗೋ ಶಾಲೆ ಟ್ರಸ್ಟ್ ಮನವಿ ಮಾಡಿದೆ. ಸಂಗ್ರಹಿಸಿ ಇಡಲಾಗಿದ್ದ, ಸುಮಾರು 6 ತಿಂಗಳಿಗೆ ಸಾಕಾಗುವಷ್ಟಿದ್ದ 12 ಲಕ್ಷ ಮೌಲ್ಯದ ಮೇವು ಸುಟ್ಟು ಭಸ್ಮವಾಗಿದೆ. ಗೋಶಾಲೆಗೆ ಬೇರೆ ಆದಾಯ ಮೂಲಗಳಿಲ್ಲ. ಈಗ ಆಗಿರುವ ಹಾನಿಯಿಂದ ಚೇತರಿಸಿಕೊಳ್ಳಲು ಸಾರ್ವಜನಿಕರ ನೆರವಿನ ಅವಶ್ಯಕತೆ ತುರ್ತಾಗಿದೆ ಎಂದು ಟ್ರಸ್ಟ್ ಪದಾಧಿಕಾರಿಗಳು ಹೇಳಿದ್ದಾರೆ.ನೆರವು ನೀಡುವರು, ಬ್ಯಾಂಕ್ ಖಾತೆ: ಮಲೆನಾಡು ಗಿಡ್ಡ ಸಂವರ್ಧನಾ ಕೇಂದ್ರ, ಕರ್ಣಾಟಕ ಬ್ಯಾಂಕ್, ಕೊಪ್ಪ ಶಾಖೆ, ಖಾತೆ ಸಂಖ್ಯೆ 4102000100065601, ಐ.ಎಫ್.ಎಸ್.ಸಿ ಎಂಖಃ0000410 ಮೂಲಕವೂ ಸಹಾಯ ಮಾಡಬಹುದಾಗಿದೆ ಎಂದು ತಿಳಿಸಿದೆ.

## ಆನೆದಾಳಿಯಿಂದ ಅಡಿಕೆ ತೋಟಕ್ಕೆ ಹಾನಿ

**ಎನ್.ಆರ್.ಪುರ:** ತಾಲ್ಲೂಕಿನ ಕಡಹಿನಬೈಲು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬೀಡು ಬಿಟ್ಟಿರುವ ಕಾಡಾನೆಗಳ ಹಿಂಡು ರೈತರ ತೋಟಗಳಿಗೆ ನುಗ್ಗಿ ಬೆಳೆ ನಾಶ ಮಾಡುತ್ತಿವೆ. ತಾಲ್ಲೂಕಿನ ಸೂಸಲವಾನಿ ಗ್ರಾಮದ ಕೆ.ವಿ. ಜೋನಿ ಎಂಬುವರ ಅಡಿಕೆ ತೋಟಕ್ಕೆ ದಾಳಿ ಮಾಡಿರುವ ಆನೆಗಳ ಹಿಂಡು ಫಸಲಿಗೆ ಬಂದಿದ್ದ 5 ವರ್ಷದ 100ಕ್ಕೂ ಅಧಿಕ ಅಡಿಕೆ ಮರಗಳನ್ನು ಧರೆಗುರುಳಿಸಿ ನಾಶ ಮಾಡಿದ್ದು ಲಕ್ಷಾಂತ ರೂಪಾಯಿ ನಷ್ಟವಾಗಿದೆ. ಮನೆಯ ಸಮೀಪದ ತೆಂಗಿನಮರದ ಗರಿ ಎಳೆದು ತಿನ್ನುವಾಗ ಮನೆಯವರಿಗೆ ಎಚ್ಚರವಾಗಿದೆ. ಪಟಾಕಿ ಸಿಡಿಸಿದ ನಂತರ ಆನೆಗಳು ತೋಟದಿಂದ ಹೋಗಿವೆ.

## ದೇವರ ಮನೆ ಗುಡ್ಡದಲ್ಲಿ ಕಾಡ್ಗಿಚ್ಚು

**ಕೊಟ್ಟಿಗೆಹಾರ:** ಬಾಳೂರು ಮೀಸಲು ಅರಣ್ಯ-ಕ್ಕೆ ಹೊಂದಿಕೊಂಡಿರುವ ದೇವರ ಮನೆ ಗುಡ್ಡದಲ್ಲಿ ಕಾಡ್ಗಿಚ್ಚು ಕಾಣಿಸಿಕೊಂಡಿದ್ದು, ಅರಣ್ಯ ಇಲಾಖೆ ಹರಸಾಹಸಪಟ್ಟು ಬೆಂಕಿ ನಂದಿಸಿದರು. ದೇವರು ಮನೆಯು ಐತಿಹಾಸಿಕ ಸ್ಥಳವಾಗಿದ್ದು, ಸಾವಿರಾರು ಜನರು ಬರುತ್ತಾರೆ. ಕಿಡಿಗೇಡಿಗಳು ಅರಣ್ಯಕ್ಕೆ ಬೆಂಕಿ ಹಚ್ಚಿದ್ದು, ಹತ್ತಾರು ಎಕರೆ ಹುಲ್ಲುಗಾವಲು ಭಸ್ಮವಾಗಿದೆ. ಕಾರ್ಯಾಚರಣೆಯಲ್ಲಿ ಉಪ ವಲಯ ಅರಣ್ಯಾಧಿಕಾರಿ ರಂಜಿತ್, ಗಸ್ತು ಅರಣ್ಯ ಪಾಲಕ ಅಭಿಜಿತ್, ಉಮೇಶ್, ಅರಣ್ಯ ವೀಕ್ಷಕ ದಿನೇಶ್ ಪಾಲ್ಗೊಂಡಿದ್ದರು.

## ಸರ್ಕಾರಿ ಶಾಲೆ ಸುವರ್ಣ ಮಹೋತ್ಸವ

**ಚಿಕ್ಕಮಗಳೂರು:** ತಾಲ್ಲೂಕಿನ ಕಬ್ಬಿನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಸುವರ್ಣ ಮಹೋತ್ಸವ ಕಾರ್ಯಕ್ರಮವು ಫೆ.28 ರಂದು ಮಧ್ಯಾಹ್ನ 1 ಗಂಟೆಗೆ ಗ್ರಾಮದಲ್ಲಿ ನಡೆಯಲಿದೆ. ಅಂದು ಕಾರ್ಯಕ್ರಮವನ್ನು ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿ ಗಳಾಗಿ ಶಾಸಕ ಹೆಚ್.ಡಿ.ತಮ್ಮಯ್ಯ, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಬೋಜೇಗೌಡ, ಸಿ.ಟಿ.ರವಿ ಭಾಗವಹಿಸಲಿದ್ದಾರೆ. ಕೆ.ಮೋಹನಗೌಡ ಅಧ್ಯಕ್ಷತೆ ವಹಿಸಲಿದ್ದಾರೆ.

## ಮಾ.5ಕ್ಕೆ ಕುಂದು ಕೊರತೆ ಸಭೆ

**ಕೊಪ್ಪ:** ತಾಲ್ಲೂಕು ಕಚೇರಿಯಲ್ಲಿನ ನ್ಯಾಯಾಲಯ ಸಭಾಂಗಣದಲ್ಲಿ ಮಾರ್ಚ್ 5ರಂದು ಬೆಳಿಗ್ಗೆ 11 ಗಂಟೆಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಕುಂದು ಕೊರತೆ ಸಭೆ ನಡೆಯಲಿದೆ. ಅಹವಾಲುಗಳನ್ನು ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರಿಗೆ ಲಿಖಿತವಾಗಿ ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಬೈಕ್ ಅಪಘಾತದಲ್ಲಿ ಮಹಿಳೆ ಸಾವು

ನರಸಿಂಹರಾಜಪುರ: ಪಟ್ಟಣದ ಬಸ್ತಿಮಠ ಸಮೀಪದ ಮುಖ್ಯ ರಸ್ತೆಯಲ್ಲಿ ನಡೆದ ಬೈಕ್ ಅಪಘಾತದಲ್ಲಿ ಮಹಿಳೆಯೊಬ್ಬರು ಮೃತಪಟ್ಟಿದ್ದಾರೆ. ಬಸ್ತಿಮಠದ ನಿವಾಸಿ ಜ್ವಾಲಾ (65) ಮೃತಪಟ್ಟವರು. ಪತಿ ವಿಜಯ ಕುಮಾರ್ ಅವರು ಜ್ವಾಲಾ ಅವರನ್ನು ಸರ್ಕಾರಿ ಆಸ್ಪತ್ರೆಗೆ ಸ್ಕೂಟಿಯಲ್ಲಿ ಕರೆದು-ಕೊಂಡು ಹೋಗಿ ಚಿಕಿತ್ಸೆ ಕೊಡಿಸಿ ಹಿಂದಿರುಗಿ ಬಸ್ತಿಮಠ ಸಮೀಪದ ತಮ್ಮ ಮನೆ ಹತ್ತಿರ ಬರುವಾಗ ಹಿಂಬದಿಯಿಂದ ಬಂದ ಬೈಕ್ ಡಿಕ್ಕಿ ಹೊಡೆದಿದೆ. ಇದರಿಂದ ಸ್ಕೂಟಿ ಉರುಳಿ ಬಿದ್ದು ಜ್ವಾಲಾ ಅವರಿಗೆ ತೀವ್ರ ಗಾಯಗಳಾಗಿವೆ. ವಿಜಯ ಕುಮಾರ್ ಅವರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

## ಗಂಧದಮರ ಕಡಿತ: ದಂಪತಿಗಳ ಬಂಧನ

**ಚಿಕ್ಕಮಗಳೂರು:** ತಾಲೂಕಿನ ಕಾಮೇನಹಳ್ಳಿ ಮೀಸಲು ಅರಣ್ಯದಲ್ಲಿ ಗಂಧದ ಮರ ಕಡಿಯುತ್ತಿದ್ದ ದಂಪತಿಯನ್ನು ಬುಧವಾರ ಬಂಧಿಸಲಾಗಿದೆ. ಸೆಲ್ವಿ ಮತ್ತು ಬಾಲಕೃಷ್ಣ ಬಂಧಿತ ದಂಪತಿ ಎಂದು ಹೇಳಲಾಗಿದೆ. ಕಾಡಿನಲ್ಲಿ ಗಂಧದ ಮರ ಕಡಿಯುವಾಗ ಅರಣ್ಯ ಇಲಾಖೆ ಸಿಬ್ಬಂದಿ ದಾಳಿ ಮಾಡಿ ಬಂಧಿಸಿದ್ದಾರೆ.ಸೆಲ್ವಿ ಹಾಗೂ ಬಾಲಕೃಷ್ಣ ಕಾಡಿನಲ್ಲಿ ಗಂಧದ ಮರ ಕಡಿಯುವಾಗ ದಾಳಿ ಮಾಡಿದ್ದು, 6 ಕೆಜಿ ಗಂಧದ ತುಂಡು, 4 ಕೆಜಿ ಗಂಧದ ಚಕ್ಕೆ ವಶಕ್ಕೆ ಪಡೆದುಕೊಳ್ಳಲಾಗಿದೆ. ಚಿಕ್ಕಮಗಳೂರು ಅರಣ್ಯ ಇಲಾಖೆ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

## ಗುಣಮಟ್ಟದ ಶಿಕ್ಷಣ ನೀಡುವ ಜೊತೆಗೆ ಪೌಷ್ಟಿಕಯುಕ್ತ ಆಹಾರ ನೀಡಿ



**ಸಾಗರ :** ಮಕ್ಕಳು ಭಾರತದ ಭವಿಷ್ಯದ ಪ್ರಜೆಗಳು. ಅವರಿಗೆ ಗುಣಮಟ್ಟದ ಶಿಕ್ಷಣ ನೀಡುವ ಜೊತೆಗೆ ಪೌಷ್ಟಿಕಯುಕ್ತ ಆಹಾರ ನೀಡಿ ಅವರನ್ನು ಸದೃಢರನ್ನಾಗಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಪ್ರಾಥಮಿಕ ಶಾಲಾಹಂತದಲ್ಲಿಯೆ ಮಕ್ಕಳಿಗೆ ಈ ಎಲ್ಲಾ ಸವಲತ್ತುಗಳು ತಲುಪಬೇಕು ಎಂದು ಶಾಸಕ ಹಾಗೂ ಅರಣ್ಯ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಗೋಪಾಲಕೃಷ್ಣ ಬೇಳೂರು ತಿಳಿಸಿದರು.ತಾಲ್ಲೂಕಿನ ಬೆಳೆಯೂರು-ದಿಗಟೆಕೊಪ್ಪ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶತಮಾನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಮಕ್ಕಳಲ್ಲಿನ ಪ್ರತಿಭೆ ಅನಾವರಣಗೊಳ್ಳಬೇಕು. ಅವರನ್ನು ದೇಶದ ಸಂಪನ್ಮೂಲ ಶಕ್ತಿಯನ್ನಾಗಿ ರೂಪಿಸಬೇಕು. ಮಕ್ಕಳ ಭವಿಷ್ಯ ರೂಪಗೊಂಡಂತೆ ದೇಶ ಕೂಡ ಪ್ರಗತಿಯತ್ತ ಸಾಗುತ್ತದೆ. ತಾಲ್ಲೂಕಿನ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಏನೇ ಸಮಸ್ಯೆಯಿದ್ದರೂ ಪೋಷಕರು ಮಕ್ಕಳನ್ನು ಶಿಕ್ಷಣದಿಂದ ವಂಚಿತರನ್ನಾಗಿ ಮಾಡಬಾರದು. ಶಾಲೆಯೊಂದು ಶತಮಾನೋತ್ಸವ ಆಚರಿಸುತ್ತಿದೆ ಎಂದರೆ ಶಿಕ್ಷಣ ಪಡೆದು ಉನ್ನತ ಸ್ಥಾನದಲ್ಲಿರುವವರು ಹೆಮ್ಮೆ ಪಡುವ ಸಂಗತಿ ಎಂದರು.
ಮಾಜಿ ಸಚಿವ ಕಾಗೋಡು ತಿಮ್ಮಪ್ಪ ಅವರನ್ನು ಗ್ರಾಮಸ್ಥರ ಪರವಾಗಿ ಸನ್ಮಾನಿಸಲಾಯಿತು. ಎಸ್.ಡಿ.ಎಂ.ಸಿ. ಅಧ್ಯಕ್ಷ ಅಣ್ಣಪ್ಪ ಡಿ.ಕೆ. ಅಧ್ಯಕ್ಷತೆ ವಹಿಸಿದ್ದರು. ಶತಮಾನೋತ್ಸವ ಆಚರಣಾ ಸಮಿತಿ ಅಧ್ಯಕ್ಷರೂ ಹಾಗೂ ಗ್ರಾಮ ಪಂಚಾಯ್ತಿ ಅಧ್ಯಕ್ಷ ನಾರಾಯಣಪ್ಪ ಕೆ ದಿಗಟೆಕೊಪ್ಪ ವಿವಿಧ ಸಾಧಕರನ್ನು ಸನ್ಮಾನಿಸಿದರು.
ವೇದಿಕೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಪರಶುರಾಮಪ್ಪ ಈ., ಹೊಳೆಯಪ್ಪ, ಕಲಸೆ ಚಂದ್ರಪ್ಪ, ಶಿಕ್ಷಣ ಸಂಯೋಜ-ಕ ಪಾಲಾಕ್ಷಪ್ಪ, ಗ್ರಾ.ಪಂ ಅಧ್ಯಕ್ಷೆ ಉಷಾ ಪ್ರಸನ್ನ, ಸುಮಾ, ರಾಧಾಕೃಷ್ಣ ಬಂದಗದ್ದೆ, ಮುಖ್ಯ ಶಿಕ್ಷಕ ಎಂ.ಪಿ. ಸತ್ಯನಾರಾಯಣ, ಶಿಕ್ಷಕರ ಸಂಘದ ಅಧ್ಯಕ್ಷ ಮಾಲತೇಶ್ ಪ್ರಭಾರಿ ಮುಖ್ಯ ಶಿಕ್ಷಕಿ ಸುವರ್ಣಮ್ಮ ಆಚಾರ್ ಮೊದಲಾದವರು ಹಾಜರಿದ್ದರು.

## ಮಕ್ಕಳ ಮುಗ್ದ ಮನಸ್ಸು ಹಸಿ ಮಣ್ಣಿನ ಮುದ್ದೆಯಂತೆ

**ಚಿಕ್ಕಮಗಳೂರು:** ಮಕ್ಕಳ ಮುಗ್ಧ ಮನಸ್ಸು ಹಸಿ ಮಣ್ಣಿನ ಮುದ್ದೆಯಂತೆ, ವಾಲಿದ ಕಡೆ ಬಾಗುವುದು ಸಹಜ, ಶಿಕ್ಷಕರು ಮಕ್ಕಳ ಮನಸ್ಸನ್ನು ಸ್ಥಿರವಾಗಿ ಗಟ್ಟಿಗೊಳಿಸಿ ದೇಶದ ಸತ್ಪ್ರಜೆಗಳಾಗಿ ಮಾಡ ಬೇಕು ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹೇಳಿದರು.
ನಗರದ ಕುವೆಂಪು ಕಲಾಮಂದಿರದಲ್ಲಿ ವ್ಯಾಲಿ ಕಿಡ್ಸ್‌ನ ಶಾಲಾ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿ ಮಕ್ಕಳನ್ನು ಸಂಸ್ಕಾರವಂತ, ಶಿಕ್ಷಣವಂತ ,ರಾಷ್ಟ್ರಪೇಮಿಗಳಾಗಿ ರೂಪುಗೊಳಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಆ ನಿಟ್ಟಿನಲ್ಲಿ ವ್ಯಾಲಿ ಕಿಡ್ಸ್ ಶಾಲೆ ಲಾಭದ ಆಸೆಗೆ ಒಳಗಾಗದೇ, ಮಕ್ಕಳಲ್ಲಿ ರಾಷ್ಟ್ರಭಕ್ತಿ, ಮೌಲ್ಯ ಯು ತ ಶಿಕ್ಷಣ ಹಾಗೂ ಸಂಸ್ಕಾರವನ್ನು ಬೋಧಿಸುತ್ತಿದೆ ಎಂದರು.
ಇತ್ತೀಚಿಗೆ ದಿನದಲ್ಲಿ ವಿದ್ಯಾರ್ಥಿಗಳು ಮೊಬೈಲ್ ಚಟ, ಅಧಿಕ ಅಂಕ ಗಳಿಸದ ಕಾರಣ ಆತ್ಮಹತ್ಯೆಗೆ ತುತ್ತಾ ಗುತ್ತಿವೆ. ಇದಕ್ಕೆ ಮೌಲ್ಯಧಾರಿತ ಶಿಕ್ಷಣದ ಕೊರತೆಯೇ ಕಾರಣ. ಪಾಲಕರು ಕೇವಲ ಅಂಕ ಗಳಿಕೆಗೆ ಮಾತ್ರ ಮಕ್ಕಳನ್ನು ಸೀಮಿತಗೊಳಿಸದೇ ವ್ಯವಹಾರಿಕ ಜ್ಞಾನದ ಪರಿಪಾಠವನ್ನು ಬೋಧಿಸುವತ್ತ ಗಮನಹರಿಸಬೇಕು ಎಂದರು.
ನಗರಸಭೆ ಸದಸ್ಯ ಕವಿತಾ ಶೇಖರ್ ಮಾತನಾಡಿ ಮಕ್ಕಳ ಜೀವನ ಖಾಲಿ ಚೀಲದಂತೆ, ಆಸಕ್ತಿ ಹೊಂ ದಿರುವ ವಿಷಯದಲ್ಲಿ ಶಿಕ್ಷಕರು ಜ್ಞಾನವನ್ನು ತುಂಬಿಸಬೇಕು. ಭವಿಷ್ಯದಲ್ಲಿ ಸಚ್ಚಿನ್ ತೆಂಡೂಲ್ಕರ್, ಲತಾ ಮಂಗೇಶ್ವರ್, ಪಿಟಿಉಷಾ ಅಥವಾ ದೇಶದ ಹೆಮ್ಮೆಯ ಮಾಜಿ ರಾಷ್ಟ್ರಪತಿ ಕಲಾಂ ಮಾದರಿಯಲ್ಲಿ ಸಾಧನೆಗೈ ಯ್ಯಲು ಸಾಧ್ಯವಾಗಲಿದೆ ಎಂದರು.
ವೈದ್ಯ ಡಾ|| ಉಮೇಶ್ ರಾವ್ ಮಾತನಾಡಿ ವಿದ್ಯಾರ್ಥಿಗಳ ಉಜ್ವಲ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಮೊದಲು ಪಾಲಕರು ಟಿವಿ ಧಾರವಾಹಿಗಳನ್ನು ಬದಿಗಿರಿಸಿ, ವಿದ್ಯಾರ್ಜನೆ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕು. ಅಲ್ಲದೇ ದೇವಾಲಯ ಕಳಿಸುವ ಜೊತೆಗೆ ಇತಿಹಾಸ ಧರ್ಮಗ್ರಂಥದ ಸಾರವನ್ನು ಪರಿಚಯಿಸಿದರೆ ನಾಡಿನ ಲ್ಲಿ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಲು ಸಾಧ್ಯ ಎಂಧರು.
ವೇದಿಕೆ ಕಾರ್ಯಕ್ರಮದ ನಂತರ ಶಾಲಾಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಈ ಸಂದರ್ಭದಲ್ಲಿ ವ್ಯಾಲಿ ಕಿಡ್ಸ್ ಶಾಲೆಯ ಪೌಂಡರ್ ಮಂಜುಳಾ ಗಂಗಾಧರ್, ವಿದ್ಯಾರ್ಥಿಗಳು, ಪಾಲಕರು ಉಪಸ್ಥಿತರಿದ್ದರು.




## ಜನಪದದಲ್ಲಿ ಅಡಗಿದೆ ಸಂಸ್ಕೃತಿ



**ಚಿತ್ರದುರ್ಗ :** ಕನ್ನಡ ನಾಡು, ಭಾಷೆ, ಸಂಸ್ಕೃತಿ ವಿಶ್ವದಲ್ಲಿಯೇ ಅತ್ಯಂತ ಸೌಂದರ್ಯವಾಗಿದ್ದು, ಕನ್ನಡಿಗರು ಸ್ವಾಭಿಮಾನಿಗಳಾಗಿ ಜೀವಿಸುತ್ತಿರುವುದು ದೇಶಕ್ಕೆ ಮಾದರಿ ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್. ಕೆ.ಸರ್ಧಾರ್ ಹೇಳಿದರು.ನಗರದ ತರಾಸು ರಂಗಮದಿರದಲ್ಲಿ ಹಮ್ಮಿಕೊಂಡಿದ್ದ ಬಡ ಮಕ್ಕಳಿಗೆ ನೋಟ್ ಬುಕ್ ವಿತರಣೆ, ಜನಪದ ಜಾಗೃತಿ ಪರಿಷತ್ 12ನೇ ವಾರ್ಷಿಕೋತ್ಸವ, ಜನಪದ ಉತ್ಸವ, ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಜನಪದ ಕೇವಲ ಕಲೆಯಷ್ಟೇ ಅಲ್ಲ, ಅದರಲ್ಲಿ ನಮ್ಮಗಳ ಬದುಕು, ನಾಡಿನ ಸಂಸ್ಕೃತಿ, ಜೀವನ ಪದ್ಧತಿ ಅಡಗಿದೆ. ಆದ್ದರಿಂದ ಜನಪದ ಕಲೆಯನ್ನು ಉಳಿಸಿ, ಬೆಳೆಸಬೇಕು. ಕಲಾವಿದರನ್ನು ಗೌರವಿಸಿ, ಪ್ರೋತ್ಸಾಹಿಸಬೇಕು ಎಂದು ತಿಳಿಸಿದರು.ಜಿಲ್ಲೆಯಲ್ಲಿ ಜನಪದ ಜಾಗೃತಿ ಪರಿಷತ್ ಸ್ಥಾಪಿಸಿ, ಈ ಮೂಲಕ ಜನಪದ ಕಲೆ ಉಳಿಸುವ ಜತೆಗೆ ಬಡ ಕುಟುಂಬದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ನೆರವು ನೀಡುತ್ತಿರುವುದು ಮಾದರಿ ಕಾರ್ಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.ಹಿರಿಯ ವಕೀಲ ಬಿ.ಕೆ.ರಹಮತ್ ಉಲ್ಲಾ ಮಾತನಾಡಿ, ಭಾಷೆ, ಸಂಸ್ಕೃತಿ ಉಳಿದರೆ ಮಾತ್ರ ನೆಮ್ಮದಿ ಬದುಕು ನಮ್ಮದಾಗಲಿದೆ. ಆದ್ದರಿಂದ ಪಾಶ್ಚಿಮಾತ್ಯ ಪದ್ಧತಿಗೆ ಮಾರುಹೋಗದೆ ನಮ್ಮತನ ಉಳಿಸಿಕೊಳ್ಳಬೇಕು ಎಂದರು. ಪರಿಷತ್ ಅಧ್ಯಕ್ಷ ಎಚ್.ಪ್ಯಾರೇಜಾನ್ ಮಾತನಾಡಿದರು. ತಾಪಂ ಇಒ ರವಿಕುಮಾರ್, ರವೀಂದ್ರ, ಸಾಹಿತಿ ಆನಂದಕುಮಾರ್, ಮಲ್ಲಿಕಾರ್ಜುನ್ ಇತರರಿದ್ದರು.

## ಮೇಲ್‌ಬಿಳ್ರೆಯಲ್ಲಿ ಗೋಲೋಕಕ್ಕೆ 240 ಪೆಂಡಿ ಹುಲ್ಲನ್ನು ದೇಣಿಗೆ




**ಶೃಂಗೇರಿ:** ಮಲೆನಾಡು ಗಿಡ್ಡ ತಳಿಯ ಗೋವುಗಳನ್ನು ಸಾಕುವವರ ಸಂಖ್ಯೆ ಕಡಿಮೆಯಾಗುತ್ತಿದ್ದು, ಗಿಡ್ಡ ತಳಿಯನ್ನು ಸಾಕುತ್ತಿರುವ ಗೋಶಾಲೆಗೆ ವಿಪ್ರ ನೌಕರರ ನೌಕರರ ಸಂಘದಿಂದ ಸ್ಥಳಿಯ ರೈತರಿಂದ ಹುಲ್ಲು ಖರೀದಿಸಿ ಗೋಶಾಲೆಗೆ ನೀಡಲಾಗುತ್ತಿದೆ ಎಂದು ವಿಪ್ರ ನೌಕರರ ಸಂಘದ ಗೌರವಾಧ್ಯಕ್ಷ ಬಾಲಗಂಗಾಧರ್ ಹೇಳಿದರು.ಉಡುಪಿ ಜಿಲ್ಲೆಯ ಮೇಲ್‌ಬಿಳ್ರೆಯಲ್ಲಿ ಗೋಲೋಕಕ್ಕೆ ವಿಪ್ರ ನೌಕರರ ಸಂಘದಿಂದ 240 ಪಿಂಡಿ ಹುಲ್ಲನ್ನು ದೇಣಿಗೆ ನೀಡಿದ ಸಂದರ್ಭದಲ್ಲಿ ಮಾತನಾಡಿ .ಮಲೆನಾಡು ಗಿಡ್ಡ ತಳಿ ಹಸುವಿನ ಹಾಲು ಔಷಧೀಯ ಗುಣವಿದ್ದು, ಹಾಲು, ತುಪ್ಪ ಶ್ರೇಷ್ಠವಾಗಿದೆ. ಪೂಜಾದಿಯಲ್ಲಿ ಗಿಡ್ಡ ತಳಿಯ ಹಾಲು ಬಳಕೆ ಮಾಡಲಾಗುತ್ತಿದ್ದು, ಹೆಚ್ಚು ಹಾಲು ನೀಡುವ ಮಿಶ್ರ ತಳಿ ಸಾಕಾಣೆಯಿಂದ ಗಿಡ್ಡ ತಳಿ ಹಸು ಸಾಕುವವರ ಸಂಖ್ಯೆ ಕಡಿಮೆಯಾಗುತ್ತಿದೆ. ಗೋಶಾಲೆಯಲ್ಲಿ ಮಲೆನಾಡು ಗಿಡ್ಡ ತಳಿ ಹಸುವನ್ನು ಸಾಕಾಣಿಕೆ ಮಾಡುತ್ತಿದ್ದು, ಪ್ರೋತ್ಸಾಹದಾಯಕವಾಗಿ ಹುಲ್ಲನ್ನು ನಮ್ಮ ಸಂಘದಿಂದ ಕೊಡುಗೆಯಾಗಿ ನೀಡಲಾಗುತ್ತಿದೆ ಎಂದರು.ಸಂಘದ ಅಧ್ಯಕ್ಷ ಶಶಿಧರ್ ಮಾತನಾಡಿ, ನಮ್ಮ ಸಂಘದಿಂದ ನೀಡಿದ ಹುಲ್ಲು ಗೋಶಾಲೆಯಲ್ಲಿರುವ ಹಸುಗಳಿಗೆ ಅನುಕೂಲವಾಗುತ್ತಿದ್ದು, ಇದರೊಂದಿಗೆ ಸ್ಥಳೀಯ ರೈತರಿಗೆ ಹುಲ್ಲಿಗೆ ಬೇಡಿಕೆ ದೊರಕಿದೆ. ಹಸು ಸಾಕಾಣಿಕೆ ಕಡಿಮೆಯಾಗುತ್ತಿರುವ ಕಾರಣ ಮಲೆನಾಡಿನಲ್ಲಿ ಹುಲ್ಲಿನ ಬೇಡಿಕೆಯೂ ತಗ್ಗಿದೆ. ಇದೀಗ ನಾವು ಖರೀದಿ ಮಾಡಿರುವುದರಿಂದ ರೈತರಿಗೂ ಅನುಕೂಲವಾಗಿದೆ ಎಂದರು.ಶೈಲೇಶ್ ಹೊಳ್ಳ ಮತ್ತು ರಾಮಸ್ವಾಮಿ ನೇತೃತ್ವದ ಗೋಲೋಕಕ್ಕೆ ಹುಲ್ಲಿನ ಪಿಂಡಿಯನ್ನು ನೀಡಲಾಯಿತು. ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಶಿವಶಂಕರ್, ಉಪಾಧ್ಯಕ್ಷೆ ಪಾರ್ವತಿ, ಪದಾಧಿಕಾರಿಗಳಾದ ಅನಂತ್, ದಿಲೀಪ್‌ಕುಮಾರ್,ತಾ|ಕಸಾಪ ಅಧ್ಯಕ್ಷ ಎಚ್.ಎಸ್.ಸುಬ್ರಮಣ್ಯ ಹಾಜರಿದ್ದರು.

## ಚರಂಡಿ ಸ್ವಚ್ಛತೆಗಾಗಿ ಪ್ರತ್ಯೇಕ ಸ್ಲಾಬ್ ನಿರ್ಮಿಸಿ

**ಬಾಳೆಹೊನ್ನೂರು:** ಲೋಕೋಪಯೋಗಿ ಇಲಾಖೆಯ ಅವೈಜ್ಞಾನಿಕ ಬಾಕ್ಸ್ ಚರಂಡಿಯಲ್ಲಿ ಕಸ ಕಟ್ಟಿಕೊಂಡು ಗಬ್ಬು ನಾರುತ್ತಿದೆ. ಪಾದಾಚಾರಿ ರಸ್ತೆ ನಿರ್ಮಾಣದ ಸಂದರ್ಭದಲ್ಲಿ ಚರಂಡಿ ಸ್ವಚ್ಛತೆಗಾಗಿ ಪ್ರತ್ಯೇಕ ಸ್ಲಾಬ್ ನಿರ್ಮಿಸಿ ಚೇಂಬರ್ ನಿರ್ಮಿಸಲಾಗಿತ್ತು. ಪಾದಾಚಾರಿ ರಸ್ತೆಗೆ ಟೈಲ್ಸ್ ಹಾಕುವ ಸಂದರ್ಭದಲ್ಲಿ ಚೇಂಬರ್ ಮೇಲು ಟೈಲ್ಸ್ ಅಳವಡಿಸಿದ್ದು ಇದೀಗ ಸ್ವಚ್ಛತೆ ಮಾಡಲಾಗುತ್ತಿಲ್ಲ. ಮುಖ್ಯ ರಸ್ತೆಯಲ್ಲಿ ಸಮಸ್ಯೆ ಉಂಟಾಗಿದ್ದು ಕಾಮಗಾರಿ ನಡೆಸಿದ ಗುತ್ತಿಗೆದಾರ ಹಾಗೂ ಅಂದಿನ ಇಂಜಿನಿಯರ್ ಇದನ್ನು ಪರಿಶೀಲಿಸಬೇಕೆಂದು ನಾಗರೀಕರು ಒತ್ತಾಯಿಸಿದ್ದಾರೆ .ಮುಖ್ಯ ರಸ್ತೆಯ ಟ್ಯಾಕ್ಸಿ ಸ್ಟ್ಯಾಮಡ್ ಸಮೀಪ ತಾಲ್ಲೂಕು ಪಂಚಾಯಿತಿ ಕಟ್ಟಡದ ಪಕ್ಕದ ಬಾಕ್ಸ್ ಚರಂಡಿ ಕಸಕಟ್ಟಿ ಬ್ಲಾಕ್ ಆಗಿದ್ದು ಸೊಳ್ಳೆಗಳ ಉತ್ಪಾದನೆ ಕೇಂದ್ರವಾಗಿದೆ.





# ಗರಿಗೆದರಿದ ಬಿದಿರು ನಗರ ಕನಸು

**ಬೆಂಗಳೂರು:** ಹುಟ್ಟುತ್ತಾ ಹುಲ್ಲಾದ, ಬೆಳೆಯುತ್ತಾ ಮರವಾದ, ಕಜ್ಜಾಯದ ಬುಟ್ಟಿಯಾದ, ಹತ್ತುವವರಿಗೆ ಏಣಿಯಾದ, ಸತ್ತವರಿಗೆ ಚಟ್ಟವಾದ ಬಿದಿರನ್ನು ಬೆಂಗಳೂರಿನಲ್ಲಿಯೂನಳನಳಿಸುವಂತೆಮಾಡುವ ಕನಸು ಗರಿಗೆದರಿದೆ. ಬಿದಿರು ಬೆಳೆಸುವ ಮತ್ತು ಬಳಸುವ ಪ್ರಕ್ರಿಯೆಗಳು ಹೆಚ್ಚಾಗುತ್ತಿವೆ.

ದೇವನಹಳ್ಳಿಯ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ 2ನೇ ಟರ್ಮಿನಲ್ ಅನ್ನು ಬಿದಿರಿನಿಂದ ಆಕರ್ಷಕವಾಗಿ ಒಳವಿನ್ಯಾಸಮಾಡಿರುವುದು ವಿಶ್ವಮಟ್ಟದಲ್ಲಿ ಗಮನಸೆಳೆಯಿತು. ಅತಿ ಭದ್ರತೆಯ, ಅತಿ ಸೂಕ್ಷ್ಮ ಪ್ರದೇ ಶವಾಗಿರುವ ವಿಮಾನ ನಿಲ್ದಾಣದಲ್ಲಿಯೇ ಬಿದಿರು ಬಳಸಬಹುದಾದರೆ, ಮೆಟ್ರೊ ನಿಲ್ದಾಣಗಳಲ್ಲಿ, ಕಚೇರಿಗಳಲ್ಲಿ ಯಾಕೆ ಬಳಸಬಾರದು ಎಂಬ ಪ್ರಶ್ನೆಯನ್ನು ಬಿದಿರು ಸೊಸೈಟಿ ಆಫ್ ಇಂಡಿಯಾ(ಬಿಎಸ್‌ಐ), ಬಿಬಿಎಂಪಿ ಮತ್ತು ಬಿಎಂಆರ್‌ಸಿಎಲ್ ಎದುರು ಇಟ್ಟಿತು. ಬಿಎಸ್‌ಐ ಮಾತಿಗೆ ಎರಡೂ ಸಂಸ್ಥೆಗಳು ಸಕಾರಾತ್ಮಕವಾಗಿ ಸ್ಪಂದಿಸಿದವು. ಈಗ 'ಮೆಟ್ರೊ ವ್ಯಾಪ್ತಿ'ಯಲ್ಲಿ ಬಿದಿರು ನೆಡುವ, ಬಿದಿರಿನಿಂದ ಬಿಬಿಎಂಪಿ ಕಚೇರಿ, ಮೆಟ್ರೊ ನಿಲ್ದಾಣಗಳನ್ನು ವಿನ್ಯಾಸಗೊಳಿಸುವಯೋ ಜನೆಗಳು ರೂಪುಗೊಂಡಿವೆ.

ಪ್ರಾಥಮಿಕವಾಗಿ, ಬಿಬಿಎಂಪಿಯ ಅರಣ್ಯ ವಿಭಾಗದ ಕಚೇ ರಿಯ ಒಳಾಂ ಗಣ ವಿನ್ಯಾಸವನ್ನು ಬಿದಿರಿನಿಂದ ಮಾಡಲು ಯೋಜಿಸಲಾಗಿದೆ. 'ನಮ್ಮ ಮೆಟ್ರೊ'ದ ಪಾಟರಿ ಟೌನ್ ಮತ್ತು ಗೊಟ್ಟಿಗೆರೆ ನಿಲ್ದಾಣಗಳನ್ನು ಬಿದಿರಿನಿಂದ ವಿನ್ಯಾಸಗೊಳಿಸಬೇಕು ಎಂದು ಬಿದಿರು ಸೊಸೈಟಿ ಬೇಡಿಕೆ ಇಟ್ಟಿದೆ. ಮೊದಲ ಹಂತದಲ್ಲಿ ಬಿಎಂಆರ್‌ಸಿಎಲ್, ಪಾಟರಿ ಟೌನ್ ಮೆಟ್ರೊ ನಿಲ್ದಾಣವನ್ನು ಬಿದಿರಿನ ಅಲಂಕಾರದೊಂದಿಗೆ ನಿರ್ಮಿಸಲು ನಿರ್ಧರಿಸಿದೆ. ಮೆಟ್ರೊ ಮಾರ್ಗದಲ್ಲಿ ಅವಕಾಶ ಇರುವಲ್ಲೆಲ್ಲ ಬಿದಿರು ಬೆಳೆಯಲು ಬಿದಿರು ಸೊಸೈಟಿ ಕೇಳಿಕೊಂಡಿದೆ.







ಕೇಂದ್ರೀಯ ರೇಷ್ಮೆ ಮಂಡಳಿಯಿಂದ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಸಂಪರ್ಕಿಸುವ ನೀಲಿ ಮಾರ್ಗದಲ್ಲಿ ಮಾರತ್ತಹಳ್ಳಿಯಲ್ಲಿ ಎರಡು ಕಿಲೋ ಮೀಟರ್‌ನಷ್ಟು ಉದ್ದಕ್ಕೆ ಮೆಟ್ರೊ ಮಾರ್ಗದ ಅಡಿಯಲ್ಲಿ ಬಿದಿರು ಬೆಳೆಸುವ ಯೋಜನೆ ರೂಪಿಸಲಾಗಿದೆ. ಇಲ್ಲಿ 650 ಬಿದಿರಿನ ಗಿಡಗಳು ಬೆಳೆಯಲಿವೆ. ಬನ್ನೇರುಘಟ್ಟ ರಸ್ತೆಯಲ್ಲಿ ಜಯದೇವ ಆಸ್ಪತ್ರೆಯಿಂದ ಮುಂದಕ್ಕೆ ಮೀನಾಕ್ಷಿ ದೇವಸ್ಥಾನದವರೆಗೆ ಮೆಟ್ರೊ ಮಾರ್ಗದ ಅಡಿಯಲ್ಲಿ ಬಿದಿರು ಬೆಳೆಸುವ ಪ್ರಸ್ತಾವ ಕೂಡ ಇದೆ.

30 ಸಾವಿರ ಗಿಡ: ನಗರದ ಪಾರ್ಕ್‌ಗಳಲ್ಲಿ, ಕೆರೆಗಳ ಸುತ್ತ ಇರುವ ನಡಿಗೆ ಪಥದ ಇಕ್ಕೆಲಗಳಲ್ಲಿ ಮುಂದಿನ ಮಳೆಗಾಲದಲ್ಲಿ 30 ಸಾವಿರ ಬಿದಿರು ಗಿಡ ನೆಡುವ ಯೋಜನೆಯನ್ನು ಬಿದಿರು ಸೊಸೈಟಿ ಹಾಕಿಕೊಂಡಿದೆ. ಭಾರತ್ ಸ್ಕೌಟ್ಸ್ ಆಂಡ್ ಗೈಡ್ಸ್ ವಿದ್ಯಾರ್ಥಿಗಳು, ಗ್ರೀನ್ ಸ್ಕೂಲ್ನ ವಿದ್ಯಾರ್ಥಿಗಳು ಗಿಡಗಳನ್ನು ನೆಡಲಿದ್ದಾರೆ ಎಂದು ಸೊಸೈಟಿ ಅಧ್ಯಕ್ಷ ಪುನತಿ ಶ್ರೀಧರ್ ಮಾಹಿತಿ ನೀಡಿದರು.

## ನಗರದಲ್ಲಿ ಯಾವ ಬಿದಿರು?

ಮುಳ್ಳುಬಿದಿರು ಉಳಿದವುಗಳಿಗಿಂತ ಬಲಿಷ್ಠವಾಗಿದೆ ಮತ್ತು ಎತ್ತರಕ್ಕೆ ಬೆಳೆಯುತ್ತದೆ. ಆದರೆ, ಅದನ್ನು ನೆಟ್ಟು ಬೆಳೆಸುವುದು ಕಷ್ಟ. ಹಾಗಾಗಿ ನಗರಗಳಲ್ಲಿ ಮುಳ್ಳು ಬಿದಿರು ಬೆಳೆಸುವುದಿಲ್ಲ. 6 ರಿಂದ 7 ಅಡಿ ಹಾಗೂ 15ರಿಂದ 20 ಅಡಿ ಬೆಳೆಯುವ ಬಿದಿರು ಪ್ರಭೇದಗಳನ್ನು ಮಾತ್ರ ಮೆಟ್ರೊ ಎತ್ತರಿಸಿದ ಮಾರ್ಗಗಳ ಅಡಿಯಲ್ಲಿ ಬೆಳೆಸಲಾಗುತ್ತದೆ. ಪರಿಸರಕ್ಕೆ ಪೂರಕವಾದ ಬಿದಿರು, ಅಂದವನ್ನು ಹೆಚ್ಚಿಸುವ ಬಿದಿರು ನಗರದಲ್ಲಿ ಹೆಚ್ಚುತ್ತಿರುವುದು, ಮನೆಗಳ ಬಳಕೆಯಲ್ಲಿಯೂಉಪಯೋಗವಾಗುತ್ತಿರುವುದು ಉತ್ತಮ ಬೆಳವಣಿಗೆ. ಕಟ್ಟಡ ನಿರ್ಮಾಣ ಮಾಡುವಾಗ ಅಟ್ಟಣಿಗೆ-ಯಾಗಿ ಬಿದಿರನ್ನು ಬಳಕೆಮಾಡುವುದನ್ನು ಹೆಚ್ಚಿಸಬೇಕು. ಚರಂಡಿ ನಿರ್ಮಾಣದ ವೇಳೆ ಸಿಮೆಂಟ್ ಹಾಕುವಾಗ ಬಿದಿರು ಬಳಕೆಮಾಡಬಹುದು. ನಿರ್ಮಾಣ ಕಾರ್ಯಗಳಲ್ಲಿ ಬಿದಿರು ಬಳಕೆಗೆ ಹೆಚ್ಚಿನ ಅವಕಾಶವಿದೆ ಎಂದು ಬಿದಿರು ಪ್ರೇಮಿ ಎಲೆಕ್ಟ್ರಾನಿಕ್ ಸಿಟಿಯ ಸೃಜನ್ ಪಿ. ತಿಳಿಸಿದರು.

–ಬಿದಿರಿನ ಬೈಸಿಕಲ್

ವರ್ತೂರಿನ ದಿ ಗ್ರೀನ್ ಸ್ಕೂಲ್ - ಬೆಂಗಳೂರು (ಟಿಜಿಎಸ್-ಬಿ) ಶಾಲೆ ತನ್ನ 'ಬ್ಯಾಂಬೂ 4 ಬೆಂಗಳೂರು' ಕಾರ್ಯಕ್ರಮದ ಭಾಗವಾಗಿ ವಿದ್ಯಾರ್ಥಿಗಳಿಗಾಗಿ ಬಿದಿರಿನ ಬೈಸಿಕಲ್ಗಳನ್ನು ತಯಾರಿಸಿದೆ. ಅರಣ್ಯ ಸಚಿವ ಈಶ್ವರ ಬಿ. ಖಂಡ್ರೆಯವರೇ ಈ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದರು. ಬಿದಿರಿನ ಬೈಸಿಕಲ್ಗಳು 20 ರಿಂದ 30 ವರ್ಷಗಳವರೆಗೆ ಬಾಳಿಕೆ ಬರುತ್ತವೆ. 'ಜೀರೊ ಕಾರ್ಬನ್(ತಟಸ್ಥ ಇಂಗಾಲ)' ಶಾಲೆಯಾಗಿ ಮಾಡುವ ಯೋಜನೆಯ ಭಾಗವಾಗಿ ಪ್ರಾಚಾರ್ಯೆ ಉಷಾ ಅಯ್ಯರ್ ನೇತೃತ್ವದಲ್ಲಿ ಆರು ಬೈಸಿಕಲ್ಗಳನ್ನು ತಯಾರಿಸಲಾಗಿದೆ. ಕರಕುಶಲ ವಸ್ತುಗಳಿಗೆ ಬೇಡಿಕೆ ಪೀಠೋಪಕರಣಗಳು ನೆಲಹಾಸು ಗೋಡೆ ಅಲಂಕಾರ ವಸ್ತುಗಳು ಗಿಫ್ಟ್‌ಗಳು ದೀಪದ ಕಂಬ ಏಣಿ ತೊಟ್ಟಿಲು ಕೊಳಲು ಕುರ್ಚಿ ಮೇಜು ಚಾಪೆ ಬುಟ್ಟಿ ಶಾಮಿಯಾನ ಮೊರ ಮಂಕರಿ ಬೀಸಣಿಗೆ ಸಹಿತ ಬಿದಿರಿನ ಅನೇಕ ವಸ್ತುಗಳಿಗೆ ನಗರದಲ್ಲಿ ಬೇಡಿಕೆ ಹೆಚ್ಚಿದೆ. ಇದನ್ನು ಗಮನದಲ್ಲಿಟ್ಟುಕೊಂಡು 'ಹಸಿರು ಕಟ್ಟಡ ಸಾಮಗ್ರಿ ಮತ್ತು ತಂತ್ರಜ್ಞಾನ ಕೇಂದ್ರ - ಸಿಜಿಬಿಎಂಟಿ'ಯುಬಿದಿರಿನಿಂದ ಕರಕುಶಲ ಮತ್ತು ನಿರ್ಮಾಣ ಸಾಮಗ್ರಿಗಳ ವಿನ್ಯಾಸ ಕಾರ್ಯಾ ಗಾರವನ್ನು ಆಗಾಗ ನಡೆಸಿ ಕೌಶಲ ಹೆಚ್ಚಿಸುವ ಕೆಲಸಮಾಡುತ್ತಿದೆ.

ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಎಸ್. ಮಹೇಶ್ವರ ರಾವ್ ತಿಳಿಸಿದರು. 'ನಮ್ಮ ಮೆಟ್ರೊ ಮತ್ತು ಮುಖ್ಯ ವಾಸ್ತುಶಿಲ್ಪಿಗಳೊಂದಿಗೆ ಸಮಾಲೋ ಚನೆ ನಡೆಯುತ್ತಿದೆ. ಅವರು ವಿನ್ಯಾಸ ಅಂತಿಮಗೊಳಿಸಲಿದ್ದಾರೆ' ಎಂದು ನಮ್ಮ ಮೆಟ್ರೊ ಗುಲಾಬಿ ಮಾರ್ಗದ ಮುಖ್ಯ ಎಂಜಿನಿಯರ್ ದಯಾನಂದ ಶೆಟ್ಟಿ ಮಾಹಿತಿ ನೀಡಿದರು.

## ಉತ್ತಮ ಪ್ರಭೇದ; ಬಾಳಿಕೆ ದೀರ್ಘ

ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ -2ರಲ್ಲಿ ಬಿದಿರು ಬಳಸಿ ಒಳಾಂಗಣ ವಿನ್ಯಾಸವನ್ನು ಆಕರ್ಷಕಗೊಳಿಸಲಾಗಿದೆ. ದೆಹಲಿಯ ನೂತನ ಸಂಸತ್ತಿನ ಗೋಡೆ ಮತ್ತು ನೆಲಹಾಸುಗಳಿಗೆ ಬಿದಿರು ಬಳಸಲಾಗಿದೆ. ಉತ್ತಮ ಪ್ರಭೇದವಾದ 'ತ್ರಿಪುರನ್ ಬಂಬುಸಾ ತುಲ್ಡಾ' ಬಿದಿರು ಬಳಸಿದರೆ ದೀರ್ಘ ಕಾಲ ಬಾಳಿಕೆ ಬರುತ್ತದೆ ಎಂದು



## 6 ಕೋಟಿ ವೆಚ್ಚ

6 ಕೋಟಿ ವೆಚ್ಚದಲ್ಲಿ ನಮ್ಮ ಮೆಟ್ರೊ ಕಾಳೇನ ಅಗ್ರಹಾರ-ನಾಗವಾರ (ಗುಲಾಬಿ)ಮಾರ್ಗದಲ್ಲಿ ಬಂಬೂಬಜಾರ್ ಸಮೀಪದ ನಿಲ್ದಾಣವನ್ನು (ಪಾಟರಿ ಟೌನ್) ಬಿದಿರಿನ ಅಲಂಕಾರದಲ್ಲಿ ನಿರ್ಮಿಸಲಿದೆ. ಇದು ದೇಶದ ಮೊದಲ ಬಿದಿರು ಅಲಂ ಕಾರದ ಮೆಟ್ರೊ ನಿಲ್ದಾಣ ಎಂಬ ಹಿರಿಮೆಗೆ ಪಾತ್ರವಾಗಲಿದೆ. 'ಬಿದಿರು ಎಷ್ಟು ಬೆಳೆಯುತ್ತದೆ? ಮೆಟ್ರೊದ ಹಳಿಗಳನ್ನು ಮೀರಿ ಬೆಳೆಯುತ್ತದೆಯೇ? ಎಂಬುದನ್ನೆಲ್ಲ ಚರ್ಚೆ ನಡೆಸಿ ಗಿಡ್ಡ ಬಿದಿರು ಬೆಳೆಸಲು ಅವಕಾಶ ನೀಡಲಾಗುವುದು. ಪಾಟರಿ ಟೌನ್ ಮೆಟ್ರೊ ನಿಲ್ದಾಣವನ್ನು ಬೆಂಕಿ ನಿರೋಧಕ ಬಿದಿರು ಬಳಸಿ ವಿನ್ಯಾಸಗೊಳಿಸಲಾಗುವುದು' ಎಂದು ಬಿಎಸ್‌ಐ ಅಧ್ಯಕ್ಷ ಪುನತಿ ಶ್ರೀಧರ್ ತಿಳಿಸಿದರು. ಯಾವುದೇ ಬಿದಿರು ಬಳಕೆಮಾಡುವ ಮೊದಲು ರಾಸಾಯನಿಕ ಬಳಸಿ ಬಿದಿರು ಸ್ಟಾರ್ಗಳನ್ನು ತೆಗೆದು ಹುಳ ಬೀಳದಂತೆ ಮಾಡಿದರೆ 40–50 ವರ್ಷ ಹಾಳಾಗುವುದಿಲ್ಲ ಎಂದು ವಿವರ ನೀಡಿದರು. ಬಿದಿರು ಬೆಳೆದರೆ ಮರಗಳಿಗಿಂತ ಹೆಚ್ಚು ಆಮ್ಲಜನಕವನ್ನು ವಾತಾವರಣಕ್ಕೆ ಬಿಡುತ್ತದೆ. ತುಂಬಾ ಕಡಿಮೆ ನೀರಿನಲ್ಲಿ ಬಿದಿರು ಬೆಳೆಸಬಹುದು. ಹಾಗೆಯೇ ಬಿದಿರು ಮಳೆ ನೀರನ್ನು ಭೂಮಿಗೆ ಇಂಗಿಸುತ್ತದೆ ಎಂದು ಅವರು ವಿವರಿಸಿದರು.

## ಗ್ರಾಮ ಒನ್ ಕೇಂದ್ರಗಳಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಒನ್ ಕೇಂದ್ರಗಳಿಗೆ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಸೇವೆಗಳು ಒಂದೇ ಸೂರಿನಡಿ ಒದಗಿಸಲು ಗ್ರಾ.ಪಂ ಮಟ್ಟದಲ್ಲಿ ಗ್ರಾಮ ಒನ್ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ಮೂಲಕ ಗ್ರಾಮೀಣ ಭಾಗದ ಜನರಿಗೆ ತಮ್ಮ ಸಮೀಪದಲ್ಲಿ ಸರ್ಕಾರದ ಹಲವು ಸೇವೆಗಳು ತಮ್ಮ ಮನೆ ಬಾಗಿಲಿಗೆ ತಲುಪಿಸುತ್ತಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ನೂತನ ಯೋಜನೆಗಳನ್ನು ಸೇವಾಸಿಂಧು ಪೋರ್ಟಲ್ ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಒನ್ ಕೇಂದ್ರಗಳಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಿವುಳ್ಳವರು https://www.karnatakaone.gov.in/Public/GramOneFranchiseeTermsಮೂಲಕ ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಮಾ.15 ಕಡೆಯ ದಿನವಾಗಿದೆ. ಶಿವಮೊಗ್ಗ ತಾಲ್ಲೂಕಿನ ಅಗಸವಳ್ಳಿಯಲ್ಲಿ 01, ಭದ್ರಾವತಿ ತಾಲ್ಲೂಕಿನ ಮಾವಿನಕೆರೆ 01, ಕೊಮ್ಮಾರನಹಳ್ಳಿ 01, ತೀರ್ಥಹಳ್ಳಿ ತಾಲ್ಲೂಕಿನ ಕೋಣಂದೂರು 01, ಶಿಕಾರಿಪುರ ತಾಲ್ಲೂಕಿನ ನೆಲವಾಗಿಲು 01, ಹೊಸನಗರ ತಾಲ್ಲೂಕಿನ ತ್ರಿಣಿವೆ 01 ಮತ್ತು ಮುಂಬಾರುವಿನಲ್ಲಿ 01 ಹುದ್ದೆಗಳು ಖಾಲಿ ಇದ್ದು ಅರ್ಜಿ ಸಲ್ಲಿಸಬಹುದೆಂದು ಅಪರ ಜಿಲ್ಲಾಧಿಕಾರಿ ಸಿದ್ದಲಿಂಗ ರೆಡ್ಡಿ ತಿಳಿಸಿದ್ದಾರೆ.

## ಉಚಿತ ತರಬೇತಿಗಾಗಿ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ತೋಟಗಾರಿಕೆ ಇಲಾಖೆ ವತಿಯಿಂದ 2024-25ನೇ ಸಾಲಿನಲ್ಲಿ 2025ರ ಮೇ 02 ರಿಂದ 2026ರ ಫೆಬ್ರವರಿ 28ರ ವರೆಗೆ ರೈತ ಮಕ್ಕಳಿಗೆ 10 ತಿಂಗಳ ಉಚಿತ ತರಬೇತಿ ಕಾರ್ಯಕ್ರಮಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸಲು ಮಾರ್ಚ್ 31 ಕೊನೆಯ ದಿನವಾಗಿರುತ್ತದೆ.ಅರ್ಜಿಯನ್ನು ಚಿಕ್ಕಮಗಳೂರು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯ ವಲಯ), ಕಳಸ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯ ವಲಯ) ಹಾಗೂ ಬೀಜುವಳ್ಳಿ ತೋಟಗಾರಿಕೆ ಕ್ಷೇತ್ರ ಮತ್ತು ಮೂಡಿಗೆರೆ ತರಬೇತಿ ಕೇಂದ್ರ ಇಲ್ಲಿ ಅಥವಾ ವೆಬ್ಸೈಟ್ <https://horticulturedir.karnataka.gov.in> ನಲ್ಲಿ ಪಡೆದುಕೊಳ್ಳಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಯನ್ನು (08262-295043) ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಮಜ್ಜಿಗೆ ವಿತರಣೆ ಮತ್ತು ಮಂಜಮ್ಮನವರಿಗೆ ಕೃತಜ್ಞತಾ ಸಮರ್ಪಣೆ

**ದಾವಣಗೆರೆ:** ನಗರದ ಕರುಣಾ ಜೀವ ಕಲ್ಯಾಣ ಟ್ರಸ್ಟ್ ವತಿಯಿಂದ ದಾನಿಗಳ ಸಹಕಾರದೊಂದಿಗೆ ಹಮ್ಮಿಕೊಂಡಿರುವ ಉಚಿತ ಮಜ್ಜಿಗೆ ವಿತರಣೆ ಹಾಗೂ ಮಂಜಮ್ಮನವರಿಗೆ ಕೃತಜ್ಞತಾ ಕಾರ್ಯಕ್ರಮವನ್ನು ಶ್ರೀ ಮುರುಘರಾಜೇಂದ್ರ ಶಿವಯೋಗಾಶ್ರಮ, ಜಯದೇವ ಸರ್ಕಲ್ ನಲ್ಲಿ ಇಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.ಸಾನಿಧ್ಯವನ್ನು ವಿರಕ್ತ ಮಠದ ಶ್ರೀ ಬಸವಪ್ರಭು ಸ್ವಾಮೀಜಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ನೇತ್ರ ತಜ್ಞ ಡಾ. ಎಂ.ಹೆಚ್. ರವೀಂದ್ರ, ವರದಿಗಾರರ ಕೂಟದ ಅಧ್ಯಕ್ಷ ನಾಗರಾಜ ಬಡದಾಳ್, ಜನತಾವಾಣಿ ಉಪಸಂಪಾದಕ ಇ.ಎಂ. ಮಂಜುನಾಥ್ ಹಾಗೂ ಸವಳಂಗ ಗ್ರಾಮದ ಮಂಜಮ್ಮ ಭಾಗವಹಿಸಲಿದ್ದಾರೆ. ಟ್ರಸ್ಟ್ ನ ಅಧ್ಯಕ್ಷ ಡಾ. ಹೆಚ್.ಎನ್. ಮಲ್ಲಿಕಾರ್ಜುನ್ ಅಧ್ಯಕ್ಷತೆ ವಹಿಸಲಿದ್ದಾರೆ.ಟ್ರಸ್ಟ್ ನ ಕಾರ್ಯದರ್ಶಿ ಶಿವನಕೆರೆ ಬಸವಲಿಂಗಪ್ಪ, ನಿರ್ದೇಶಕರಾದ ಪ್ರೊ. ಎಂ.ಬಿ. ಮಧುಸೂದನ್ ಇನ್ನಿತರರು ಪಾಲ್ಗೊಳ್ಳಲಿದ್ದಾರೆ.

# ನುಗ್ಗೆ ಬೇಸಾಯ ಮಾಡಿದರೆ ನುಗ್ಗಿ ಬರುತ್ತದೆ ಲಾಭ

## ನುಗ್ಗೆ ಒಂದು ಕಡಿಮೆ ಖರ್ಚಿನ ಅಧಿಕ ಲಾಭದಾಯಾಕ ಬೆಳೆ.

### ಭಾಗ್ಯ ತಳಿಯ ವಿಶೇಷ ಮಾಹಿತಿ:

1. ಲಭ್ಯವಿರುವ ತಳಿಗಳಲ್ಲಿ ಉತ್ಕೃಷ್ಟ ತಳಿ
2. ಪರ್ಯಾಯ ಹೆಸರು ಏಆಒ- 01
3. ಬಾಗಲಕೋಟೆ ತೋಟಗಾರಿಕೆ ವಿವಿ ಇಂದ ಅಭಿವೃದ್ಧಿ ಪಡಿಸಿರುವ ತಳಿ
4. ಎತ್ತರ 2.5 ಮೀಟರ್ ಇಂದ 4 ಮೀಟರ್ ಬೆಳೆಯುವ ತಳಿ
5. 2.5 ಇಂದ 3 ತಿಂಗಳ ವರೆಗೂ ಸತತವಾಗಿ ಹೂ ಬಿಟ್ಟು ಕಾಯಿ ಕೊಡುವ ತಳಿ
6. ಒಂದು ಗಿಡಕ್ಕೆ 350 ರಿಂದ 400 ಕ್ಕೂ ಹೆಚ್ಚು ಕಾಯಿ ಬಿಡುವ ತಳಿ
7. ಕಾಯಿಯ ಉದ್ದ 1.5 ಇಂದ 2 ಅಡಿ
8. ಕಾಯಿಯ ತೂಕ 150 ರಿಂದ 160 ಗ್ರಾಂ ನಷ್ಟು ಇರುತ್ತದೆ
9. ಹೆಚ್ಚು ಪ್ರೊಟೀನ್ ಹಾಗೂ ನಾರಿನ ಅಂಶ ಹೊಂದಿರುವ ತಳಿ
10. ಎಕರೆಗೆ ಅಂದಾಜು ಕರ್ಚು (ಕೂಯ್ಲು ಹಾಗೂ ಸಾಗಾಣಿಕೆ ವೆಚ್ಚ ಸೇರಿ) 55 ರಿಂದ 60 ಸಾವಿರ
11. ನಿಶ್ಚಿಳ ಲಾಭ 1 ಇಂದ 1.2 ಲಕ್ಷ
12. ಬಿತ್ತನೆ ಬೀಜದ ಇಳುವರಿ ಸುಮಾರು 80 ಕೆಜಿ
13. ಪ್ರತಿ ಕೆಜಿ ಗೆ ಅಂದಾಜು 1.5 ಇಂದ 2 ಸಾವಿರ
14 ಅತೀ ಕಡಿಮೆ ಅವಧಿಯಲ್ಲಿ ಕಾಯಿ ಬಿಡುವ ತಳಿ
15. ಬಿತ್ತನೆ ಮಾಡಿದ 120 ರಿಂದ 130 ದಿವಾಸದೊಳಗೆ ಕಾಯಿ ಬಿಡಲು ಪ್ರಾರಂಭಿಸಿ ಮುಂದಿನ 45-50 ದಿವಸಗಳ ವರೆಗೂ ಕಾಯಿ ಬಿಡುತ್ತದೆ
16. ಪ್ರತಿ ಗಿಡಕ್ಕೆ 35 ರಿಂದ 40 ಕೆಜಿ ಇಳುವರಿ ಪಡೆಯಬಹುದು
17. ಪ್ರತಿ ಕಾಯಿಯಲ್ಲಿ 15-20 ಬೀಜಗಳು ಇರುತ್ತವೆ
18. ನಾಟಿ ಮಾಡಿದ ಮೇಲೆ 1 ಅಡಿ ಎತ್ತರ ಬೆಳೆದ ಮೇಲೆ ಮುಡಿ ಚಿವುಟಬೇಕು 2-3 ಬಾರಿ ಮುಡಿ ಚಿವುಟುವುದರಿಂದ ಹೆಚ್ಚು ಇಳುವರಿ ಪಡೆಯಬಹುದು
19. ವಣ ಬೇಸಾಯವಾದಲ್ಲಿ ಜೂನ್ ಜುಲೈ ತಿಂಗಳು ನಾಟಿ ಮಾಡಲು ಸೂಕ್ತವಾದ ಸಮಯ
20. ನೀರಾವರಿ ಪ್ರದೇಶವಾದಲ್ಲಿ ವರ್ಷದ ಯಾವುದೇ ತಿಂಗಳಲ್ಲಿ ಬೇಕಾದರೂ ನಾಟಿ ಮಾಡಬಹುದು.



### ನುಗ್ಗೆ ಬೆಳೆಯ ಬೇಸಾಯ ಮಾಹಿತಿ

ನುಗ್ಗೆ ಬೆಳೆಯುವುದು ತೀರ ಕಷ್ಟದ ಕೆಲಸವಲ್ಲ. ಆದರೆ ನಿರ್ವಹಣೆ ಮಾತ್ರ ಅಚ್ಚುಕಟ್ಟಾಗಿರಬೇಕು. ರಾಸಾಯನಿಕ ಬಳಸಿ ನುಗ್ಗೆ ಬೆಳೆಯುತ್ತೇನೆ ಅಂದರೆ ಪ್ರಯೋಜನವಿಲ್ಲ. ಸಾವಯವ ಪದ್ಧತಿಯಲ್ಲಿ ಬೆಳೆದು ನೋಡಿ, ಬಂಪರ್ ಇಳುವರಿ ಗ್ಯಾರಂಟಿ. ಅಂದಹಾಗೇ, ನುಗ್ಗೆ ಬೆಳೆಯುವುದು ಹೇಗೆ ಅಂತ ತಲೆ ಕೆಡಿಸಿಕೊಳ್ಳಬೇಡಿ.

ನುಗ್ಗೆ ಬೆಳೆಯ ಬೇಕೆಂದಿರುವ ಕೃಷಿಕರೇ ಕೆಲ ಸತ್ಯ ತಿಳಿದುಕೊಳ್ಳಿ.

ರಾಸಾಯನಿಕ ಬಳಸಿ ನುಗ್ಗೆ ಕೃಷಿ ಮಾಡಲು ಆಗದು. ಚೆನ್ನಾಗಿ ಬೆಳೆ ಬರಬೇಕು, ಲಾಭ ಮಾಡಬೇಕು ಅಂದರೆ ಮೊದಲು ನುಗ್ಗೆಗೆ ಯಥೇಚ್ಚವಾಗಿ ಪೋಷಕಾಂಶಗಳು ದೊರೆಯುವಂತೆ ಮಾಡಬೇಕು.

ನುಗ್ಗೆ ತೀರ ದೊಡ್ಡ ಗಿಡವಾಗುವ ಬೆಳೆ ಅಲ್ಲ, ಆರೇಳು ಅಡಿ ಎತ್ತರಕ್ಕೆ ಪೊದೆಯಾಕಾರದಲ್ಲಿ ಬೆಳೆಸಬೇಕು, ಹೀಗಾಗಿ ಜಾಸ್ತಿ ಅಂತರ ಇಟ್ಟು ಬೆಳೆಯುವ ಅವಶ್ಯಕತೆ ಇಲ್ಲ. ಸಾಲಿನಿಂದ ಸಾಲಿಗೆ ಏಳು ಅಡಿ, ಗಿಡದಿಂದ ಗಿಡಕ್ಕೆ ಆರು ಅಡಿ ಸಾಕು. ಹೀಗೆ ನಿಮ್ಮ ಜಮೀನಿನಲ್ಲಿ ಅಳತೆ ಪ್ರಕಾರ ಗುರುತು ಮಾಡಿಕೊಂಡು ಒಂದೂವರೆ ಅಡಿ ಆಳ-ಅಗಲದ ಗುಂಡಿ ತೆಗೆಸಬೇಕು. ಗುಂಡಿಯಿಂದ ತೆಗೆದ ಮಣ್ಣು ಹಾಗೂ ಅಷ್ಟೇ ಪ್ರಮಾಣದ ಒಳ್ಳೆಯ ಕೊಟ್ಟಿಗೆ ಗೊಬ್ಬರ ಬೆರೆಸಿ ಅದೇ ಗುಂಡಿಗೆ ತುಂಬಬೇಕು. ಹೀಗೆ ರೆಡಿಯಾದ ಗುಂಡಿಯಲ್ಲಿ ಸದೃಢವಾದ ಸಸಿ ನೆಡಬೇಕು.

ನಿಮಗೆ ಗೊತ್ತೇ ಇರುವಂತೆ, ನುಗ್ಗೆಗಿಡಗಳು ಸಾರಜನಕ ಸ್ಥಿರೀಕರಣ ಮಾಡುವ ಸಾಮರ್ಥ್ಯ ಹೊಂದಿವೆ. ಇದಕ್ಕೆ ನೀವು ಒಂದೇ ಒಂದು ಕಾಳು ಯೂರಿಯಾ ಗೊಬ್ಬರ ಕೊಡುವುದು ಬೇಡ. ಪ್ರತಿ ಎರಡು ತಿಂಗಳಿಗೊಮ್ಮೆ ಬುಡದ ಸುತ್ತ ಪಾತಿ ಮಾಡಿ ನಾಲ್ಕೈದು ಬೊಗಸೆ ಎರೆಹುಳು ಗೊಬ್ಬರ ಕೊಟ್ಟರೆ ಸಾಕು. ಜೊತೆಗೆ ಜೀವಾಮೃತ ತಯಾರಿಸಿಕೊಂಡು ಪ್ರತಿ ಇಪ್ಪತ್ತು ದಿನಕ್ಕೊಮ್ಮೆ ಕಡ್ಡಾಯವಾಗಿ ಸಿಂಪಡಿಸಬೇಕು ಹಾಗೂ ಗಿಡಗಳ ಬುಡದಲ್ಲಿ ಹಾಕಬೇಕು. ಇಷ್ಟಾದರೆ ಸಾಕು, ಮತ್ತ್ಯಾವುದೇ ಮೇಲುಗೊಬ್ಬರದ ಅವಶ್ಯಕತೆ ಇಲ್ಲ.

### ಇಳುವರಿ ಹೀಗಿದ್ದರೇನೇ ಲಾಭ

* ಒಂದು ಕಾಯಿ 60-70 ಸೆಂ.ಮೀ. (ಎರಡು ಅಡಿ) ಉದ್ದ ಇರಬೇಕು
* ಒಂದು ಕಾಯಿ 100-120 ಗ್ರಾಂ. ತೂಕ ಇರಬೇಕು
* ಒಂದು ಗಿಡ ಒಂದು ವರ್ಷಕ್ಕೆ ಕಮ್ಮಿಯೆಂದರೂ 250-300 ಕಾಯಿ ಬಿಡಬೇಕು.ಸಸಿ ನಾಟಿ ಮಾಡಿದಾಗ ಯಾವುದೇ ರಾಸಾಯನಿಕ ಗೊಬ್ಬರ ಹಾಕಬೇಡಿ, ನಾಟಿಯಾದ ಮೂರು ತಿಂಗಳ ನಂತರ ಒಂದು ಎಕರೆಗೆ, 25 ಕೆ.ಜಿ ಡಿಎಪಿ, 10 ಕೆ.ಜಿ ಯೂರಿಯಾ, 7 ಕೆ.ಜಿ ಪೊಟ್ಯಾಷ್ ಗೊಬ್ಬರದ ಜೊತೆ ಸೇರಿಸಿ, ಗಿಡದ ಸುತ್ತ ರಿಂಗ್ ಮಾಡಿ ಹಾಕಿ. ನಂತರ ಮತ್ತೆ ಮೂರು ತಿಂಗಳು ಬಿಟ್ಟು ಇಷ್ಟೇ ಪ್ರಮಾಣದ ಗೊಬ್ಬರವನ್ನು ಹೀಗೇ ಕೊಡಿ.

ಇನ್ನು ಹಾಗೇ ಬಿಟ್ಟರೆ ನುಗ್ಗೆ 6-7 ಮೀಟರ್ ಎತ್ತರಕ್ಕೆ ಬೆಳೆದು ನಿಲ್ಲುತ್ತದೆ. ಹೀಗೆ ಎತ್ತರ ಬೆಳೆದರೆ ಕಾಯಿ ಕೀಳುವುದು ಕಷ್ಟ ಜೊತೆಗೆ ಇಳುವರಿಯಲ್ಲೂ ಗಣನೀಯವಾಗಿ ಕಡಿಮೆಯಾಗುತ್ತದೆ. ಸಾಧ್ಯವಾದಷ್ಟು ಗಿಡಗಳು ಗಿಡ್ಡಗೆ ಪೊದೆಯಾಕಾರವಾಗಿ ಬೆಳೆಯುವಂತೆ ನೋಡಿಕೊಳ್ಳಬೇಕು. ಒಂದು, ಒಂದೂವರೆ ಮೀಟರ್ ಬೆಳೆದಾಕ್ಷಣ ಕುಡಿ ಚಿವುಟಿ ಎತ್ತರ ಬೆಳೆಯದಂತೆ ಮಾಡಬೇಕು. ಇದರಿಂದ ಹೆಚ್ಚು ಕವಲುಗಳು ಬಂದು ಗಿಡ ಪೊದೆಯಂತಾಗಿ ಹೆಚ್ಚಿನ ಕಾಯಿ ಬಿಡುತ್ತವೆ. ನೀರಿನ ನಿರ್ವಹಣೆಯೂ ಅಷ್ಟೇ ಮುಖ್ಯ, ಪ್ರತಿ ಐದಾರು ದಿನಕ್ಕೊಮ್ಮೆ ತಪ್ಪದೇ ನೀರುಣಿಸಿ. ಆಮೇಲೆ ನುಗ್ಗೆದು ಜೊತೆಗೇ ನುಗ್ಗಿ ಬರುತ್ತದೆ ಲಾಭ.

# 30 ವರ್ಷಗಳ ಒಳ ಮೀಸಲಾತಿ ಅನುಷ್ಠಾನ ಮಾಡಲು ಒಡಕುಧ್ವನಿಯ ರಾಜ್ಯ ಕಾಂಗ್ರೆಸ್ಸಿಗರು ವಿಫಲ; ಗೋವಿಂದ ಎಂ ಕಾರಜೋಳ

**ತುಮಕೂರು:** ಭಾರತದ ಚಾತುರ್ವರ್ಣದ ಜಾತಿ ವ್ಯವಸ್ಥೆಯಡಿ ಮಾದಿಗ ಸಮುದಾಯ ಅತ್ಯಂತ ತುಳಿತಕ್ಕೆ ಶೋಷಣೆಗೆ ಒಳಗಾಗಿ ಡಾ ಬಾಬಾ ಸಾಹೇಬ್ ಅವರು ಕೊಟ್ಟ ಸಂವಿಧಾನದ ಆಶಯಗಳಿಂದ ವಿಫಲವಾಗಿ ದೇಶದಲ್ಲಿರುವ ಮೀಸಲಾತಿ ವ್ಯವಸ್ಥೆಯಡಿ ಕಳೆದ 30 ವರ್ಷಗಳಿಂದ ಪ್ರತಿದಿನ ಹೋರಾಟದ ಹಾದಿಯಲ್ಲಿ ಮಾದಿಗ ಸಮುದಾಯ ಜೀವನ ಸವೆಸುತ್ತಿರುವುದು ಶೋಚನೀಯ ಎನಿಸಿದ್ದು ಸುಮಾರು 30 ವರ್ಷಗಳ ಮಾದಿಗರ ಈ ಹೋರಾಟಕ್ಕೆ ಕೇಂದ್ರ ಸರ್ಕಾರ ಸುಪ್ರೀಂಕೋರ್ಟ್ನಿಂದ ಸಿಹಿ ಸುದ್ದಿ ಕೊಡಿಸಿದ್ದರು ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ಒಳ ಮೀಸಲಾತಿಯನ್ನು ಜಾರಿ ಮಾಡುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಸಂಸದ ಹಾಗೂ ಮಾಜಿ ಸಚಿವ ಗೋವಿಂದ ಎಂ ಕಾರಜೋಳ ಅವರು ತಿಳಿಸಿದರು.

ತುಮಕೂರು ನಗರದ ಎಂಪ್ರೆಸ್ ಕಾಲೇಜು ಸಭಾಂಗಣದಲ್ಲಿ ಕರ್ನಾಟಕ ಮಾದಿಗ ದಂಡೋರ (ಮಾದಿಗ ಒಳ ಮೀಸಲಾತಿ ಹೋರಾಟ ಸಮಿತಿ) ಮಾದಿಗ ವಿದ್ಯಾರ್ಥಿ ಯುವ ಪರಿಷತ್ ಇವರ ಆಶ್ರಯದಲ್ಲಿ ಜಗದ್ಗುರು ಪರಮಪೂಜ್ಯ ಶ್ರೀ ಆದಿ ಜಾಂಬವ ಜಯಂತಿ, 7ನೇ ಶೈಕ್ಷಣಿಕ ಜಾಗೃತಿ ಸಮಾವೇಶ, ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ, ಜಿಲ್ಲೆಯ ಮಾದಿಗ ಸಮುದಾಯದ ಜನಗಣತಿ ಅಭಿಯಾನ ಹಾಗೂ ಮಾದಿಗ ಸಮುದಾಯದ ವಧು-ವರರ ಸಮಾವೇಶ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಸಂಸದರು



ಮಾದಿಗ ಸಮುದಾಯವು ಸುಮಾರು ವರ್ಷಗಳಿಂದ ಅಂಬೇಡ್ಕರ್ ಅವರು ನೀಡಿದ ಶಿಕ್ಷಣ ಸಂಘಟನೆ ಹೋರಾಟದ ಹಾದಿಯಲ್ಲಿ ತಮಗೆ ಬರಬೇಕಾದ ಒಳ ಮೀಸಲಾತಿ ಪಾಲನ್ನು ನೀಡಬೇಕು ಎಂದು ಅನೇಕ ರೀತಿಯ ಸಂಘರ್ಷ ಹೋರಾಟಗಳ ಕಾರಣದಿಂದಾಗಿ ಇಂದು ನಮ್ಮ ನಾಯಕ ನರೇಂದ್ರ ಮೋದಿಯವರು ಕೇಂದ್ರ ಸರ್ಕಾರ ಒಳ ಮೀಸಲಾತಿ ಜಾರು ಮಾಡುವಲ್ಲಿ ಬದ್ಧವಾಗಿದೆ ಎಂದು ಸುಪ್ರೀಂಕೋರ್ಟ್ಗೆ ಮನವರಿಕೆ ಮಾಡಿ ಸುಮಾರು ಆರು ತಿಂಗಳ ಹಿಂದೆ ಸುಪ್ರೀಂ ಕೋರ್ಟಿನಿಂದ ಸಿಹಿ ಸುದ್ದಿ ಕೊಡಿಸಿದರು ಕೂಡ ರಾಜ್ಯ ಸರ್ಕಾರ ಒಳ ಮೀಸಲಾತಿಯನ್ನು ಅನುಷ್ಠಾನಗೊಳಿಸುವಲ್ಲಿ ಸಂಪೂರ್ಣ ವಿಫಲವಾಗಿದ್ದು ಕಾಂಗ್ರೆಸ್ ಪಕ್ಷದಲ್ಲಿರುವ ಮಾದಿಗ ಸಮುದಾಯದ ಮುಖಂಡರು ಸಮುದಾಯವನ್ನ ದಾರಿ ತಪ್ಪಿಸುವ ಕೆಲಸವನ್ನು ಮಾಡುತ್ತಿದ್ದಾರೆ ಎಂದು ಕಿಡಿ ಕಾರಿದರು.

ಸುಮಾರು ಆರು ತಿಂಗಳಿನಿಂದ ನಾಗಮೋಹನ್ ಅವರಿಗೆ ಒಳ ಮೀಸಲಾತಿ ಸಾಧಕ ಬಾದಕಗಳನ್ನ ಅಧ್ಯಯನ ಮಾಡಲು ತಿಳಿಸಿ ಅವರಿಗೆ ಸರಿಯಾದ ಮಾಹಿತಿಯನ್ನ ಸರ್ಕಾರದ ಕಡೆಯಿಂದ ಒದಗಿಸುತ್ತಿಲ್ಲ ಸುಖ ಸುಮ್ಮನೆ ವಿಳಂಬ ಮಾಡುತ್ತಾ ಕುಂಟುನೆಪ ಹೇಳಿ ಮಾದಿಗ ಸಮುದಾಯದ ಬಡ ಮಕ್ಕಳ ಶಿಕ್ಷಣ ಹಾಗೂ ಉದ್ಯೋಗ ಹಾಗೂ ಸರ್ಕಾರಿ ಸೌಲಭ್ಯಗಳನ್ನು ಕಡೆಗಣಿಸಲು ಕುತಂತ್ರ ರೂಪಿಸಿ ಒಳ ಮೀಸಲಾತಿ ಜಾರಿ ಮಾಡುವಲ್ಲಿ ಕಾಂಗ್ರೆಸ್ ಪಕ್ಷ ಒಡಕು ಧ್ವನಿ ಸಮಸ್ಯೆಯನ್ನು ಮುಂದೆ ಇರಿಸಿದೆ ತಿಳಿಸಿದರು.

ರಾಜ್ಯದಲ್ಲಿ ಬಹು ಸಂಖ್ಯಾತರಾದ ಮಾದಿಗ ಸಮುದಾಯಕ್ಕೆ ಸಾಮಾಜಿಕ ನ್ಯಾಯ ನೀಡಬೇಕು ಎಂಬ ದೃಷ್ಟಿಯಿಂದ ಪ್ರಧಾನಿ ನೇರೆಂದ್ರ ಮೋದಿಯವರು ಕಳೆದ ಸಂಸತ್ ಚುನಾವಣೆ ವೇಳೆ ಪಕ್ಕದ ಆಂಧ್ರಪ್ರದೇಶದಲ್ಲಿ ಒಳ ಮೀಸಲಾತಿಯನ್ನು ಜಾರಿ ಮಾಡುತ್ತೇನೆ ಎಂದು ಭರವಸೆ ನೀಡಿ ಮಾದಿಗ ಸಮುದಾಯವನ್ನು ಗೌರವಪೂರ್ವಕವಾಗಿ ನಡೆಸಿಕೊಂಡಿದ್ದಾರೆ ಪಕ್ಕದ ರಾಜ್ಯದ ಸರ್ಕಾರ ಒಳ ಮೀಸಲಾತಿಯನ್ನು ಜಾರಿ ಮಾಡಿದ್ದರು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಆಂತರಿಕ ರಾಜಕಾರಣದಿಂದಾಗಿ ಒಳ ಮೀಸಲಾತಿ ಜಾರಿ ಮಾಡುವಲ್ಲಿ ಕಾಂಗ್ರೆಸ್ ನಾಯಕರು ಮಾದಿಗ ಸಮುದಾಯದ ಎಂಎಲ್ಎ ಸಚಿವರುಗಳು ಸಂಪೂರ್ಣ ವಿಫಲರಾಗಿದ್ದಾರೆ ಎಂದು ಆಕ್ರೋಶ ಹೊರಹಾಕಿದ್ದರು.

ಈ ಸಂದರ್ಭದಲ್ಲಿ ಮಾದಿಗ ದಂಡೋರದ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಎಂ ಶಂಕ್ರಪ್ಪ, ಪ್ರಧಾನ ಕಾರ್ಯದರ್ಶಿಗಳಾದ ಆರ್. ಪ್ರಕಾಶ್, ಮಾಜಿ ಶಾಸಕ ಗಂಗಹನುಮಯ್ಯ, ಭಾಜಪ ಎಸ್ ಸಿ ಘಟಕ ಜಿಲ್ಲಾಧ್ಯಕ್ಷರಾದ ಅಂಜಿನಪ್ಪ, ಯುವ ಮುಖಂಡರಾದ ಪ್ರಕಾಶ್, ನವೀನ್ ಕುಮಾರ್, ಕಿರಣ್ ಕುಮಾರ್ ಸೇರಿದಂತೆ ವಿವಿಧ ಜಿಲ್ಲೆಗಳ ಮಾದಿಗ ಯುವ ಪರಿಷತ್ ಸಂಘಟನೆಯ ಮುಖಂಡರು, ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

### ಗದಗ ಜಿಲ್ಲೆಯಲ್ಲಿ ಭಾರೀ ಪ್ರತಿಕ್ರಿಯೆ ಪಡೆದ ಉದ್ಯೋಗ ಮೇಳ - 2025

# 827 ಅಭ್ಯರ್ಥಿಗಳು ಕೆಲಸ ಗಿಟ್ಟಿಸಿಕೊಳ್ಳುವಲ್ಲಿ ಸಫಲರು : ಸಚಿವ ಎಚ್. ಕೆ. ಪಾಟೀಲ

**ಗದಗ:** ಗದಗ ಜಿಲ್ಲಾಡಳಿತ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಕೌಶಲ್ಯಾಭಿವೃದ್ಧಿ ಇಲಾಖೆ ಮತ್ತು ಇತರೆ ಇಲಾಖೆಗಳಿಂದ ಆಯೋಜಿಸಿದ ಗದಗ ಜಿಲ್ಲಾ ಉದ್ಯೋಗ ಮೇಳ - 2025 ಪ್ರಭುತ್ವ ಉದ್ಯೋಗಾಕಾಂಕ್ಷಿಗಳಿಂದ ಭಾರೀ ಸ್ಪಂದನೆ ಕಂಡಿದೆ.

ಉದ್ಯೋಗ ಮೇಳದ ಪ್ರಮುಖ ಅಂಕಿ ಅಂಶಗಳು: ಉದ್ಯೋಗ ಮೇಳಕ್ಕೆ ಆಫ್ ಲೈನ್ ಹಾಗೂ ಆನ್ ಲೈನ್ಮೂಲಕ 6243 ಅಭ್ಯರ್ಥಿಗಳು ನೊಂದಣಿ ಮಾಡಿಕೊಂಡಿದ್ದರು. ಮೇಳದಲ್ಲಿ 4089 ಸಂದರ್ಶನಕ್ಕೆ ಹಾಜರಾದ ಅಭ್ಯರ್ಥಿಗಳ ಪೈಕಿ, 827 ಅಭ್ಯರ್ಥಿಗಳು ಕೆಲಸ ಗಿಟ್ಟಿಸಿಕೊಳ್ಳುವಲ್ಲಿ ಸಫಲರಾಗಿದ್ದಾರೆ.

ಸಂದರ್ಶನದಲ್ಲಿ 1067 ಅಭ್ಯರ್ಥಿಗಳು ಶಾರ್ಟ್ ಲಿಸ್ಟೆಡ್ ಸೆಲೆಕ್ಟ್ ಆಗಿದ್ದಾರೆ. ಆಯ್ಕೆ ಹೊಂದಿದ ಅಭ್ಯರ್ಥಿಗಳ ಪೈಕಿ 12 ಅಭ್ಯರ್ಥಿಗಳು ಕೆಲಸಕ್ಕೆ ಹಾಜರಾಗಲು ರವಿವಾರವೇ ಬೆಂಗಳೂರಿಗೆ ವಾಹನದಲ್ಲಿ ತೆರಳಿದರು. ಈ ವಾಹನಕ್ಕೆ ಸಚಿವ ಎಚ್. ಕೆ. ಪಾಟೀಲ ಅವರು ಚಾಲನೆ ನೀಡಿದರು.

ಜನರಿಂದ ಉತ್ತಮ ಪ್ರತಿಕ್ರಿಯೆ:

ಉದ್ಯೋಗ ಮೇಳಕ್ಕೆ ಗದಗ ಜಿಲ್ಲೆಯ ಯುವಕರು ಹಾಗೂ ಮಹಿಳೆಯರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ವಿವಿಧ ಖಾಸಗಿ ಹಾಗೂ ಸರಕಾರಿ ಕಂಪನಿಗಳು ತಮ್ಮ ಉದ್ಯೋಗ ಅವಕಾಶಗಳನ್ನು ಇಲ್ಲಿ ಪ್ರಸ್ತುತಪಡಿಸಿದ್ದು, ಹಲವರು ತಕ್ಷಣವೇ ಉದ್ಯೋಗ ಪಡೆಯುವಂತಾಗಿದೆ.

ಸ್ನಾತಕೋತ್ತರರಿಂದ ಐಟಿಐ ಪದವಿದಾರರು ತನಕ ಎಲ್ಲರಿಗೂ ಅವಕಾಶ: ಹತ್ತಾರು ಕಂಪನಿಗಳು ಪಾಲ್ಗೊಂಡು ವಿವಿಧ ಕ್ಷೇತ್ರಗಳ ಉದ್ಯೋಗಗಳಿಗಾಗಿ ಸಂದರ್ಶನ ನಡೆಸಿದವು. ಆಕರ್ಷಕ ವೇತನ, ತರಬೇತಿ ಹಾಗೂ ಕರಿಯರ್ ಗ್ರೋತ್ ಅವಕಾಶಗಳೊಂದಿಗೆ ಯುವ ಪ್ರತಿಭೆಗಳಿಗೆ ದಾರಿ ತೆರೆಯಲಾಯಿತು.

**ಸಚಿವ ಡಾ. ಎಚ್.ಕೆ. ಪಾಟೀಲರ ನೇತೃತ್ವದಲ್ಲಿ ಯಶಸ್ವಿ**

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ. ಪಾಟೀಲ ಅವರು ಮಾರ್ಗದರ್ಶನದಲ್ಲಿ ಈ ಕಾರ್ಯಕ್ರಮ ಯಶಸ್ವಿಯಾಗಿ ಪೂರ್ಣಗೊಂಡಿತು.

ಗದಗ ಜಿಲ್ಲಾಧಿಕಾರಿ, ಜನಪ್ರತಿನಿಧಿಗಳ ಪ್ರಶಂಸೆ:

ಗದಗ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ಹಾಗೂ ಜನಪ್ರತಿನಿಧಿಗಳು ಈ ಮೇಳ ಯಶಸ್ವಿಯಾಗಿದ್ದಕ್ಕೆ ಸಂತೋಷ ವ್ಯಕ್ತಪಡಿಸಿದ್ದು, ಈ ರೀತಿಯ ಕಾರ್ಯಕ್ರಮಗಳನ್ನು ಮುಂದುವರಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

ಸಮಾರೋಪ ಸಮಾರಂಭದ ವೇದಿಕೆಯಲ್ಲಿ ಮಾಜಿ ಶಾಸಕರಾದ ಡಿ ಆರ್ ಪಾಟೀಲ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಾಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಬಿಬಿ ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಕೃಷ್ಣಗೌಡ ಪಾಟೀಲ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಮಹೇಶ್ ಪೋತದಾರ, ಕೌಶಲ್ಯ ಅಭಿವೃದ್ಧಿ ಇಲಾಖೆ ಅಧಿಕಾರಿ ಡಾ. ಮಲ್ಲೂರ ಬಸವರಾಜ್ ಸೇರಿದಂತೆ ಇತರರು ಇದ್ದರು.

## ಜಿಲ್ಲೆಯ ಹಗಲು ವೇಷ ಕಲಾವಿದ ಡಾ. ಗೋವಿಂದಪ್ಪ ರಾಮಚಂದ್ರಪ್ಪ ವೇಷಗಾರ ಜಾನಪದ ಅಕಾಡೆಮಿ ವಾರ್ಷಿಕ ಗೌರವ ಪ್ರಶಸ್ತಿಗೆ ಆಯ್ಕೆ



**ಗದಗ :** ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ದೇವಿಹಾಳ ಗ್ರಾಮದ ಡಾ. ಗೋವಿಂದಪ್ಪ ರಾಮಚಂದ್ರಪ್ಪ ವೇಷಗಾರ ಅವರು ಹಗಲು ವೇಷ ಕಲಾವಿದರಾಗಿದ್ದು 2024 ನೇ ಸಾಲಿನ ಕರ್ನಾಟಕ ಜಾನಪದ ಅಕಾಡೆಮಿ ವಾರ್ಷಿಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ರಾಜ್ಯದ 30 ಜಿಲ್ಲೆಗಳಿಂದ 30 ಹಿರಿಯ ಜಾನಪದ ಕಲಾವಿದರಿಗೆ ವಾರ್ಷಿಕ ಗೌರವ ಪ್ರಶಸ್ತಿ, ಇಬ್ಬರು ಜಾನಪದ ತಜ್ಞರಿಗೆ ತಜ್ಞ ಪ್ರಶಸ್ತಿ ನೀಡಲಾಗುವುದು. ಕಲಾವಿದರಿಗೆ ನೀಡುವ ಗೌರವ ಪ್ರಶಸ್ತಿಯ ಮೊತ್ತ ರೂ. 25,000 ಮತ್ತು ಇಬ್ಬರು ಕ್ಷೇತ್ರ ತಜ್ಞರಿಗೆ ತಲಾ ರೂ. 50,000/- ಗಳು ಪ್ರಶಸ್ತಿ ಮೊತ್ತದ ಜೊತೆಗೆ ಸ್ಮರಣಿಕೆ, ಶಾಲು, ಹಾರ, ಫಲ ತಾಂಬೂಲ ನೀಡಿ ಗೌರವಿಸಲಾಗುವುದು. ಬೆಂಗಳೂರಿನಲ್ಲಿ ನಡೆದ ಸರ್ವಸದಸ್ಯರ ಸಭೆಗ ತೀರ್ಮಾನದಂತೆ ಜಾನಪದ ಕಲಾವಿದರ ಮತ್ತು ತಜ್ಞರನ್ನು 2024 ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿ ಹಾಗೂ ತಜ್ಞ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿ ಪ್ರಕಟಣೆ ತಿಳಿಸಿದೆ.

# ಪವಿತ್ರ ರಂಜಾನ್ ಉಪವಾಸ ವ್ರತ ಕೈಗೊಂಡ ಐದು ವರ್ಷದ ಪೋರಿ

**ದಾವಣಗೆರೆ:** ಪವಿತ್ರ ರಂಜಾನ್ ಹಬ್ಬದ ವೇಳೆ ಮುಸ್ಲಿಂ ಬಾಂಧವರು ಕಟ್ಟುನಿಟ್ಟಿನ ಉಪವಾಸ ವ್ರತ ಕೈಗೊಳ್ಳುತ್ತಾರೆ. ಆದ್ರೆ, ದಾವಣಗೆರೆಯ ಐದು ವರ್ಷದ ಪೋರಿ ಉಪವಾಸ ವ್ರತ ಆಚರಿಸುವ ಮೂಲಕ ಈಗ ಎಲ್ಲರ ಗಮನ ಸೆಳೆದಿದ್ದಾಳೆ.

ಅಖಿಲ ಭಾರತ ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿ ಸೈಯದ್ ಖಾಲಿದ್ ಅಹ್ಮದ್ ಪುತ್ರಿ, ಐದು ವರ್ಷದ ಬಾಲೆ ಸೈಯದಾ ದನೀನ್ ಮರಿಯಮ್ ಉಪವಾಸ ವ್ರತ ಮಾಡುವ ಮೂಲಕ ಎಲ್ಲರ ಆಕರ್ಷಣೆಯ ಕೇಂದ್ರ ಬಿಂದುವಾಗಿದ್ದಾಳೆ. ಈಕೆ ಕಾಂಗ್ರೆಸ್ ಮುಖಂಡ ಸೈಯದ್ ಸೈಫುಲ್ಲಾ ಅವರ ಮೊಮ್ಮಗಳು.

ಬೆಳಿಗ್ಗೆಯೇ ಎದ್ದು ಮನೆಯವರ ಜೊತೆ ಪ್ರಾರ್ಥನೆ ಸಲ್ಲಿಸುತ್ತಾಳೆ. ಪುತ್ರಿಗೆ ಆರಂಭದಲ್ಲಿ ಮನೆಯವರು ಬೇಡ ಎಂದರೂ ಆಕೆ ಮಾತ್ರ ನಾನು ಉಪವಾಸ ವ್ರತ ಆಚರಿಸುತ್ತೇನೆ



ಎಂದಳು. ಚಾಕೂಲೇಟ್ ನೀಡಿದರೂ ಸೇವಿಸದೇ ಕಠಿಣ ವ್ರತ ಆಚರಿಸಿ ಎಲ್ಲರೂ ಹುಬ್ಬೇರುವಂತೆ ಮಾಡಿದ್ದಾಳೆ.

ಮಗಳ ಉಪವಾಸ ಕಂಡು ಮನೆಯವರು, ಕುಟುಂಬಸ್ಥರು ಹೆಮ್ಮೆ ಪಡುತ್ತಿದ್ದಾರೆ. ಮೊಮ್ಮಗಳ ಕಠಿಣ ಉಪವಾಸಕ್ಕೆ ಎಲ್ಲರೂ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಇದು ನಮಗೂ ಖುಷಿ ತಂದಿದೆ. ದೊಡ್ಡವರೇ ಉಪವಾಸ ಮಾಡುವುದು ಅಷ್ಟು ಸುಲಭವಲ್ಲ. ಕೇವಲ ಐದು ವರ್ಷಕ್ಕೆ ಬೆಳಿಗ್ಗೆಯೇ ಬೇಗನೇ ಎದ್ದು ಮನೆಯವರೊಟ್ಟಿಗೆ ಪ್ರಾರ್ಥನೆ ಸಲ್ಲಿಸಿ, ಬೆಳಿಗ್ಗೆಯಿಂದ ಸಂಜೆಯವರೆಗೆ ಉಪವಾಸ ಇರುತ್ತಾಳೆ. ಇದು ನಮಗೂ ಸಂತೋಷ ತಂದಿದೆ. ಅಕ್ಕಪಕ್ಕದವರೂ ಹೆಮ್ಮೆ ಪಡುತ್ತಿದ್ದಾರೆ ಎಂದು ಸೈಯದ್ ಸೈಫುಲ್ಲಾ ಅವರು ಹೇಳಿದ್ದಾರೆ.ಮಗಳ ಬಗ್ಗೆ ನನಗೆ ಮಾತ್ರವಲ್ಲ, ಇಡೀ ಕುಟುಂಬಕ್ಕೆ ಹೆಮ್ಮೆಯ ವಿಚಾರ. ಬಡಾವಣೆಯ ಜನರೂ ಹೆಮ್ಮೆಪಡುತ್ತಿರುವುದು ನಮಗೂ ಸಂತೋಷ ತಂದಿದೆ. ರಂಜಾನ್ ಉಪವಾಸಗಳನ್ನು ಮುಸ್ಲಿಂ ಧರ್ಮದ ಅನುಯಾಯಿಗಳು ಶ್ರದ್ಧಾ ಭಕ್ತಿಯಿಂದ ಆಚರಿಸುತಾರೆ. ದ್ರವ ಅಥವಾ ಘನ ಆಹಾರ ಸೇವನೆ ಮಾಡದೇ ಉಪವಾಸವಿದ್ದು, ಕಠಿಣ ವ್ರತ ಕೈಗೊಳ್ಳುತಾರೆ. ಐದು ವರ್ಷದ ಪುತ್ರಿಯ ಈ ಕೈಂಕರ್ಯಕ್ಕೆ ಎಲ್ಲರೂ ಮೆಚ್ಚುಗೆ ಮಾತುಗಳನ್ನಾಡುತ್ತಿದ್ದಾರೆ ಎಂದು ಸೈಯದ್ ಖಾಲಿದ್ ಅಹ್ಮದ್ ತಿಳಿಸಿದ್ದಾರೆ.

## ಜೀವದ ಹಂಗು ತೊರೆದು ಪ್ರಯಾಣಿಕನನ್ನು ರಕ್ಷಿಸಿದ ಆರ್‌ಪಿಎಫ್ ಮುಖ್ಯ ಪೇದೆ ಸತೀಶ್



**ದಾವಣಗೆರೆ:** ಕಣ್ಣೆದುರಿಗೆ ರೈಲಿನ ಚಕ್ರಕ್ಕೆ ಸಿಲುಕಿ ಪ್ರಾಣ ಕಳೆದುಕೊಳ್ಳುತ್ತಿದ್ದಅಂಗವಿಕಲ ಪ್ರಯಾಣಿಕನನ್ನು ಕರ್ತವ್ಯ ನಿರತ ಆರ್‌ಪಿಎಫ್ ಮುಖ್ಯ ಪೇದೆ ಸತೀಶ್ ಪ್ರಾಣರಕ್ಷಿಸಿರುವ ಘಟನೆ ಭಾನುವಾರ ರಾತ್ರಿ 11.32 ರಲ ವೇಳೆ ನಡೆದಿದೆ.ವಿಜಯಪುರ ಜಿಲ್ಲೆ ಹಿಟ್ಟಿನಹಳ್ಳಿ ಗ್ರಾಮದ ಎಚ್.ಎನ್. ಪ್ರಶಾಂತ್ (25) ಪ್ರಾಣಾಪಾಯದಿಂದಪಾರಾದ ಪ್ರಯಾಣಿಕ. ಪ್ರಶಾಂತ್, ಬೆಂಗಳೂರಿನ ಆಸ್ಪತ್ರೆಗೆ ಹೋಗಿ ಬಲಗಾಲಿನ ಅಳವಡಿಕೆಗೆಮಾಪನ ಮಾಡಿಸಿಕೊಳ್ಳಲು ಹೊಸಪೇಟೆಯಿಂದ ಯಶವಂತಪುರಕ್ಕೆ ಹೋಗುವ ವಿಶೇಷ ರೈಲು (ರೈಲುಸಂಖ್ಯೆ: 06546) ಗಾಡಿಯಲ್ಲಿ ಪ್ರಯಾಣ ಬೆಳೆಸಿದ್ದರು. ಕಾರಣಾಂತರದಿಂದ ವೈದ್ಯರು ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ಮನೆಗೆ ವಾಪಸ್ ಹೋಗಲುನಿರ್ಧರಿಸಿ ಪುನಃ ಯಶವಂತಪುರದಿಂದ ವಿಜಯಪುರಕ್ಕೆ ಹೋಗುವ (ರೈಲು ಸಂಖ್ಯೆ: 065450)ವಿಶೇಷ ರೈಲಿನಲ್ಲಿ ಹೋಗಲು ದಾವಣಗೆರೆ ರೈಲ್ವೆ ನಿಲ್ದಾಣದಲ್ಲಿ ರಾತ್ರಿ 11.32 ಗಂಟೆವೇಳೆಯಲ್ಲಿ ಚಲಿಸುತ್ತಿರುವ ರೈಲಿನಿಂದ ಇಳಿಯಲು ಯತ್ನಿಸಿದ್ದಾರೆ.ಸ್ಥಳದಲ್ಲೇ ಇದ್ದ ಆರ್‌ಪಿಎಫ್ ಮುಖ್ಯ ಪೇದೆ ಬಿ.ಎಸ್. ಸತೀಶ್, ಚಲಿಸುತ್ತಿರುವರೈಲಿನಿಂದ ಕೆಳಗೆ ಬೀಳುತ್ತಿರುವುದನ್ನು ಗಮನಿಸಿ ಪ್ರಾಣದ ಹಂಗು ತೊರೆದು 2ನೇಪ್ಲಾಟ್‌ಫಾರ್ಮ್ ಬದಿಗೆ ಎಳೆದುಕೊಂಡು ವಿಕಲಾಂಗ ಪ್ರಯಾಣಿಕನ ಜೀವ ಉಳಿಸಿದ್ದಾರೆ. ಅಘಾತಕ್ಕೊಳಗಾಗಿದ್ದ ಅಂಗವಿಕಲ ಪ್ರಶಾಂತ್ ಅವರನ್ನು ಸಂತೈಸಿ, ಅವರಿಗೆ ಆತ್ಮಸ್ಥೈರ್ಯತುಂಬಿ ಸಮಾಧಾನ ಮಾಡಿದ್ದಾರೆ. ಬಳಿಕ ತಮ್ಮ ಗ್ರಾಮಕ್ಕೆ ವಾಪಸ್ ಆಗಲು ನೆರವಾಗಿದ್ದಾರೆ.

### ತರಬೇತಿ ಕಾರ್ಯಾಗಾರದಲ್ಲಿ ಜಿ.ಪಂ ಮುಖ್ಯ ಯೋಜನಾಧಿಕಾರಿ ಗಾಯತ್ರಿ ಹೇಳಿಕೆ

# ಗ್ರಾಮಗಳಲ್ಲಿ ಕುಡಿಯುವ ನೀರು, ಸ್ವಚ್ಛತೆಗೆ ಆದ್ಯತೆ ನೀಡಿ

**ಚಿತ್ರದುರ್ಗ:** ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರು ಹಾಗೂ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಜತೆಗೆ ಗ್ರಾಮೀಣ ಜನರಲ್ಲಿ ಆರೋಗ್ಯಕರ ನೈರ್ಮಲ್ಯ ಅಭ್ಯಾಸಗಳನ್ನು ಉತ್ತೇಜಿಸಬೇಕಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಗಾಯತ್ರಿ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಪಂಚಾಯತ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಗಳನ್ನು ಉತ್ತಮ ಅನುಷ್ಠಾನಕ್ಕಾಗಿ ವಾಶ್ ಕಾರ್ಯಕ್ರಮಗಳ ಕುರಿತು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಜಲಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದ್ದು, ಈ ಕಾರ್ಯಕ್ರಮಗಳ ಮೂಲ ಉದ್ದೇಶ ಶುದ್ಧ ಕುಡಿಯುವ ನೀರು, ನೀರಿನ ಸಂರಕ್ಷಣೆ, ಪ್ರತಿಯೊಂದು ಗ್ರಾಮಗಳಲ್ಲಿ ಬಯಲು ಬರ್ಹಿದೆಸೆ ಮುಕ್ತ ಸ್ಥಿರತೆ ಕಾಯ್ದುಕೊಳ್ಳುವುದು ಆಗಿದೆ. ಈ ನಿಟ್ಟಿನಲ್ಲಿ ನೂತನ ತಾಂತ್ರಿಕ ಕೌಶಲ್ಯಗಳನ್ನು ಉಪಯೋಗಿಸಿಕೊಂಡು ಐಇಸಿ ಮತ್ತು ತರಬೇತಿ ಕಾರ್ಯಕ್ರಮಗಳನ್ನು ಗ್ರಾಮೀಣ ಸಮುದಾಯದಲ್ಲಿ ವ್ಯಾಪಕವಾದ ಅರಿವು ಮೂಡಿಸಬೇಕಾಗಿದೆ ಎಂದರು.

ಪ್ರತಿ ಮನೆ ಮನೆಗೂ ನಳ ಸಂಪರ್ಕದ ಮೂಲಕ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವುದು ಸರ್ಕಾರದ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಎಲ್ಲ ಕಡೆಯಲ್ಲೂ ಓವರ್ ಹೆಡ್ ಟ್ಯಾಂಕ್‌ಗಳ ನಿರ್ಮಾಣ ಸೇರಿದಂತೆ ಜಲಜೀವನ್ ಮಿಷಯ್ ವತಿಯಿಂದ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಜಲಜೀವನ್ ಮಿಷನ್ ಯೋಜನೆಯಡಿ ಪೂರ್ಣಗೊಂಡ ಕಾಮಗಾರಿಗಳನ್ನು ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರಿಸಬೇಕು. ಹಸ್ತಾಂತರದ ನಂತರ ನಿರ್ವಹಣೆ ಮಾಡಲು ಅಗತ್ಯ ಕೈಗೊಳ್ಳಬೇಕು ಎಂದು ತಿಳಿಸಿದ ಅವರು, ಜಲಜೀವನ್ ಮಿಷನ್ ಯೋಜನೆಗೆ ಸಂಬಂಧಿಸಿದಂತೆ ಸಾಕಷ್ಟು ಸಮಸ್ಯೆಗಳು, ಅನುಮಾನಗಳು ಇದ್ದು, ತರಬೇತಿ ನಂತರದಲ್ಲಿ ಚರ್ಚಿಸಲು ಅವಕಾಶ ಕಲ್ಪಿಸಲಾಗುವುದು ಎಂದರು.



ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ 2012ರಿಂದಲೂ ವೈಯಕ್ತಿಕ ಹಾಗೂ ಸಮುದಾಯ ಶೌಚಾಯಗಳನ್ನು ನಿರ್ಮಿಸಲಾಗುತ್ತಿದೆ. ಇದರ ಜೊತೆಗೆ ಘನತ್ಯಾಜ್ಯ ನಿರ್ವಹಣೆ, ಬೂದು ನೀರು ನಿರ್ವಹಣೆ ಹಾಗೂ ಹೊಸದಾಗಿ ಮಲತ್ಯಾಜ್ಯ ನಿರ್ವಹಣೆಯನ್ನೂ ಮಾಡಲಾಗುತ್ತಿದೆ ಎಂದರು.

ಜಲಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಗಳ ಯಶಸ್ವಿ ಅನುಷ್ಠಾನಕ್ಕಾಗಿ ಕುಡಿಯುವ ನೀರು ಸರಬರಾಜು, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳ ರಚನೆ, ಕಾರ್ಯಾಚರಣೆ ಜವಾಬ್ದಾರಿಗಳು, ಗ್ರಾಮ ಪಂಚಾಯಿತಿಗೆ ಕಾಮಗಾರಿಗಳ ಹಸ್ತಾಂತರ, ಕುಡಿಯುವ ನೀರಿ ಪೂರೈಕೆ ಸಂಬಂಧ ಕಾರ್ಯಾಚರಣೆ ಮತ್ತು ನಿರ್ವಹಣಾ ನೀತಿ ಓಡಿಎಫ್ ಮಾದರಿ ಗ್ರಾಮಗಳ ಘೋಷಣೆ ನೈರ್ಮಲ್ಯ ಸುಸ್ಥಿರತ ಮತ್ತು ವಾಶ್ ಚಟುವಟಿಕೆಗಳ ಕುರಿತು ತಾ.ಪಂ ಇಒಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಸಹಾಯಕ ಕಾರ್ಯಪಾಲಕ ಅಭಿಯಂತರು, ಸಹಾಯಕ ಅಭಿಯಂತರರು, ಕಿರಿಯ ಅಭಿಯಂತರರು ಹಾಗೂ ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳು, ಪಿಡಿಒಗಳು ಯೋಜನೆಗಳಡಿ ಕಾರ್ಯನಿರ್ವಹಿಸುತ್ತಿರುವ ಕ್ಷೇತ್ರಮಟ್ಟದ ಸಿಬ್ಬಂದಿಗಳಿಗೆ ಸಾಮಾರ್ಥ್ಯಾಭಿವೃದ್ಧಿ ಮಾಡಬೇಕಾಗಿದೆ ಎಂದು ಹೇಳಿದರು.


ತಾಲ್ಲೂಕು ಪಂಚಾಯಿತಿ ವೈ.ರವಿಕುಮಾರ್ ಮಾತನಾಡಿ, ಪ್ರತಿ ಗ್ರಾಮಗಳಲ್ಲಿ ನೀರು ಮತ್ತು ನೈರ್ಮಲ್ಯ ಸಮರ್ಪಕವಾಗಿ ನಿರ್ವಹಣೆ ಮಾಡಬೇಕು. ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುವ ಮೂಲಕ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನೀರು ಮತ್ತು ನೈರ್ಮಲ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ರಾಜ್ಯ ಸಂಪನ್ಮೂಲ ವ್ಯಕ್ತಿ ಜೋಸೆಫ್ ಜಿ.ಎಂ.ರೆಬೆಲ್ಲೋ ಅವರು, ಜಲಜೀವನ್ ಮಿಷನ್ ಯೋಜನೆ ಯಶಸ್ವಿ ಅನುಷ್ಠಾನ ಮತ್ತು ಸುಸ್ಥಿರತೆ ಕಾಪಾಡುವ ನಿಟ್ಟಿನಲ್ಲಿ ಕಾರ್ಯಾಚಾರಣೆ ಮತ್ತು ನಿರ್ವಹಣೆ, ಓಡಿಎಫ್ ಮಾದರಿ ಗ್ರಾಮಗಳ ಘೋಷಣೆ ಮತ್ತು ನೈರ್ಮಲ್ಯ ಸುಸ್ಥಿರತೆ ಮತ್ತು ವಾಶ್ ಚಟುವಟಿಕೆಗಳ ಕುರಿತು, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ರಚನೆ ಮತ್ತು ಕಾರ್ಯಾಚರಣೆ ಜವಾಬ್ದಾರಿಗಳು ಮತ್ತು ಮಳೆ ನೀರು ಕೊಯ್ಲು ಮತ್ತು ಬೂದು ನೀರು ನಿರ್ವಹಣೆ, ಮಳೆ ನೀರು ಕೊಯ್ಲು ಮತ್ತು ಬೂದು ನೀರು ನಿರ್ವಹಣೆ, ಕಲುಷಿತ ನೀರಿನ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಕುರಿತು ವಿಷಯ ಮಂಡನೆ ಮಾಡಿದರು.

ಇದೇ ಸಂದರ್ಭದಲ್ಲಿ ನೀರು ಮತ್ತು ನೈರ್ಮಲ್ಯ ಸಂಬಂಧಿಸಿದ ಪರಿಕರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಲೆಕ್ಕಾಧಿಕಾರಿ ಡಿ.ಆರ್.ಮಧು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಾಯಕ ಕಾರ್ಯಪಾಲಕ ಅಭಿಯಂತರ ಶಿವಮೂರ್ತಿ, ಹಿರಿಯೂರು ಸಹಾಯಕ ಕಾರ್ಯಪಾಲಕ ಅಭಿಯಂತರ ಹಸ್ಸೆನ್ ಭಾಷಾ, ಚಿತ್ರದುರ್ಗ ತಾಲ್ಲೂಕು ಮತ್ತು ಹಿರಿಯೂರು ತಾಲ್ಲೂಕಿನ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ವಾಶ್ ಐಇಸಿ ಸಮಾಲೋಚಕ ನಾಗರಾಜ್, ಜೆಜೆಎಂ ಜಿಲ್ಲಾ ವ್ಯವಸ್ಥಾಪಕ ಮಂಜುನಾಥ್ ಎಸ್ ನಾಡರ್, ಕರ್ನಾಟಕ ಸುಸ್ಥಿರ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ ಸಮಾಲೋಚಕರಾದ ಕಿರಣ್ ಪಾಟೀಲ್, ಚಂದ್ರಕಾಂತ್, ಯಲ್ಲಪ್ಪ, ಗೀತಾಲಕ್ಷ್ಮಿ, ಸ್ವಚ್ಛ ಭಾರತ್ ಮಿಷನ್ ಜಿಲ್ಲಾ ಸಮಾಲೋಚಕ ಹೆಚ್‌ಆರ್‌ಡಿ ವಿನಯ್ ಕುಮಾರ್, ಎಸ್‌ಎಲ್‌ಡಬ್ಲ್ಯೂಎಂ ಸಮಾಲೋಚಕಿ ಪ್ರಿಮಿಳಾ, ಸೇರಿದಂತೆ ಮತ್ತಿತರರು ಇದ್ದರು.

## ಅಗಸ್ಟಾ ವೆಸ್ಟ್ ಲ್ಯಾಂಡ್ ಪ್ರಕರಣ: ಕ್ರಿಶ್ಚಿಯನ್ ಮೈಕೆಲ್ ಗೆ ಜಾಮೀನು ಮಂಜೂರು ಮಾಡಿದ ದೆಹಲಿ ಹೈಕೋರ್ಟ್



**ಹೊಸದಿಲ್ಲಿ:** ಗಣ್ಯರಿಗೆ ಹೆಲಿಕಾಪ್ಟರ್ ಖರೀದಿ ಆಗಸ್ಟ್ ವೆಸ್ಟ್ ಲ್ಯಾಂಡ್ ಪ್ರಕರಣದ ಮಧ್ಯವರ್ತಿ ಕ್ರಿಶ್ಚಿಯನ್ ಮೈಕಲ್ ಜೇಮ್ಸ್‌ಗೆ ದೆಹಲಿ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ.

ಅಕ್ರಮ ಹಣ ವರ್ಗಾವಣೆ ಪಿಎಂಎಎಲ್ ಪ್ರಕರಣ ಇಡಿ ದಾಖಲಿಸಿತ್ತು. ಈತ ಆರು ವರ್ಷ ದಿಂದ ತಿಹಾರ್ ಜೈಲಿನಲ್ಲಿದ್ದರು.

2028 ರಲ್ಲಿ ಗಣ್ಯರ 12 ಹೆಲಿಕಾಪ್ಟರ್ ಖರೀದಿ ಸಂಬಂಧ 3600 ಕೋಟಿ ರೂ. ಭ್ರಷ್ಟಾಚಾರ ನಡೆದಿರುವ ಪ್ರಕರಣ. ದಾಖಲಾಗಿತ್ತು. ಸುಪ್ರೀಂಕೋರ್ಟ್ ಸಹ ಫೆ. 18 ರಂದು ಸಿಬಿಐ ದಾಖಲಿಸಿದ ಪ್ರಕರಣದಲ್ಲಿ ಮೈಕಲ್ ಗೆ ಜಾಮೀನು ನೀಡಿದೆ.

## ಶಿಲ್ಪಕಲೆಗಳ ಕೆತ್ತನೆಯಲ್ಲಿ ವಿಶ್ವಕರ್ಮ ಕೊಡುಗೆ ಅಪಾರ : ತಮ್ಮಯ್ಯ

**ಚಿಕ್ಕಮಗಳೂರು:** ಪರಮಾತ್ಮನ ವಿಗ್ರಹ ಹಾಗೂ ಶಿಲ್ಪಕಲೆಗಳ ಕೆತ್ತನೆಯಲ್ಲಿ ವಿಶ್ವಕರ್ಮರ ಕೊಡುಗೆ ಅಪಾರ. ಬಂಡೆ ಹಾಗೂ ಮರಗಳಿಂದ ಆರಾಧಿಸುವ ದೈವ ಮೂರ್ತಿಗಳನ್ನು ಕೆತ್ತಲ್ಪಟ್ಟಿರುವ ಹಿನ್ನೆಲೆಯಲ್ಲಿ ವಿಶ್ವಕರ್ಮರಿಗೆ ರಾಷ್ಟ್ರದಲ್ಲಿ ವಿಶೇಷ ಗೌರವವಿದೆ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ನಗರದ ಶ್ರೀಲೇಖಾ ಟಾಕೀಸ್ ಸಮೀಪದ ವಿಶ್ವಕರ್ಮ ಸಮುದಾಯ ಭವನದಲ್ಲಿ ಜಿಲ್ಲಾ ವಿಶ್ವಬ್ರಾಹ್ಮಣ ಸಮಾಜ ಸೇವಾಸಭಾದಿಂದ ಹಮ್ಮಿಕೊಂಡಿದ್ದ ಶ್ರೀ ವೈಶ್ಯಕರ್ಮಣ ಮಹಾಯಜ್ಞ, ಸಾಮೂಹಿಕ ಉಪನಯನ ಮತ್ತು ಸಂಘದ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾನ್ಯ ಬಂಡೆಯನ್ನು ನೂರಾರು ಹುಳಿಏಟಿನಿಂದ ಕೆತ್ತಿ ಸುಂದರ ರೂಪಕೊಟ್ಟು, ದೈವಜ್ಞಾನ ತುಂಬುವ ಕೈಚಳಕ ವಿಶ್ವಕರ್ಮರಲ್ಲಿದೆ. ಆ ಕೆತ್ತಲ್ಪಟ್ಟಿರುವ ನೂರಾರು ಮೂರ್ತಿಗಳನ್ನು ಮಠ-ಮಂದಿರ, ಮನೆಗಳಲ್ಲಿ ಪ್ರತಿಷ್ಠಾಪಿಸಿ ಕೈಮುಗಿಯುವ ಸಂಸ್ಕೃತಿಗೆ ಪ್ರೇರಿತರು, ಹೀಗಾಗಿ ದೈವದ ಸೇವೆಯಲ್ಲಿ ವಿಶ್ವಕರ್ಮರ ಕೊಡುಗೆ ಶ್ಲಾಘನೀಯ ಎಂದರು.



ಅಮರಶಿಲ್ಪಿ ಜಕಣಾಚಾರಿಯ ಬೇಲೂರು ಹಳೇಬೀಡು ಕೆತ್ತನೆ ನೋಡಲು ಎರಡು ಕಣ್ಣುಗಳು ಸಾಲದು. ಈ ವಿಶಿಷ್ಟ ಶಿಲ್ಪಕಲೆ ಸವಿಯಲು ಪ್ರಪಂಚದ ವಿವಿಧ ಮೂಲೆಗಳಿಂದ ಭೇಟಿ ನೀಡುತ್ತಾರೆ. ಅದರಂತೆ ವಿಜಯ ನಗರ ಸಾಮ್ರಾಜ್ಯ, ಪುರಾತನ ದೇವಾಲಯಗಳಲ್ಲಿ ಯಾವುದೇ ತಾಂತ್ರಿಕತೆ ಇಲ್ಲದ ವೇಳೆಯಲ್ಲಿ ಕೇವಲ ಮೆದುಳಿನ ಶಕ್ತಿಯಿಂದಲೇ ಭವ್ಯ ರೂಪು ನೀಡಿದ್ದಾರೆ ಎಂದರು.

ಪ್ರಸ್ತುತ ಶ್ರೀಲೇಖಾ ಟಾಕೀಸ್ ಸಮೀಪ ಸಂಘದ ಕಟ್ಟಡವು ಅರ್ಧಬರ್ಧ ಸ್ಥಿತಿಯಲ್ಲಿದೆ. ಈ ಭವನದ ಅಭಿವೃದ್ಧಿಗೆ ನಗರಸಭಾದ ಆಡಳಿತದಲ್ಲಿ ಅನುದಾನವು ಕಾಯ್ದಿರಿಸಿದ್ದು, ಸದ್ಯದಲ್ಲೇ ಅನುದಾನ ಬಿಡುಗಡೆಗೊಳಿಸಿ, ಮುಂದಿನ ವಾರ್ಷಿಕೋತ್ಸವ ಕಾರ್ಯಕ್ರಮದ ವೇಳೆಗೆ ಕಟ್ಟಡದ ಸಂಪೂರ್ಣ ಕಾಮಗಾರಿ ಪೂರೈಸಿ ಸಮಾಜಕ್ಕೆ ಅರ್ಪಿಸಲಾಗುವುದು ಎಂದು ಭರವಸೆ ನೀಡಿದರು.

ಚನ್ನಗಿರಿಯ ಸಾವಿತ್ರಿ ಪೀಠದ ಶ್ರೀ ಶಂಕರಾತ್ಮನಂದ ಸರಸ್ವತಿ ಮಹಾಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ, ಎಳೆವಯಸ್ಸಿನಿಂದಲೇ ಮಕ್ಕಳಿಗೆ ಸನಾತನ ಸಂಸ್ಕೃತಿಯನ್ನು ಪಾಲಕರು ಬಿತ್ತಿದರೆ, ಭವಿಷ್ಯದಲ್ಲಿ ಹಿಂದೂ ಪರಂಪರೆ, ಸನಾತನ ಧರ್ಮವನ್ನು ಉಳಿಸಿ ಬೆಳೆಸಲು ಸಾಧ್ಯ ಎಂದು ಕರೆ ನೀಡಿದರು.

ವಿಶ್ವಕರ್ಮ ಸಮುದಾಯದಲ್ಲಿ ಹಲವಾರು ಉಪಜಾತಿಗಳಿವೆ. ಎಲ್ಲವೂ ಕೂಡಾ ವಿಶ್ವಕರ್ಮ ಜನಾಂಗದ ಭಾಗವಾಗಿದೆ ಎಂದ ಅವರು, ಈ ವೈಶ್ವಕರ್ಮಣ ಯಜ್ಞವು ಲೋಕಕಲ್ಯಾಣಾರ್ಥ ಹಾಗೂ ಜನತೆಯಲ್ಲಿ ಸಾಮರಸ್ಯ ಮೂಡಿಸುವ ನಿಟ್ಟಿನಲ್ಲಿ ಜರುಗಿಸಲಾಗಿದೆ ಎಂದು ತಿಳಿಸಿದರು.

ಜಿ.ಪಂ. ಮಾಜಿ ಅಧ್ಯಕ್ಷ ಎ.ಎನ್.ಮಹೇಶ್ ಮಾತನಾಡಿ, ಸಣ್ಣ ಸಮಾಜಗಳಲ್ಲಿ ಕಾಳೆಯುವ ಸಂಸ್ಕೃತಿಯಿದೆ, ಹೀಗಾಗಿ ಸಮಾಜವನ್ನು ಮುನ್ನೆಲೆಗೆ ತರುವ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಾಗಿ ಮುನ್ನಡೆದರೆ ಆರ್ಥಿಕ ಮತ್ತು ಸದೃಢವಾಗಿ ಸಮಾಜವು ಬೆಳವಣಿಗೆ ಹೊಂದಲು ಸಾಧ್ಯವಾಗಲಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ವಿಶ್ವಬ್ರಾಹ್ಮಣ ಸಮಾಜ ಸೇವಾ ಸಭಾದ ಅಧ್ಯಕ್ಷ ಹೆಚ್.ಆರ್. ಉಮಾಶಂಕರ್ ವಿಶ್ವಕರ್ಮ ಸಮಾಜ ಸ್ಥಾಪನೆಗೆ ಹಲವಾರು ಹಿರಿಯರ ಕ 'ೊಡುಗೆಯಿದೆ. ಜೊತೆಗೆ ಸಮಾಜದ ಏಳಿಗೆಗೆ ಶಕ್ತಿಮೀರಿ ಕೆಲಸವು ಆಗಿವೆ. ಆದರೆ ಅನೇಕ ವರ್ಷಗಳು ಕಳೆದರೂ ಭವನ ಪೂರ್ಣಗೊಳ್ಳದಿರುವುದು ಬೇಸರ ತಂದಿದ್ದು, ಈ ಬಗ್ಗೆ ಶಾಸಕರು ಶೀಘ್ರವೇ ಗಮನಹರಿಸಿ ಭವನ ಪೂರ್ಣಕ್ಕೆ ಅನುದಾನ ಒದಗಿಸಿಕೊಡಬೇಕು ಎಂದು ಮನವಿ ಮಾಡಿದರು.

ಇದೇ ವೇಳೆ ಮುಂಜಾನೆಯಿಂದ ನೂರಾರು ಭಕ್ತಾದಿಗಳ ಸಮ್ಮುಖದಲ್ಲಿ ಯಜ್ಞ ಪೂರ್ಣಗೊಂಡಿತು. ತದ ನಂತರ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಸುಮಾರು 20 ವಟುಗಳಿಗೆ ಸಾಮೂಹಿಕ ಉಪ ನಯನ ಜರುಗಿಸಲಾಯಿತು.

ಕಾರ್ಯಕ್ರಮದಲ್ಲಿ ವಿ.ಬ್ರಾ.ಸ.ಸೇವಾ ಸಭಾದ ಗೌರವಾಧ್ಯಕ್ಷ ಚೇತನ್‌ಕುಮಾರ್, ನಿಕಟಪೂರ್ವ ಅಧ್ಯಕ್ಷ ಎಂ.ಜೆ.ಮಹೇಶ್‌ಆಚಾರ್, ವಿಶ್ವಕರ್ಮ ಸಹಕಾರ ಸಂಘದ ಅಧ್ಯಕ್ಷ ಬಿ.ಪಿ.ರತೀಶ್, ಜಿಲ್ಲಾ ವಿಶ್ಚಕರ್ಮ ಮಹಿಳಾ ಸಂಘದ ಅಧ್ಯಕ್ಷೆ ಮಂಜುಳಾ ಭೀಮಾಚಾರ್, ಸೇವಾರತ್ನ ಪುರಸ್ಕೃತ ಕೃಷ್ಣಮೂರ್ತಿ, ವಿ.ಸ.ಅ. ನಿಗಮದ ಸದಸ್ಯ ಚಿದಂಬರ್, ಕೆನರಾ ಬ್ಯಾಂಕ್ ಮೌಲ್ಯಮಾಪಲಕರ ಸಂಘದ ರಾಜ್ಯಾಧ್ಯಕ್ಷ ರುದ್ರಯ್ಯ ಆಚಾರ್, ಸಮಾಜದ ಮುಖಂಡರುಗಳಾದ ದಿವಾಕರ, ಬಿ. ಚಂದ್ರಶೇಖರ್, ಮಹೇಂದ್ರಚಾರ್, ನವೀನ್‌ಕುಮಾರ್ ಆಚಾರ್ಯ, ತೀರ್ಥಾಚಾರ್ ಮತ್ತಿತರ ರು ಉಪಸ್ಥಿತರಿದ್ದರು.

## ಅಕ್ರಮವಾಗಿ ಕಟ್ಟಡ ನಿರ್ಮಿಸಿಕೊಂಡಿರುವವರ ವಿರುದ್ಧ ಕ್ರಮ ಕೈಗೊಳ್ಳಲು ಆಗ್ರಹ

**ಭದ್ರಾವತಿ:** ನಗರಸಭೆ ವ್ಯಾಪ್ತಿಯ ಜನ್ನಾಪುರ, ಫಿಲ್ಟರ್ ಶೆಡ್, ಸರ್ವೆ ನಂ. 7ರಲ್ಲಿ ಕಾನೂನು ಬಾಹಿರವಾಗಿ ನಿರ್ಮಿಸಿರುವ ಕಟ್ಟಡದ ಜಾಗಕ್ಕೆ ವಿಐಎಸ್‌ಎಲ್ ನಗರಾಡಳಿತ ವತಿಯಿಂದ ಸರ್ವೆ ನಡೆಸಿ ಜಾಗದ ಬಗ್ಗೆ ಸ್ಪಷ್ಟ ಮಾಹಿತಿ ನೀಡಿ ಅಕ್ರಮವಾಗಿ ಕಟ್ಟಡ ನಿರ್ಮಾಣ ಮಾಡಿರುವವರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಆಗ್ರಹಿಸಿ ಸೋಮವಾರ ಧರಣಿ ಸತ್ಯಾಗ್ರಹ ನಡೆಸಲಾಯಿತು. ಫಿಲ್ಟರ್‌ಶೆಡ್ ನಾಗರಿಕರ ಹಿತರಕ್ಷಣಾ ಸಮಿತಿ ನೇತೃತ್ವದಲ್ಲಿ ಧರಣಿ ಸತ್ಯಾಗ್ರಹ ನಡೆಸಿದ ನಿವಾಸಿಗಳು ಫಿಲ್ಟರ್‌ಶೆಡ್‌ನಲ್ಲಿ 30*80 ಅಳತೆಯಲ್ಲಿ ಕಾನೂನು ಬಾಹಿರವಾಗಿ ಎರಡು ಅಂತಸ್ತಿನ ಕಟ್ಟಡ ನಿರ್ಮಾಣವಾಗಿದ್ದು, ಈ ಜಾಗ-ಕ್ಕೆ ಸಂಬಂಧಪಟ್ಟಂತೆ ಪಹಣಿಯಲ್ಲಿ ವಿಐಎಸ್‌ಎಲ್ ಮತ್ತು ಗೋಮಾಳ ಜಾಗ ಎಂದು ನಮೂದಾಗಿರುತ್ತದೆ. ಈ ವಿಚಾರಕ್ಕೆ ಸಂಬಂಧಪಟ್ಟಂತೆ ತಾಲೂಕು ಆಡಳಿತ ಮತ್ತು ವಿಐಎಸ್‌ಎಲ್ ನಗರಾಡಳಿತ ವತಿಯಿಂದ ಸ್ಥಳ ಪರಿಶೀಲಿಸಿ ಫೆ.28 ರಂದು ಜಂಟಿ ಸರ್ವೆ ನಡೆಸುವ ಸಂದರ್ಭದಲ್ಲಿ ಸ್ಥಳಕ್ಕೆ ಆಗಮಿಸಿದ ವಿಐಎಸ್‌ಎಲ್ ಕಾರ್ಖಾನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿವಿಲ್ ಇಂಜಿನಿಯರ್ ನಂದನ್‌ರವರು ಕಟ್ಟಡ ನಿರ್ಮಾಣವಾಗಿರುವ ಜಾಗ ವಿಐಎಸ್‌ಎಲ್ ಸೇರಿದ್ದು ಎಂದು ಮೌಖಿಕವಾಗಿ ನಮಗೆ ತಿಳಿಸಿರುತ್ತಾರೆಂದು ಆರೋಪಿಸಿದರು. ವಿಐಎಸ್‌ಎಲ್ ನಗರಾಡಾಳಿತ ಕಛೇರಿಯವರು ತಮ್ಮ ವ್ಯಾಪ್ತಿಗೊಳಪಡುವ ಜಾಗಗಳಲ್ಲಿ ವ್ಯಾಪಾರಿಗಳಿಗೆ, ಬಡ ನಾಗರಿಕರಿಗೆ ಸಣ್ಣಪುಟ್ಟ ವ್ಯಾಪಾರ ಮಾಡುವುದಕ್ಕೂ ಕೂಡ ಅವಕಾಶ ಮಾಡಿಕೊಡುವುದಿಲ್ಲ.

## ಸಜ್ಜನಿಕೆ ರಾಜಕಾರಣ-ಭ್ರಷ್ಟಾಚಾರರಹಿತ ಆಡಳಿತ ಸ್ಥಾಪನೆ: ಹೊಸ ಪಕ್ಷದ ಉದ್ದೇಶ: ಕೋಡಿಹಳ್ಳಿ

**ಶಿವಮೊಗ್ಗ:** ಸಜ್ಜನಿಕೆಯ ರಾಜಕಾರಣದ ಸ್ಥಾಪನೆ ಮತ್ತು ಭ್ರಷ್ಟಾಚಾರ ರಹಿತ ಆಡಳಿತದ ಸ್ಥಾಪನೆ ತಮ್ಮ ಹೊಸ ಪಕ್ಷದ ಉದ್ದೇಶ ಎಂದು ರಾಜ್ಯ ರೈತ ಸಂಘದ ಅಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಘೋಷಿಸಿದರು.

ಭಾನುವಾರ ನಗರದಲ್ಲಿ ನವ ಕರ್ನಾಟಕ ನಿರ್ಮಾಣ ಆಂದೋಲನದ ಶಿವ ಮೊಗ್ಗ ಜಿಲ್ಲಾ ಘಟಕದಿಂದ ಆಯೋಜಿಸಿದ್ದ ಜನರ ನಡುವೆ ಜನತಾ ಪ್ರಣಾ ಳಿಕೆ ಚರ್ಚೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದರು.

ರೈತ ಚಳವಳಿ, ದಲಿತ ಚಳವಳಿ, ಕನ್ನಡ ಭಾಷಾ ಚಳವಳಿ, ಮಹಿಳಾ ಚಳ ವಳಿ, ವಿದ್ಯಾರ್ಥಿ-ಯುವಜನರ ಚಳವಳಿಗಳು ರೂಪಿಸುವ ಪ್ರಾದೇಶಿಕ ರಾಜ ಕೀಯ ಪಕ್ಷದ ಮುನ್ನೋಟವೇ ಈ ಜನತಾ ಪ್ರಣಾಳಿಕೆ ಚರ್ಚೆ ವಿಷಯ ವಾಗಿದೆ ಎಂದ ಅವರು, 1956ರಿಂದ ಇಲ್ಲಿಯ ತನಕ ಕರ್ನಾಟಕವನ್ನು ರಾಷ್ಟ್ರೀಯ ಪಕ್ಷಗಳಾದ ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳು ಆಳುತ್ತಾ ಬಂದಿವೆ. ಈ ನಾಡಿನ ರೈತರು, ಸಾಹಿತಿಗಳು, ಮಹಿಳೆಯರು, ಕಾರ್ಮಿಕರು, ವಿದ್ಯಾರ್ಥಿಗಳು, ಪರಿಸರವಾದಿಗಳು, ಅಂಗನವಾಡಿ-ಆಶಾ ಕಾರ್ಯಕರ್ತೆ-ಯರು, ಪೌರ ಕಾರ್ಮಿಕರೆಲ್ಲರೂ ತಮ್ಮ ಹಕ್ಕು ಮತ್ತು ಕನಿಷ್ಠ ಸವಲತ್ತುಗಳಿಗಾಗಿ ನಿರಂ ತರವಾಗಿ ಬೀದಿಗಿಳಿದು



ಹೋರಾಡುತ್ತಲೇ ಬಂದಿದ್ದರೂ ಯಾವುದೇ ಸಮಸ್ಯೆಗಳು ಬಗೆಹರಿದಿಲ್ಲ ಎಂದು ಕಟುವಾಗಿ ಟೀಕಿಸಿದರು. ಸ್ಥಳೀಯ ಉದ್ದಿಮೆಗಳೆಲ್ಲವೂ ಇಂದು ದಿವಾಳಿಯಾಗಿ ಬಾಗಿಲು ಮುಚ್ಚಿವೆ. ಅಲ್ಲದೆ ಸರ್ಕಾರಗಳು ದಿಢೀರ್ ಎಂದು ಜಾರಿಗೆ ತಂದ ರೂಪಾಯಿ ಅಮಾನ್ಯೀಕರಣ ಮತ್ತು ಜಿ.ಎಸ್.ಟಿ.ಯ ಫಲವಾಗಿ ಸಾವಿರಾರು ಸಣ್ಣ ಉದ್ದಿಮೆಗಳು ಬಂದ್ ಆಗಿ ಸಾವಿರಾರು ಉದ್ಯಮಗಳು ದಿವಾಳಿ ಆಗಿ ಅನೇಕರು ತಮ್ಮ ಪ್ರಾಣವನ್ನೂ ಕಳೆದುಕೊಂಡರು ಎಂದು ತಿಳಿಸಿದರು. ಜನತಾ ಪ್ರಣಾಳಿಕೆ ಅನುಷ್ಠಾನಕ್ಕೆ ತರಲು ರಾಜಕೀಯ ಕಾರ್ಯವನ್ನು ಆರಂಭಿ ಸಲಾಗುತ್ತಿದೆ. 2028ರಲ್ಲಿ ದಿಲ್ಲಿ ಹೈಕಮಾಂಡ್‌ನಿಂದ ಮುಕ್ತವಾದ ಕರ್ನಾಟ ಕದ ಶ್ರೇಯೋಭಿವೃದ್ಧಿಗೆ ಬದ್ಧವಾದ ಪಕ್ಷವೊಂದರ ಮೂಲಕ ಕನ್ನಡ ಜನ ತೆಯು ತಮ್ಮ ನಾಡನ್ನು ತಾವೇ ಆಳಬೇಕೆಂಬುದು ನಮ್ಮೆಲ್ಲರ ಆಶಯ ಮತ್ತು ಧ್ಯೇಯವಾಗಿದೆ ಎಂದರು.

ಸಮಾರಂಭದಲ್ಲಿ ಮುಖಂಡರಾದ ಎಂ.ಗೋಪಿನಾಥ್, ಮಂಜುನಾಥ ಪಾಟೀಲ್, ಉಮೇಶ್ ಪಾಟೀಲ್, ಎನ್. ಮೂರ್ತಿ, ಗುತ್ಯಪ್ಪ ಗಾಮ, ಲೋಕೇಶ್, ಎ.ಡಿ.ಶಿವಪ್ಪ ಮೊದಲಾದವರಿದ್ದರು.

## ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾವಣೆ ಮಾಡಲಿ




**ಜಗಳೂರು:** ಜಗಳೂರು ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಜಗಳೂರು ತಾಲೂಕು ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಅರಿವು ಕೇಂದ್ರದ ಮೇಲ್ವಿಚಾರಕರ ಸಭೆಯನ್ನು ನಡೆಸಲಾಯಿತು. ಸಭೆಯಲ್ಲಿ ಜಿಲ್ಲಾಧ್ಯಕ್ಷ ಪಲ್ಲಾಗಟ್ಟೆ ನಾಗಪ್ಪ ಮಾತನಾಡಿ ಕಾನೂನಾತ್ಮಕವಾದ ಹೋರಾಟದ ಬಗ್ಗೆ ಹರಿಯರ್ಸ್ ಪಡೆಯುವ ಬಗ್ಗೆ ಮತ್ತು ಮರಳಿ ಮಾತೃ ಇಲಾಖೆಯಾದ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾವಣೆ ಮಾಡುವ ಬೇಕು. ಗ್ರಾಮ ಪಂಚಾಯತಿಯವರು ಸಮಯಕ್ಕೆ ಸರಿಯಾಗಿ ಪತ್ರಿಕೆಯ ಹಣವನ್ನು ನೀಡಬೇಕು. ಇದರ ಬಗ್ಗೆ ಕುಲಂಕುಶವಾಗಿ ಇಲಾಖೆ ಚರ್ಚೆ ಮಾಡಬೇಕು ಎಂದು ಹೇಳಿದರು. ತಾಲೂಕ ಅಧ್ಯಕ್ಷರಾದ ಗುತ್ತಿದುರ್ಗ ನೇತ್ರಾವತಿ ಹೋಬಳಿ ಮಟ್ಟದಲ್ಲಿ ಗ್ರಂಥಾಲಯ ಕಟ್ಟಡಗಳು ಶಿಥಿಲಗೊಂಡಿವೆ. ಗ್ರಂಥಾಲಯಕ್ಕೆ ಮೂಲ ಸೌಕರ್ಯ ಇಲ್ಲ. ಕುರ್ಚಿ ಟೇಬಲ್ ಗಳನ್ನು ನೀಡಬೇಕು ಎಂದು ಹೇಳಿದರು. ನಂತರ ಜಗಳೂರು ತಾಲೂಕು ಗ್ರಂಥಾಲಯ ಮೇಲ್ವಿಚಾರಕರಿಗೆ ಸದಿಲ್ವಾರ್ ಶುಚಿಗಾರರ ಭತ್ಯೆಯನ್ನು ಕೊಡುವ ಬಗ್ಗೆ ತಾಲೂಕು ಪಂಚಾಯತ್ ಇಓ ಕೆಂಚಪ್ಪ ಇವರ ಅನುಪಸ್ಥಿತಿಯಲ್ಲಿ ಎಡಿ ಮರಳುಸಿದ್ದಪ್ಪ ಅವರಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸದ ಮೇಲೆ ಜಿಲ್ಲಾ ಅಧ್ಯಕ್ಷರಾದ ಜಿ ನಾಗಪ್ಪ ಪಲ್ಲಾಗಟ್ಟಿ ಮಾತನಾಡಿ ಜಗಳೂರು ತಾಲೂಕ್ ಎಲ್ಲಾ ಗ್ರಾಮ ಪಂಚಾಯತಿ ಗ್ರಂಥಾಲಯದ ಮೇಲ್ವಿಚಾರಕರು ಆರ್ ಡಿ ಪಿ ಆರ್ ಇಲಾಖೆಯ ನಿರ್ದೇಶಕರಿಗೂ ಆರ್ ಡಿ ಪಿ ಆರ್ ಮಂತ್ರಿಗಳಾದ ಪ್ರಿಯಾಂಕ ಖರ್ಗೆವರಿಗೂ ಮರಳಿ ಮಾತೃ ಇಲಾಖೆಗೆ ಹೋಗುವ ಬಗ್ಗೆ ಪತ್ರ ಚಳುವಳಿಯನ್ನು ಪತ್ರದ ಮೂಲಕ ಬರೆದು ಕಳಿಸಬೇಕೆಂದು ಕರೆ ನೀಡಬೇಕು ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ರಂಗಯ್ಯ ಜಿಲ್ಲಾ ಕಮಿಟಿಯ ಸದಸ್ಯರಾದ ಹಾಲಪ್ಪ ಜಿಲ್ಲಾ ಸಂಘದ ಗೌರವಾಧ್ಯಕ್ಷರಾದ ಕೃಷ್ಣಪ್ಪ ಸೇರಿದಂತೆ ಸದಸ್ಯರು ಹಾಜರಿದ್ದರು.

## ಉಕ್ಕಡಗಾತ್ರಿ ಗಮನ ಸೆಳೆದ ಕುಸ್ತಿ ಪಂದ್ಯಾವಳಿ



**ಮಲೇಬೆನ್ನೂರು:** ಸಮೀಪದ ಉಕ್ಕಡಗಾತ್ರಿ ಅಜ್ಜಯ್ಯನ ಮಹೋತ್ಸವ ಅಂಗವಾಗಿ ಎಂದಿನಂತೆ ಜವಳ, ಹರಕೆ, ತುಲಾಭಾರ ಜೊತೆಗೆ ಕುಸ್ತಿ ಪಂದ್ಯಾವಳಿ ಗಮನ ಸೆಳೆಯಿತು. ಸಂಪ್ರದಾಯದಂತೆ ಕುಸ್ತಿ ಪಂದ್ಯಾವಳಿ ರಾಜ್ಯ ಮತ್ತು ಹೊರ ರಾಜ್ಯಗಳಿಂದ ಕುಸ್ತಿ ಪಟುಗಳು ಜಾತ್ರಾ ಮಹೋತ್ಸವಕ್ಕೆ ಬಂದಿಳಿಯುತ್ತಾರೆ. ಇಂದು ಸಹ ಕುಸ್ತಿ ಪಟುಗಳು ಗಮನ ಸೆಳೆದರು. ಮಂಗಳವಾರ ಕೊನೆಯ ಸುತ್ತಿನ ಕುಸ್ತಿ ಪಂದ್ಯಾವಳಿ ಇರುತ್ತದೆ. ಜಾತ್ರಾ ಮಹೋತ್ಸವದ ಅಂಗವಾಗಿ ಅಜ್ಜಯ್ಯನಿಗೆ ಅಭಿಷೇಕ, ವಿಶೇಷ ಪೂಜೆ, ಪೂಜಾಲಂಕಾರ ಮಾಡಲಾಗಿತ್ತು. ಎಸ್ ಎಸ್ ಕೇರ್ ಟ್ರಸ್ಟ್ ದಾವಣಗೆರೆ ,ಜೆ ಜೆ ಎಂ ವೈದ್ಯಕೀಯ ಮಹಾವಿದ್ಯಾಲಯ, ಬಾಪೂಜಿ ಆಸ್ಪತ್ರೆ ಹಾಗೂ ಕಾಲೇಜ್ ಆಫ್ ಡೆಂಟಲ್ ಸೈನ್ಸ , ಶ್ರೀ ಕರಿಬಸವೇಶ್ವರ ಗದ್ದಿಗೆ ಟ್ರಸ್ಟ್ ಇವರುಗಳ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಇರುತ್ತದೆ. ಗ್ರಾಮಸ್ಥರು, ಭಕ್ತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಟ್ರಸ್ಟ್ ಕಮೀಟಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆನೆ ದಾಳಿಯಲ್ಲಿ ಮೃತಪಟ್ಟ ಯುವಕನ ಕುಟುಂಬಕ್ಕೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸಾಂತ್ವನ

**ಬೇಲೂರು:** ಕಳೆದ ಕಾಡಾನೆ ತುಳಿತಕ್ಕೆ ಬಲಿಯಾದ ಬೇಲೂರು ತಾಲೂಕು ಗುಜ್ಜನಹಳ್ಳಿ ಗ್ರಾಮದ ಅನಿಲ್ ಅರಸು ಮನೆಗೆ ಅರಣ್ಯ ಸಚಿವ ಈಶ್ವರ ಖಂಡ್ರೆ ಭೇಟಿ ನೀಡಿ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು.

ಅನಿಲ್ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ನಂತರ ಮಾತನಾಡಿದ ಸಚಿವರು, ಕಳೆದ ಹಲವು ವರ್ಷಗಳಿಂದ ಮಾನವ-ಪ್ರಾಣಿ ಸಂಘರ್ಷ



ಹೆಚ್ಚಾಗಿದೆ. ನಾನು ಸಚಿವನಾದ ಬಳಿಕ ಹಾಸನಕ್ಕೆ ಕಾಡಾನೆ ಸಮಸ್ಯೆ ಹಿನ್ನೆಲೆಯಲ್ಲಿ ನಾಲ್ಕು ಬಾರಿ ಬಂದಿದ್ದೇನೆ.

ಬೇಲೂರು ತಾಲ್ಲೂಕಿನಲ್ಲಿ ಈ ತಿಂಗಳಲ್ಲಿ 2 ಸಾವು ಉಂಟಾಗಿರುವುದು ನನಗೂ ನೋವು ತಂದಿದೆ. ಈ ಬಗ್ಗೆ ಸ್ಥಳೀಯ ಶಾಸಕ ಸುರೇಶ್ ಮತ್ತು ಸಂಸದ ಶ್ರೇಯಸ್ ಪಟೇಲ್ ಇಬ್ಬರೂ ಇದರ ಬಗ್ಗೆ ಗಮನ ಸೆಳೆದಿದ್ದಾರೆ. ಹಾಸನ ಜಿಲ್ಲೆಯಲ್ಲಿ 100 ಕಾಡಾನೆಗಳಿವೆ, ಅವುಗಳಲ್ಲಿ ನಾಲ್ಕು ಪುಂಡಾನೆಗಳಿವೆ ಎಂದು ಅರಣ್ಯ ಇಲಾಖೆ ವರದಿ ನೀಡಿದೆ. ಶೀಘ್ರವೇ ಪುಂಡಾನೆಗಳನ್ನು ಸೆರೆ ಹಿಡಿಯಲು ಕಾರ್ಯಾಚರಣೆ ನಡೆಸಲು ಸನ್ನದ್ಧವಾಗಿದ್ದೇವೆ.

ಚಿಕ್ಕಮಗಳೂರು, ಹಾಸನ ಮತ್ತು ಮಡಿಕೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಆನೆ ಹಾವಳಿ ನಿಯಂತ್ರಣ-ಕ್ಕೆ ಎರಡು ಸಾವಿರ ಹೆಕ್ಟೇರ್ ಭೂಮಿ ಮೀಸಲಿಟ್ಟಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**